22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 68 | ನವದೆಹಲಿ | ಬೆಲೆ ₹ 10 | ಸೆಪ್ಟೆಂಬರ್ 7, 2024 ಶನಿವಾರ



**ನಾಡಿನ ಸಮಸ್ತ ಜನತೆಗೆ, ಓದುಗರಿಗೆ ಹಿತೈಷಿಗಳಿಗೆ, ಜಾಹೀರಾತುದಾರರಿಗೆ ಗಣೇಶ ಚತುರ್ಥಿಯ ಶುಭಾಶಯಗಳು**

ಶನಿವಾರ ಕಚೇರಿಗೆ ಬಿಡುವು. ಹೀಗಾಗಿ 8-9-2024ರ ಸಂಚಿಕೆ ಪ್ರಕಟವಾಗುವುದಿಲ್ಲ.

- **ಸಂಪಾದಕರು**

# ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಹಂತ-1ಕ್ಕೆ ಚಾಲನೆ

**ಹಾಸನ, ಸೆ.6: ಬಯಲು ಸೀಮೆ ಜನತೆಯ ನೀರಿನ ದಾಹ ನೀಗಿಸುವ ಉದ್ದೇಶದಿಂದ ನಿರ್ಮಿಸಿರುವ ಬಹುನಿರೀಕ್ಷಿತ ಎತ್ತಿನಹೊಳೆ ಯೋಜನೆಗೆ ಗೌರಿ ಹಬ್ಬದ ದಿನವಾದ ಶುಕ್ರವಾರ ಚಾಲನೆ ನೀಡಲಾಯಿತು.**

ಬಹು ನಿರೀಕ್ಷಿತ ಸಮಗ್ರ ಕುಡಿಯುವ ನೀರಿನ ಎತ್ತಿನ ಹೊಳೆ ಯೋಜನೆಯ ಮೊದಲ ಹಂತಕ್ಕೆ ಸಕಲೇಶಪುರ ತಾಲೂಕಿನ ಬೈಕೆರೆ ದೊಡ್ಡನಗರ ಪಂಪ್ ಹೌಸ್ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.ಜಲಸಂಪನೂಲ ಸಚಿವರು ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿಯವರ ಜೊತೆ ಜಂಟಿಯಾಗಿ ಆರತಿ ಬೆಳಗುವ ಮೂಲಕ ಗಮನ ಸೆಳೆದರು. ಬಳಿಕ ದೊಡ್ಡ ಸಾಗರದ ಗ್ರಾಮದ ವಿತರಣಾ ತೊಟ್ಟಿಯ 3 ರಲ್ಲಿ ಟೇಪ್ ಕತ್ತರಿಸಿ ಉದ್ಘಾಟಿಸಿದರು. ಯೋಜನೆಯನ್ನು ಪರಿಶೀಲಿಸುವ ವೇಳೆ ನೀರಿನ ಹರಿವು ಹಾಗೂ ಇತರ ಮಾಹಿತಿಗಳ ಕುರಿತು ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯವರಿಗೆ ಸುದೀರ್ಘ ವಿವರಣೆ ನೀಡಿದರು.ಮಾಜಿ ಮುಖ್ಯಮಂತ್ರಿ ವೀರಪ್ಪಮೊಯ್ಲಿ ಸಚಿವರಾದ ಡಾ. ಜಿ. ಪರಮೇಶ್ವರ್, ಎಂ.ಬಿ. ಪಾಟೀಲ್ ಕೆ.ಜೆ. ಜಾರ್ಜ್, ಕೆ.ಎನ್. ರಾಜಣ್ಣ, ಎನ್.ಎಸ್. ಬೋಸ್ರಾಜ, ಕೆ.ಎಚ್. ಮುನಿಯಪ್ಪ ಹಾಗೂ 5 ತಾಲೂಕುಗಳ ಶಾಸಕರು, ಚುನಾಯಿತ ಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಇದಕ್ಕೂ ಮುನ್ನ 7 ಕಡೆ ಏತ ನೀರಾವರಿ ಯೋಜನೆಗಳಿಗೆ ಸಚಿವರುಗಳು ಚಾಲನೆ ನೀಡಿದರು.ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ, ಚಿಕ್ಕಮಂಗಳೂರು ಜಿಲ್ಲೆಗಳ 29 ತಾಲೂಕುಗಳಿಗೆ ಕುಡಿಯುವ ನೀರು ಹಾಗು ಅಂತರ್ಜಲ ಅಭಿವೃದ್ಧಿಗೆ ಎತ್ತಿನಹೊಳೆ ಯೋಜನೆಗೆ ನೀರನ್ನು ಬಳಕೆ ಮಾಡಲಾಗುತ್ತಿದೆ.ಸಕಲೇಶಪುರ ತಾಲೂಕಿನ ಹೆಬ್ಬನಹಳ್ಳಿಯಲ್ಲಿ ನಡೆದ ಬೃಹತ್ ಸಾರ್ವಜನಿಕ ಸಮಾರಂಭದಲ್ಲಿ ಮುಖ್ಯಮಂತ್ರಿ ಹಾಗೂ ಸಂಪುಟ ಸಚಿವರು ಪಾಲ್ಗೊಂಡಿದ್ದರು. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ 1ನೇ ಹಂತಕ್ಕೆ ಬೈಕೆರೆ ದೊಡ್ಡನಾಗರದಲ್ಲಿ ಇಂದು ಚಾಲನೆ ನೀಡಿ ಮಾತನಾಡಿದ ಅವರು, ಎತ್ತಿನಹೊಳೆ ಯೋಜನೆಯ ಎರಡನೇ ಹಂತ 2027ರ ವೇಳೆಗೆ ಪೂರ್ಣಗೊಳ್ಳಲಿದ್ದು, 7 ಜಿಲ್ಲೆಗಳ ಲಕ್ಷಾಂತರ ಮನೆಗಳಿಗೆ ಕುಡಿಯುವ ನೀರು ತಲುಪುವುದು ಶತಃಸಿದ್ಧ ಎಂದರು.ಈ ಯೋಜನೆಯಿಂದ ಪಶ್ಚಿಮಘಟ್ಟದ ಮೇಲ್ಭಾಗದಲ್ಲಿ ಹರಿಯುವ ಎತ್ತಿನ ಹೊಳೆ, ಕಾಡುಮನೆ ಹೊಳೆ, ಕೇರಿ ಹೊಳೆ ಮತ್ತು ಹೊಂಗದಹಳ್ಳದಿಂದ ಮುಂಗಾರು ಮಳೆ ಅವಧಿಯಲ್ಲಿ 24.01 ಟಿಎಂಸಿ ಪ್ರಮಾಣದ ಪ್ರವಾಹದ ನೀರನ್ನು 7 ಜಿಲ್ಲೆಗಳಿಗೆ ನೀರು ಹರಿಸಲಾಗುತ್ತದೆ.ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ ಹಾಗೂ ಚಿಕ್ಕಮಗಳೂರಿನ ಬರಪೀಡಿತ 29 ತಾಲೂಕುಗಳ 38 ಪಟ್ಟಣ ಪ್ರದೇಶಗಳ ಹಾಗೂ 6,657 ಗ್ರಾಮಗಳ ಸುಮಾರು 75.59 ಲಕ್ಷ ಜನರಿಗೆ ಮತ್ತು ಜಾನುವಾರುಗಳಿಗೆ 14.056 ಟಿಎಂಸಿ ಕುಡಿಯುವ ನೀರನ್ನು ಒದಗಿಸುವುದು ಹಾಗೂ 5 ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಹಾಸನ, ತುಮಕೂರು ವ್ಯಾಪ್ತಿಯಲ್ಲಿ 527 ಕೆರೆಗಳಿಗೆ 9.953 ಟಿಎಂಸಿ ಪ್ರಮಾಣದ ನೀರನ್ನು ಕೆರೆಗಳ ಸಾಮರ್ಥ್ಯದ ಶೇ.50ರಷ್ಟು ತುಂಬಿಸಿ ಅಂತರ್ಜಲ ಮರುಪೂರಣ ಮಾಡುವ ಮಹತ್ವದ ಯೋಜನೆ ಇದಾಗಿದೆ.ಈ ಯೋಜನೆಯ ಮೊದಲ ಹಂತದಲ್ಲಿ 8 ವಿಯರ್ಗಳ ಮೂಲಕ ನೀರನ್ನು ಮೇಲೆತ್ತಲು ನಿರ್ಧಾರ ತೆಗೆದುಕೊಳ್ಳಲಾಗಿತ್ತು. (3ನೇ ಪುಟಕ್ಕೆ)



## ಕಾಂಗ್ರೆಸ್ ಇದ್ದರೆ ಎಲ್ಲವೂ ಸಾಧ್ಯವಯ್ಯ - ಡಿಕೆಶಿ

ದಶಕಗಳ ರಾಜ್ಯದ ಕನಸಾಗಿದ್ದ ಎತ್ತಿನಹೊಳೆ ಯೋಜನೆ ಇದೀಗ ಮೊದಲ ಹಂತದಲ್ಲಿ ಲೋಕಾರ್ಪಣೆಯಾಗಿದ್ದು, ಈ ಬಗ್ಗೆ ಡಿಸಿಎಂ ಡಿಕೆ ಶಿವಕುಮಾರ್ ಪ್ರತಿಕ್ರಿಯಿಸಿದ್ದು, ಇದು ಇತ್ತೀಚಿನ ವರ್ಷಗಳಲ್ಲಿ ಅತಿ ದೊಡ್ಡ ಯೋಜನೆ ಜಾರಿಯಾಗಿರುವುದು ರಾಜ್ಯದ ಜನತೆಗೆ ತುಂಬಾ ಸಂತೋಷ ತಂದಿದೆ ಎಂದು ಹೇಳಿದರು. ಈ ಬಗ್ಗೆ ಮಾತನಾಡಿದ ಅವರು ಇಂದು ಗೌರಿ ಹಬ್ಬದ ದಿನ ಗಂಗೆ ಪೂಜೆ ಮಾಡಲಾಗಿದೆ. ನಮ್ಮ ಸರ್ಕಾರದ ಭಗೀರಥ ಪ್ರಯತ್ನದಿಂದಾಗಿ ಯೋಜನೆ ಜಾರಿಯಾಗಿದೆ. ಈ ಯೋಜನೆ ಜಾರಿ ಸಾಧ್ಯವೇ ಇಲ್ಲ ಎಂದಿದ್ದರು. ಆದರೆ ನಾವು ಸವಾಲಾಗಿ ಸ್ವೀಕಾರ ಮಾಡಿ ಜಾರಿ ಮಾಡಿದ್ದೇವೆ ಎಂದರು. ಈ ಯೋಜನೆ ನಮ್ಮ ಸಂಕಲ್ಪ, ನಮ್ಮ ಪ್ರತಿಷ್ಠೆ ಕೂಡ ಆಗಿತ್ತು. ಅಧಿಕಾರಿ ನೌಕರರು ಯೋಜನೆ ಮಾಡಿದವರು ಎಲ್ಲರ ಪರಿಶ್ರಮ ಇದೆ. ಆದರೆ ಸಿದ್ದರಾಮಯ್ಯ ಅವರು ವಿಶೇಷ ಆಸಕ್ತಿ ತೋರಿ ಈ ಯೋಜನೆಯನ್ನು ಮಾಡಲೇಬೇಕು ಎಂಬ ತೀರ್ಮಾನ ಮಾಡಿ ಜಾರಿ ಮಾಡಿದ್ದಾರೆ ಎಂದು ಡಿ.ಕೆ ಹೇಳಿದರು.



## ಸಿಎಂ-ಡಿಸಿಎಂ ಜಂಟಿಯಾಗಿ ಕಾರ್ಯಕ್ರಮಕ್ಕೆ ಚಾಲನೆ

ಲೋಕಾರ್ಪಣೆ ಸಂಭ್ರಮ-ಎತ್ತಿನಹೊಳೆ ಯೋಜನೆಯ ಉದ್ಘಾಟನೆಯ ಸಂದರ್ಭದಲ್ಲಿ ಹಬ್ಬದ ಸಡಗರ ಸಂಭ್ರಮ ಮನೆ ಮಾಡಿತ್ತು. ಜಲಸಂಪನೂಲ ಸಚಿವರು ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿಯವರ ಜೊತೆ ಜಂಟಿಯಾಗಿ ಆರತಿ ಬೆಳಗುವ ಮೂಲಕ ಗಮನ ಸೆಳೆದರು. ಬಳಿಕ ದೊಡ್ಡ ಸಾಗರದ ಗ್ರಾಮದ ವಿತರಣಾ ತೊಟ್ಟಿಯ 3 ರಲ್ಲಿ ಟೇಪ್ ಕತ್ತರಿಸಿ ಉದ್ಘಾಟಿಸಿದರು. ಯೋಜನೆಯನ್ನು ಪರಿಶೀಲಿಸುವ ವೇಳೆ ನೀರಿನ ಹರಿವು ಹಾಗೂ ಇತರ ಮಾಹಿತಿಗಳ ಕುರಿತು ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯವರಿಗೆ ಸುದೀರ್ಘ ವಿವರಣೆ ನೀಡಿದರು.

ಮಾಜಿ ಮುಖ್ಯಮಂತ್ರಿ ವೀರಪ್ಪಮೊಯ್ಲಿ ಸಚಿವರಾದ ಡಾ. ಜಿ. ಪರಮೇಶ್ವರ್, ಎಂ.ಬಿ. ಪಾಟೀಲ್ ಕೆ.ಜೆ. ಜಾರ್ಜ್, ಕೆ.ಎನ್. ರಾಜಣ್ಣ , ಎನ್.ಎಸ್. ಬೋಸ್‌ರಾಜ, ಕೆ.ಎಚ್. ಮುನಿಯಪ್ಪ ಹಾಗೂ 5 ತಾಲೂಕುಗಳ ಶಾಸಕರು, ಚುನಾಯಿತ ಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಇದಕ್ಕೂ ಮುನ್ನ 7 ಕಡೆ ಏತ ನೀರಾವರಿ ಯೋಜನೆಗಳಿಗೆ ಸಚಿವರುಗಳು ಚಾಲನೆ ನೀಡಿದರು. ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ, ಚಿಕ್ಕಮಂಗಳೂರು ಜಿಲ್ಲೆಗಳ 29 ತಾಲೂಕುಗಳಿಗೆ ಕುಡಿಯುವ ನೀರು ಹಾಗು ಅಂತರ್ಜಲ ಅಭಿವೃದ್ಧಿಗೆ ಎತ್ತಿನಹೊಳೆ ಯೋಜನೆಗೆ ನೀರನ್ನು ಬಳಕೆ ಮಾಡಲಾಗುತ್ತಿದೆ.ಸಕಲೇಶಪುರ ತಾಲೂಕಿನ ಹೆಬ್ಬನಹಳ್ಳಿಯಲ್ಲಿ ನಡೆದ ಬೃಹತ್ ಸಾರ್ವಜನಿಕ ಸಮಾರಂಭದಲ್ಲಿ ಮುಖ್ಯಮಂತ್ರಿ ಹಾಗೂ ಸಂಪುಟ ಸಚಿವರು ಪಾಲ್ಗೊಂಡಿದ್ದರು.

## ಭಾರತದಿಂದ ಅಗ್ಗದ ದರದಲ್ಲಿ ವಿದ್ಯುತ್ ಉತ್ಪಾದನೆ

**- ಭಾರತ ಶಕ್ತಿ ಪರಿವರ್ತನಾ ಶೃಂಗಸಭೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿಕೆ: ಸೌರ ವಿದ್ಯುತ್ ಸ್ಥಾವರಗಳಿಗೆ ಶೇ.76ರಷ್ಟು ಸುಂಕ್ ಇಳಿಸಿ ಉತ್ತೇಜನ**

**ನವದೆಹಲಿ, ಸೆ.6:** ಭಾರತ ಪಿಎಂ ಮೋದಿ ನೇತೃತ್ವದ ಸರ್ಕಾರ ಅಗ್ಗದ ದರದಲ್ಲಿ ವಿದ್ಯುತ್ ಉತ್ಪಾದನೆ ಮಾಡುತ್ತಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದರು.

ನವದೆಹಲಿಯಲ್ಲಿ ಹನಿವೆಲ್ ಮತ್ತು **CNBC-TV18** ಆಯೋಜಿಸಿದ್ದ ಭಾರತ ಶಕ್ತಿ ಪರಿವರ್ತನಾ ಶೃಂಗಸಭೆ ಉದ್ದೇಶಿಸಿ ಮಾತನಾಡಿದರು. ಜಾಗತಿಕವಾಗಿ ಇಂಧನ ಕ್ಷೇತ್ರದಲ್ಲಿ ಶುದ್ಧ ಮತ್ತು ಸುಸ್ಥಿರ ಇಂಧನಕ್ಕಾಗಿ ಭಾರತ ಪ್ರಭಾವಶಾಲಿ ಹೆಜ್ಜೆ ಇರಿಸಿದೆ. ಆರ್ಥಿಕತೆ ಜತೆಗೆ ಪರಿಸರ ಕಾಳಜಿ, ನಿರ್ವಹಣೆಗೆ ಮಹತ್ವ ನೀಡಿದೆ ಎಂದು ಹೇಳಿದರು. ಸೌರ ವಿದ್ಯುತ್ ಸ್ಥಾವರ ಸುಂಕ ಶೇ.76 ಇಳಿಕೆ: ಸೌರ ವಿದ್ಯುತ್ ಉತ್ಪಾದನೆಗೆ ಉತ್ತೇಜನ ನೀಡಲೆಂದು ಭಾರತ ಸರ್ಕಾರ ಗ್ರಿಡ್ ಸಂಪರ್ಕಿತ ಸೌರ ವಿದ್ಯುತ್ ಸ್ಥಾವರಗಳಿಗೆ ಇದ್ದ ಸುಂಕವನ್ನು ಶೇ.76ರಷ್ಟು ಇಳಿಸಿದೆ. 2010-11ರಲ್ಲಿ ರೂ.10.95 ಇದ್ದ ಸುಂಕ 2023-24ರ ಅವಧಿಯಲ್ಲಿ ಕೇವಲ ರೂ.2.60ಗೆ ಇಳಿಸಲಾಗಿದೆ ಎಂದು ತಿಳಿಸಿದರು. ನವೀಕರಿಸಬಹುದಾದ ಇಂಧನ ಕ್ಷೇತ್ರ ಭಾರತೀಯ ಆರ್ಥಿಕತೆಯನ್ನು ಮತ್ತಷ್ಟು ಹೆಚ್ಚಿಸುತ್ತದೆ. (3ನೇ ಪುಟಕ್ಕೆ)






## ನಿತ್ಯ ಪಂಚಾಂಗ 7.09.2024 ಶನಿವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ಉತ್ತರಾಯಣ–ವಸಂತ ಋತು,
ಚಾಂದ್ರಮಾನ, ಭಾದ್ರಪದ ಶುದ್ಧ

ಚೌತಿ, ಚಿತ್ತ ನಕ್ಷತ್ರ,
ಗಣೇಶ ಚತುರ್ಥಿ, ಶ್ರೀಪಾದವಲ್ಲಭ
ಜಯಂತಿ, ಸಂವತ್ಸರಿ, ಮೋತಕಪಲ್ಲಿ ಉತ್ಸವ,
ಬೀದರ್ ಡೊಣಗಾವ್ ಹೌವಾಗಿ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಶೀಘ್ರವೇ ನೀರು ಪೂರೈಕೆಗೆ ಮುನಿಯಪ್ಪ ಆಗ್ರಹ

**ಈ ಯೋಜನೆಯ ಮೂಲಕ ಕುಡಿಯುವ ನೀರು ನಮ್ಮ ಭಾಗಕ್ಕೆ ಶತಾಯಗತಾಯ ಹರಿಸುತ್ತಾರೆ ಎಂಬ ಆಶಾಭಾವನೆಯನ್ನು ಹೊಂದಿದ್ದೇನೆ**




**ಸಕಲೇಶಪುರ, ಸೆ.6:** ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆ.ಎಚ್. ಮುನಿಯಪ್ಪನವರು ಇಂದು ಎತ್ತಿನಹೊಳೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಇವತ್ತಿನ ಕಾರ್ಯಕ್ರಮ ಪಶ್ಚಿಮದಿಂದ ಪೂರ್ವಕ್ಕೆ ನೀರನ್ನು ಹರಿಸುವ ಒಂದು ಮಹತ್ತರ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಚಾಲನೆ ನೀಡಿದ್ದು ಒಂದು ಸಂತಸಕರ ವಿಷಯವಾಗಿದೆ. ಅದರಲ್ಲಿ ವಿಶೇಷವಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರು ಸಾಕಷ್ಟು ಸಮಸ್ಯೆಗಳನ್ನು ಬಗೆಹರಿಸಿ 14 ತಿಂಗಳಲ್ಲಿ ಬಯಲು ಸೀಮೆಯ ಭಾಗದ ಜಿಲ್ಲೆಗಳಾದ ಬೆಂಗಳೂರು ನಗರದ, ಚಿಕ್ಕಬಳ್ಳಾಪುರ, ಕೋಲಾರ ಭಾಗಕ್ಕೆ ನೀರನ್ನು ಹರಿಸಲು ಮುಂದಾಗುತ್ತಾರೆ ಎಂಬ ಆಶಾಭಾವನೆಯನ್ನು ಹೊಂದಿದ್ದಾರೆ ಎಂದರು. ಸಚಿವರಾದ ಎಂಸಿ ಸುಧಾಕರ್, ಕೃಷ್ಣ ಬೈರೇಗೌಡ, ನಾನೂ ಈ ಯೋಜನೆಯನ್ನು ನಮ್ಮ ಬಯಲು ಸೀಮೆಯ ಜಿಲ್ಲೆಗಳಿಗೆ ವೀರಪ್ಪ ಮೊಯಲಿ ಅವರ ನೇತೃತ್ವದಲ್ಲಿ ಹೋರಾಟ ಮಾಡಿದ್ದೇವೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ನಮ್ಮ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಕಲ್ಪಿಸಬೇಕು ಎಂದು ಅವರಲ್ಲಿ ಒತ್ತಾಯ ಮಾಡುತ್ತೇನೆ. ನಮ್ಮ ಬಯಲು ಸೀಮೆ ಭಾಗದ ಜನರಿಗೆ ಬೋರ್‌ವೆಲ್ ಮೂಲಕ 1000 ಅಡಿ ಕೊರೆಸಿದರೂ ನಮಗೆ ನೀರು ಸಿಗಲ್ಲಾ ಸಿಕ್ಕಿದರೂ ಅದು ಫ್ಲೋರೈಡ್‌ನಿಂದ ಕೂಡಿದ್ದು ಅದು ಕುಡಿಯಲು ಯೋಗ್ಯವಾಗಿರುವುದಿಲ್ಲ ಆದ ಕಾರಣ ತಾವು ಈ ಯೋಜನೆಯ ಮೂಲಕ ನಮ್ಮ ಬಯಲುಸೀಮೆ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ನೀರು ಹರಿಸುವ ಕಾರ್ಯ ಶೀಘ್ರದಲ್ಲಿ ಮುಂದುವರಿಸಬೇಕು ಎಂದರು. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ವೀರಪ್ಪ ಮೋಯಲಿ, ಸಚಿವರಾದ ಪರಮೇಶ್ವರ್, ಬೈರತಿ ಸುರೇಶ್, ರಾಜಣ್ಣ, ಎಂಬಿ ಪಾಟೀಲ್, ಹಾಗೂ ಶಾಸಕರು, ಅಧಿಕಾರಿಗಳು ಉಪಸ್ಥಿತರಿದ್ದರು.

## ಕಲಬುರಗಿಯಲ್ಲಿ ಸಂಪುಟ ಸಭೆಗೆ ಅಸ್ತು




**ಕಲಬುರಗಿ, ಸೆ.6:** ಕಲ್ಯಾಣ ಕರ್ನಾಟಕ ಭಾಗದ ಕೇಂದ್ರ ಬಿಂದುವಾಗಿರುವ ತೊಗರಿ ಕಣಜ ಕಲಬುರಗಿಯಲ್ಲಿ ಇದೇ ಸೆ.19ರಂದು ಸಿಎಂ ಸಿದ್ದರಾಮಯ್ಯನವರ ನೇತೃತ್ವದಲ್ಲಿ ರಾಜ್ಯ ಸರ್ಕಾರದ 19ನೇ ಸಚಿವ ಸಂಪುಟ ಸಭೆ ನಡೆಸಲು ನಿರ್ಧರಿಸಲಾಗಿದೆ. ಅಂದು ಸಾಯಂಕಾಲ 4 ಗಂಟೆಗೆ ನಗರದ ಮಿನಿ ವಿಧಾನಸೌಧದಲ್ಲಿರುವ ಪ್ರಾದೇಶಿಕ ಆಯುಕ್ತರ ಕಚೇರಿಯ ಸಭಾಂಗಣದಲ್ಲಿ ಸಚಿವ ಸಂಪುಟ ಸಭೆ ನಡೆಯಲಿದೆ. ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.




# ಪ್ರಥಮ ಬಾರಿ 4 ಬೆಳೆಗೆ ಬೆಂಬಲ ಬೆಲೆ

## ಎಪಿಎಂಸಿ ಕಾಯ್ದೆ ಮರುಸ್ಥಾಪನೆಯಿಂದ ರೈತರಿಗೆ ಹೆಚ್ಚು ಅನುಕೂಲ: ಸಚಿವ ಶಿವಾನಂದ ಪಾಟೀಲ ಹೇಳಿಕೆ



**ಬೆಂಗಳೂರು, ಸೆ.6:** ಎಪಿಎಂಸಿ ಕಾಯ್ದೆ ಮರುಸ್ಥಾಪನೆಯಿಂದ ರೈತರಿಗೆ ಹೆಚ್ಚು ಅನುಕೂಲವಾಗಿದ್ದು, ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಏಕಕಾಲದಲ್ಲಿ ನಾಲ್ಕು ಬೆಳೆಗಳನ್ನು ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಖರೀದಿ ಮಾಡಲಾಗುತ್ತಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು. ವಿಧಾನಸೌಧದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೆಸರುಕಾಳು, ಸೂರ್ಯಕಾಂತಿ, ಸೋಯಾಬಿನ್ ಮತ್ತು ಉದ್ದಿನಕಾಳನ್ನು ಬೆಂಬಲ ಬೆಲೆ ಯೋಜನೆ ಅಡಿ ಖರೀದಿ ಮಾಡಲಾಗುತ್ತಿದೆ. ಸೋಯಾಬಿನ್ ಮತ್ತು ಉದ್ದಿನಕಾಳು ಖರೀದಿ ಪ್ರಕ್ರಿಯೆ ಆರಂಭಿಸಲು ಗುರುವಾರ (5.9.2024) ಆದೇಶ ಹೊರಡಿಸಲಾಗಿದೆ ಎಂದು ತಿಳಿಸಿದರು. ಈಗಾಗಲೇ ಹೆಸರುಕಾಳು ಮತ್ತು ಸೂರ್ಯಕಾಂತಿಯನ್ನು ಬೆಂಬಲ ಬೆಲೆಯಲ್ಲಿ ಖರೀದಿ ಮಾಡಲು ರಾಜ್ಯ ಸರ್ಕಾರ ಖರೀದಿ ಏಜನ್ಸಿಗಳನ್ನು ನೇಮಕ ಮಾಡಿದೆ. ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಲ್ ಸೂರ್ಯಕಾಂತಿ ಮತ್ತು 10 ಕ್ವಿಂಟಲ್ ಹೆಸರುಕಾಳು ಖರೀದಿ ಮಾಡಲಿದೆ. ಎಫ್ ಎ ಕ್ಯೂ ಗುಣಮಟ್ಟದ ಸೋಯಾಬಿನ್ ಗೆ ಕ್ವಿಂಟಲ್ ಗೆ 4,892 ರೂ ಹಾಗೂ ಉದ್ದಿನ ಕಾಳಿಗೆ ಕ್ವಿಂಟಲ್ ಗೆ 7,400 ರೂ. ಬೆಲೆ ನಿಗದಿಪಡಿಸಲಾಗಿದೆ. ಬೆಂಬಲ ಬೆಲೆಯಲ್ಲಿ ಸುಮಾರು 10 ಲಕ್ಷ ಕ್ವಿಂಟಲ್ ಸೋಯಾಬಿನ್ ಮತ್ತು 2 ಲಕ್ಷ ಕ್ವಿಂಟಲ್ ಉದ್ದಿನಕಾಳು ಖರೀದಿ ಮಾಡಲಾಗುವುದು.

2024–25ನೇ ಸಾಲಿನಲ್ಲಿ 4.10 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 4.72 ಲಕ್ಷ ಮೆಟ್ರಿಕ್ ಟನ್ ಸೋಯಾಬಿನ್ ಹಾಗೂ 0.77 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 0.40 ಲಕ್ಷ ಮೆಟ್ರಿಕ್ ಟನ್ ಉದ್ದಿನಕಾಳು ಇಳುವರಿ ನಿರೀಕ್ಷೆ ಮಾಡಲಾಗಿತ್ತು ಎಂದು ತಿಳಿಸಿದರು. ಎಫ್ ಎಕ್ಯೂ ಗುಣಮಟ್ಟದ ಹೆಸರುಕಾಳಿಗೆ ಪ್ರತಿ ಕ್ವಿಂಟಲ್‌ಗೆ 8,682 ರೂ. ಹಾಗೂ ಸೂರ್ಯಕಾಂತಿಗೆ 7,280 ರೂ. ನಿಗದಿಪಡಿಸಲಾಗಿದೆ.

ಹೆಸರುಕಾಳು ಖರೀದಿಗೆ 172 ಖರೀದಿ ಕೇಂದ್ರ ಗುರುತಿಸಲಾಗಿದ್ದು, ಇದುವರೆಗೂ 1982 ರೈತರು ನೋಂದಣಿ ಮಾಡಿಸಿಕೊಂಡಿದ್ದಾರೆ. ಸೂರ್ಯಕಾಂತಿ ಖರೀದಿಗೆ 19 ಖರೀದಿ ಕೇಂದ್ರ ಗುರುತಿಸಲಾಗಿದ್ದು, 461 ರೈತರು ನೋಂದಣಿ ಮಾಡಿಕೊಂಡಿದ್ದಾರೆ. ಕೊಬ್ಬರಿ ಖರೀದಿಯಲ್ಲೂ ಈ ಬಾರಿ ಪ್ರಮುಖ ಪಾತ್ರ ವಹಿಸಲಾಗಿದ್ದು, ಇದೇ ಮೊದಲ ಬಾರಿಗೆ ಮಿಲ್ಲಿಂಗ್ ಕೊಬ್ಬರಿಯನ್ನು ಬೆಂಬಲ ಬೆಲೆಯಲ್ಲಿ ಖರೀದಿ ಮಾಡಲಾಗಿದೆ ಎಂದು ತಿಳಿಸಿದರು. ಎಪಿಎಂಸಿ ಯಾರ್ಡ್ ಗಳಲ್ಲಿ 150 ಕೋಟಿ ರೂ. ವೆಚ್ಚದಲ್ಲಿ 14ರಿಂದ 15 ಶೀಥಲ ಗೃಹ (ಕೋಲ್ಡ್ ಸ್ಟೋರೇಜ್)ಗಳನ್ನು ಎಪಿಎಂಸಿಗಳಲ್ಲಿ ನಿರ್ಮಾಣ ಮಾಡಲಾಗುವುದು. ರಾಜ್ಯದ ನಾಲ್ಕು ಕಂದಾಯ ವಿಭಾಗಗಳಲ್ಲಿ ವಿಭಾಗಾವಾರು ವಿಜಿಲೆನ್ಸ್ ಸೆಲ್‌ಗಳನ್ನು ರಚಿಸಲಾಗಿದೆ. ವಿಜಿಲೆನ್ಸ್ ರಚನೆ ಪರಿಣಾಮ ಎಪಿಎಂಸಿ ಆದಾಯ ಕೂಡ ಹೆಚ್ಚಾಗಿದೆ, ಈ ವರ್ಷ 380ರಿಂದ 400 ಕೋಟಿ ರೂ. ಆದಾಯ ನಿರೀಕ್ಷೆ ಮಾಡಲಾಗಿದ್ದು, ಆರ್ಥಿಕ ವರ್ಷದ 5 ತಿಂಗಳಲ್ಲಿ 133.15 ಕೋಟಿ ರೂ. ಆದಾಯ ಸಂಗ್ರಹವಾಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 77.42 ಕೋಟಿ ರೂ. ಆದಾಯ ಸಂಗ್ರಹವಾಗಿತ್ತು.

**ಪವರ್‌ಲೂಮ್ ವಿದ್ಯುತ್ ಸಬ್ಸಿಡಿ ಮಿತಿ ರದ್ದು**

**ರಾಜ್ಯ ಸರ್ಕಾರ ವಿದ್ಯುತ್ ಮಗ್ಗ ಮತ್ತು ಮಗ್ಗಪೂರ್ವ ಘಟಕಗಳ ವಿದ್ಯುತ್ ಸಬ್ಸಿಡಿ ಮಿತಿ ರದ್ದುಪಡಿಸಿದೆ. ಇದರಿಂದ ಪ್ರತಿ ನೇಕಾರರಿಗೆ ವಾರ್ಷಿಕ ಕನಿಷ್ಠ 40 ಸಾವಿರ ರೂ. ಉಳಿತಾಯವಾಗಲಿದೆ ಎಂದು ಜವಳಿ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 10.1 ಎಚ್‌ಪಿಯಿಂದ 20 ಎಚ್‌ಪಿವರೆಗಿನ ವಿದ್ಯುತ್ ಮಗ್ಗ ಮತ್ತು ಮಗ್ಗಪೂರ್ವ ಘಟಕಗಳು ಬಳಕೆ ಮಾಡುವ ಪೂರ್ಣ ವಿದ್ಯುತ್‌ಗೆ ಸಬ್ಸಿಡಿ ನೀಡಲಿದ್ದು, ನೇಕಾರರು ಪ್ರತಿ ಯೂನಿಟ್‌ಗೆ 1.25 ರೂ. ಮಾತ್ರ ಪಾವತಿ ಮಾಡಬೇಕು. ಸರ್ಕಾರದ ಈ ಕ್ರಮದಿಂದ 4 ಸಾವಿರ ಘಟಕಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು. ಇದುವರೆಗೆ ಮಾಸಿಕ 500 ಯೂನಿಟ್‌ಗೆ ಮಾತ್ರ ಸಬ್ಸಿಡಿ ನೀಡಲಾಗುತ್ತಿತ್ತು. ಹೆಚ್ಚುವರಿ ಬಳಕೆಯ ವಿದ್ಯುತ್‌ಗೆ ನೇಕಾರರು ವಿದ್ಯುತ್ ಕಂಪನಿಗಳು ನಿಗದಿಪಡಿಸಿರುವ ದರದಲ್ಲಿ ವಿದ್ಯುತ್ ಶುಲ್ಕ ಪಾವತಿಸಬೇಕಿತ್ತು. ಸರ್ಕಾರ ಸಬ್ಸಿಡಿ ಮಿತಿ ರದ್ದುಪಡಿಸಿರುವುದರಿಂದ ಮಾಸಿಕ ಎಷ್ಟೇ ಯೂನಿಟ್ ವಿದ್ಯುತ್ ಬಳಕೆ ಮಾಡಿದರೂ 1.25 ರೂ. ದರ ವಿಧಿಸಲಾಗುವುದು ಎಂದು ವಿವರಿಸಿದರು.**

# ಮಹದಾಯಿಗೆ ವಿಘ್ನ ಪ್ರಶ್ನಿಸಿ ಎಚ್.ಕೆ.ಪಾಟೀಲ್ ನೇತೃತ್ವದ ಸರ್ವಪಕ್ಷ ನಿಯೋಗ ಕೇಂದ್ರಕ್ಕೆ

**ಹುಬ್ಬಳ್ಳಿ, ಸೆ.6:** ಮಹದಾಯಿ ಯೋಜನೆ ಜಾರಿ ಕುರಿತಂತೆ ರಾಜ್ಯ ಸಚಿವ ಸಂಪುಟದಲ್ಲಿ ವನ್ಯಜೀವಿ ಮಂಡಳಿ ತಿರಸ್ಕಾರ ಮಾಡಿದೆ. ಈ ಹಿನ್ನೆಲೆಯಲ್ಲಿ ಸರ್ವಪಕ್ಷ ನಿಯೋಗ ಪ್ರಧಾನಿ ಬಳಿ ಕರೆದೊಯ್ಯಲು ಸರ್ಕಾರ ತೀರ್ಮಾನಿಸಿದೆ. ಈ ಬಗ್ಗೆ ಮಾತನಾಡಿರುವ ಕಾನೂನು ಸಚಿವ ಎಚ್.ಕೆ.ಪಾಟೀಲ್ ಕೇಂದ್ರ ಸರ್ಕಾರ ಅನ್ಯಾಯ ಮಾಡಿದೆ. ನಾವು ಸುಪ್ರೀಂ ಕೋರ್ಟ್ ಮೆಟ್ಟಲು ಹತ್ತುತ್ತೇವೆ ಎಂದು ತಿಳಿಸಿದರು. ಶುಕ್ರವಾರ ಸುದ್ದಿಗಾರರ ಜೊತೆಗೆ ಮಾತನಾಡಿದ ಎಚ್.ಕೆ.ಪಾಟೀಲ್ ಅವರು, ಮಹದಾಯಿ ಯೋಜನೆ ಜಾರಿಯಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಅನ್ಯಾಯ ಮಾಡುತ್ತಿದೆ. ಉತ್ತರ ಕರ್ನಾಟಕದ ಪ್ರಮುಖ ನದಿ ನೀರು ಯೋಜನೆ ಜಾರಿಯನ್ನು ವನ್ಯಜೀವಿ ಮಂಡಳಿ ತಿರಸ್ಕಾರ ಮಾಡಿದೆ. ಈ ಹಿಂದೆಯೇ ಅರಣ್ಯ ಇಲಾಖೆಯ ಅವರು ಈಗಾಗಲೇ ಅನುಮತಿ ಕೊಡಲು ಸಿದ್ಧರಿದ್ದರು. ಆದರೆ ಕೇಂದ್ರ ಸರ್ಕಾರದವರು 10 ವರ್ಷಗಳಿಂದ ಸರಿಯಾಗಿ ನಡೆದುಕೊಂಡಿಲ್ಲ. ಚುನಾವಣೆಗೆ ಬಂದಾಗಲೇ ಎಲ್ಲ ಕೇಂದ್ರದಲ್ಲಿ ಆಡಳಿತ ಪಕ್ಷದ ನಾಯಕರು ಯೋಜನೆಗೆ ಅನುಮತಿ ಕೊಡಿಸುತ್ತೇವೆ ಯಾವುದೇ ಕಾರಣಕ್ಕೂ ಬಿಡಲ್ಲ. ಅನುಮತಿ ಸಿಗುತ್ತದೆ ಎಂಬ ಭರವಸೆ ಕೊಡುತ್ತಲೇ ಬಂದಿದ್ದಾರೆ. ಗೋವಾದ್ದು 4000 ಕೆ.ವಿ ವಿದ್ಯುತ್ ಲೈನ್ ಎಳೆಯಲು 435 ಎಕರೆ ಭೂಮಿಯನ್ನು ಚಿಟಿಕೆ ಹೊಡೆಯುವುದರೊಳಾಗಿ ಕ್ಲೀಯರ್ ಮಾಡಲು ಬಿಜೆಪಿ ಕೇಂದ್ರದ ಸಚಿವರು ಪತ್ರ ಬರೆಯುತ್ತಾರೆ. ತ್ವರಿತವಾಗಿ ಬೇರೆ ರಾಜ್ಯಗಳ ಕೆಲಸಗಳು ನಿಮ್ಮಿಂದ ಆಗುವಾಗ, ಕರ್ನಾಟಕ ಕೆಲಸಕ್ಕೆ ತಾತ್ಸಾರ ಏಕೆ? ಎಂದು ಅವರು ಪ್ರಶ್ನಿಸಿದರು.ಇದುವರೆಗೆ ಮಹದಾಯಿ ಯೋಜನೆಗೆ ಸಂಬಂಧಿಸಿದಂತೆ ಕಾನೂನು ತೊಡಕು ನಿವಾರಣೆ ಆಗಿದ್ದು, ನ್ಯಾಯಾಧೀಕರಣದಲ್ಲಿ ತೀರ್ಮಾನ ಸಹ ಆಯಿತು. ಮೊದಲು ಅಂತರರಾಜ್ಯ ವಿವಾದ ಬಗೆಹರಿಸಲಿ ಎಂದೆವು, ಆದರೆ ಈಗ ಏನಾಯಿತು? ಮತ್ತೇ ಅನ್ಯಾಯ ಮಾಡಲಾಗಿದೆ ಎಂದು ಅವರು ದೂರಿದರು.ಮಹದಾಯಿ ವಿಚಾರದಲ್ಲಿ ಕರ್ನಾಟಕಕ್ಕೆ ಆದ ಅನ್ಯಾಯವನ್ನು ಸಹಿಸುವುದಿಲ್ಲ. ಈಗ ತಕ್ಷಣ ನಮ್ಮ ಮುಖ್ಯಮಂತ್ರಿಗಳು ಸರ್ವ ಪಕ್ಷಗಳ ಸಭೆ ಕರೆಯುತ್ತಾರೆ. ಸಭೆಯಲ್ಲಿ ಹೋರಾಟದ ಬಗ್ಗೆ ಚರ್ಚೆ ನಡೆಸಲಾಗುವುದು. ನಂತರ ಪ್ರಧಾನಿ ನರೇಂದ್ರ ಮೋದಿ ಬಳಿ ಸರ್ವ ಪಕ್ಷಗಳ ನಿಯೋಗ ತೆಗೆದುಕೊಂಡು ಹೋಗಲಾಗುವುದು.

# ಸಿಎಂ ಆಕಾಂಕ್ಷಿಗಳ ಪಟ್ಟಿ ಬೆಳೆಯುತ್ತಿದೆ ಕಾಂಗ್ರೆಸ್‌ಗೆ ಬಿ.ವೈ. ವಿಜಯೇಂದ್ರ ಟಾಂಗ್



**ಬೆಂಗಳೂರು, ಸೆ.6:** ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಹುದ್ದೆಗಾಗಿ ಅಭ್ಯರ್ಥಿಗಳ ಪಟ್ಟಿ ದೊಡ್ಡದಾಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಶುಕ್ರವಾರ ತಿಳಿಸಿದರು. ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ದಿನದಿಂದ ದಿನಕ್ಕೆ ಮುಖ್ಯಮಂತ್ರಿ ಆಕಾಂಕ್ಷಿಗಳ ಪಟ್ಟಿ ದೊಡ್ಡದಾಗುತ್ತಿದ್ದು, ಡಿಕೆ ಶಿವಕುಮಾರ್ ಮುಂಚೂಣಿಯಲ್ಲಿದ್ದಾರೆ ಎಂದರು.ಸಿದ್ದರಾಮಯ್ಯ ರಾಜೀನಾಮೆ ನೀಡುವ ಕಾಲ ಸನ್ನಿಹಿತವಾಗಿದೆ. ಮಹತ್ವಕಾಂಕ್ಷೆಯ ಎತ್ತಿನಹೊಳೆ ಯೋಜನೆ ಉದ್ಘಾಟನೆಗೂ ಮುನ್ನಾ ಶಿವಕುಮಾರ್ ವಿಶೇಷ ಪೂಜೆ ಮಾಡಿದ್ದಾರೆ. ಇದು ಸಿದ್ದರಾಮಯ್ಯ ಅವರ ಸ್ಥಾನ ಗಟ್ಟಿಯಾಗಿಲ್ಲ ಎಂಬುದರ ಸಂಕೇತವಾಗಿದೆ ಎಂದು ಹೇಳಿದರು. ಮುಖ್ಯಮಂತ್ರಿ, ಇತರ ಸಚಿವರ ಪರಿಸ್ಥಿತಿ ಸಹಜ ವಾಗಿಯೇ ಬಿಜೆಪಿಗೆ ಅರ್ಥ ವಾಗುತ್ತಿದೆ. ಸಿದ್ದರಾಮಯ್ಯ ರಾಜೀನಾಮೆ ನೀಡುವ ಸಂದರ್ಭ ಬಂದಿದ್ದು, ಕಾಂಗ್ರೆಸ್‌ಗೆ ಅರಗಿಸಿ ಕೊಳ್ಳಲು ಆಗುತ್ತಿಲ್ಲ. ಸರ್ಕಾರದ ಬೆದರಿಕೆ, ಪಿತೂರಿಯ ತಂತ್ರಗಳಿಗೆ ಬಿಜೆಪಿ ಭಯಪಡುವುದಿಲ್ಲ. ಎಲ್ಲಾ ಸುಳ್ಳಿನ ಆರೋಪಗಳಿಗೆ ಉತ್ತರಿಸಲು ನಮ್ಮ ಪಕ್ಷ ಸಿದ್ಧವಿದೆ ಎಂದರು. ಮುಡಾ ಹಗರಣ, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಭ್ರಷ್ಟಾಚಾರದಂತಹ ಆರೋಪಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಕೆಲವು ದಿನಗಳಿಂದ ಪ್ರತಿಭಟನೆ ನಡೆಸುತ್ತಿದೆ.ಇನ್ನೂ ಎತ್ತಿನಹೊಳೆ ಯೋಜನೆ ಕುರಿತು ಮಾತನಾಡಿದ ವಿಜಯೇಂದ್ರ, ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು ಮತ್ತಿತರ ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವ ಯೋಜನೆಗೆ ಆರಂಭದಲ್ಲಿ ರೂ. 8,500 ಕೋಟಿ ಅಂದಾಜು ವೆಚ್ಚ ನಿಗದಿಮಾಡಲಾಗಿತ್ತು. ಆದರೆ, ಈಗ ಅದು ರೂ. 20,000 ದಿಂದ 22,5000 ಕೋಟಿಗೆ ತಲುಪಿದೆ. ಈ ಯೋಜನೆಗೆ ಚಾಲನೆ ನೀಡಿದ್ದು ಸಂತೋಷ; ಆದರೆ, ಅದರ ಮೂಲ ಉದ್ದೇಶ ಈಡೇರಲಿದೆಯೇ ಎಂಬ ಪ್ರಶ್ನೆ ಸಾಕಷ್ಟು ಜನರಲ್ಲಿದೆ ಎಂದು ತಿಳಿಸಿದರು.

# ಕಾಂಗ್ರೆಸ್–ಬಿಜೆಪಿ ನಡವಳಿಕೆ ಸಿಎಂ ಇಬ್ರಾಹಿಂ ಅಸಮಾಧಾನ



**ಹುಬ್ಬಳ್ಳಿ, ಸೆ.6:** ಮುಡಾ ಹಾಗೂ ವಾಲ್ಮೀಕಿ ಹಗರಣದಲ್ಲಿಯೇ ಸರ್ಕಾರ, ಪ್ರತಿಪಕ್ಷಗಳು ಕಾಲಹರಣ ಮಾಡುತ್ತಿದೆ. ಇದರಿಂದ ರಾಜ್ಯದಲ್ಲಿ ಅಭಿವೃದ್ಧಿ ಮರೀಚಿಕೆಯಾಗಿದೆ ಎಂದು ಕಾಂಗ್ರೆಸ್ ಸರ್ಕಾರ ಹಾಗೂ ಬಿಜೆಪಿ ವಿರುದ್ಧ ಮಾಜಿ ಸಚಿವ ಸಿ.ಎಂ ಇಬ್ರಾಹಿಂ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕಳೆದ ಒಂದೂವರೆ ವರ್ಷದಿಂದ ಆರೋಪ ಹಾಗೂ ಪ್ರತ್ಯಾರೋಪದಲ್ಲಿಯೇ ಕಾಲಹರಣ ಹಾಕಲಾಗುತ್ತಿದ್ದು, ಸರಿಯಾಗಿ ನಮ್ಮ ವಿರೋಧ ಪಕ್ಷ ವಿರೋಧ ಪಕ್ಷವಾಗಿ ಕೆಲಸ ಮಾಡುತ್ತಿಲ್ಲ. ನಿರುದ್ಯೋಗ, ಅತಿವೃಷ್ಟಿ, ಅನಾವೃಷ್ಟಿ ಕಾಡುತ್ತಿದೆ. ಲೋಕೋಪಯೋಗಿ ನೀರಾವರಿ ಸೇರಿದಂತೆ ಅನೇಕ ಇಲಾಖೆಯಲ್ಲಿ ಬಿಲ್ ಆಗುತ್ತಿಲ್ಲ. ಇನ್ನಷ್ಟು ದಿನ ಹೋದರೆ ಲೋಕೋಪಯೋಗಿ ಇಲಾಖೆ ಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳು ಪರಿಸ್ಥಿತಿ ಬರುತ್ತದೆ ಎಂದರು. ಬಿಜೆಪಿಯವರು ಈಗ ಕಾಂಗ್ರೆಸ್ ಮೇಲೆ ಆರೋಪ ಮಾಡುತ್ತಾರೆ. ಆದರೆ ನೀವು ಏನು ಮಾಡಿದಿರಿ ಮೊದಲು ಹೇಳಿ. ರಾಜ್ಯದ ಸಂಸದರು ಏನು ಮಾಡುತ್ತಿದ್ದಾರೆ. 27 ಸಂಸದರು ಗಂಡಸರೋ ಅಥವಾ ಹೆಂಗಸರೋ ಎಂದು ಆಕ್ರೋಶ ವ್ಯಕ್ತಪಡಿಸಿದ ಅವರು, ಮಹದಾಯಿ, ನೀರಾವರಿ ಯೋಜನೆ ಜಾರಿ ಮಾಡಲು ಆಗಲಿಲ್ಲ. ರಾಜ್ಯದ ಸಂಸದರು ಕೇಂದ್ರಕ್ಕೆ ಹೋಗಿ ಒತ್ತಾಯ ಮಾಡುತ್ತಿಲ್ಲ. ಪ್ರಧಾನಿ ನರೇಂದ್ರ ಮೋದಿ ಎದುರಿಗೆ ಏನು ಮಾತನಾಡುತ್ತಿಲ್ಲ. ರಾಜ್ಯದ ಸಂಪತ್ತು ಎಲ್ಲಿ ಹೋಗುತ್ತಿದೆ. ಇದರ ಬಗ್ಗೆ ಜನರು ಎಚ್ಚೆತ್ತುಕೊಳ್ಳಬೇಕು. ರಾಜ್ಯದ ಹಕ್ಕನ್ನು ರಾಜ್ಯಕ್ಕೆ ಕೊಡಬೇಕು ಕೇಂದ್ರದಿಂದ ಸಿಗುವ ಪಾಲು ಸಿಗಬೇಕು ಎಂದು ಆಗ್ರಹಿಸಿದರು.

# ರಾಜ್ಯದಿಂದ 300 ಮೆ.ವ್ಯಾ. ಸೌರವಿದ್ಯುತ್ ಖರೀದಿಗೆ ಜೆಎಸ್‌ಡಬ್ಲ್ಯೂ ಸಹಿ: ಕೆ.ಜೆ. ಜಾರ್ಜ್



**ಬೆಂಗಳೂರು, ಸೆ.6:** ಪಾವಗಡದ ಸೋಲಾರ್ ಪಾರ್ಕ್‌ನಲ್ಲಿ 300 ಮೆ.ವ್ಯಾ ಸೌರ ಯೋಜನೆ ಸಂಬಂಧ ವಿದ್ಯುತ್ ಸರಬರಾಜು ಕಂಪನಿ ನಿಯಮಿತದೊಂದಿಗೆ ಜೆಎಸ್‌ಡಬ್ಲ್ಯೂ ಎನರ್ಜಿಯ ಅಂಗ ಸಂಸ್ಥೆಯಾದ ಜೆಎಸ್ಡಬ್ಲ್ಯು ರಿನ್ಯೂ ಎನರ್ಜಿಯ ಟ್ವೆಂಟಿ ವಿದ್ಯುತ್ ಖರೀದಿ ಒಪ್ಪಂದಕ್ಕೆ ಸಹಿಮಾಡಿದೆ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ತಿಳಿಸಿದ್ದಾರೆ. ಸೌರ ವಿದ್ಯುತ್ ಖರೀದಿ ಒಪ್ಪಂದ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಕೆ.ಜೆ. ಜಾರ್ಜ್ ಅವರು, ಇಂಧನ ಸಂರಕ್ಷಣೆ, ಸ್ವಚ್ಛ ಮತ್ತು ಹಸಿರು ಇಂಧನ ಉಪಕ್ರಮಗಳಿಗೆ ಒತ್ತು ನೀಡಿರುವುದರಿಂದ ಹಸಿರು ಇಂಧನ ವಲಯದಲ್ಲಿ ರಾಜ್ಯ ದೊಡ್ಡ ಪ್ರಮಾಣದ ಹೂಡಿಕೆ ಆಕರ್ಷಿಸುತ್ತಿದೆ ಎಂದು ತಿಳಿಸಿದ್ದಾರೆ. 2044ರ ಹಣಕಾಸು ವರ್ಷದವರೆಗೆ ಪ್ರತಿ ಕಿ.ವ್ಯಾ.ಗೆ 2.89 ರೂ. ದರದಲ್ಲಿ ವಿದ್ಯುತ್ ಪೂರೈಕೆ ಮಾಡಲಿದ್ದು, ಯೋಜನೆಯು 18 ತಿಂಗಳೊಳಗೆ ಕಾರ್ಯಾರಂಭಿಸುವ ನಿರೀಕ್ಷೆ ಇದೆ. ಕರ್ನಾಟಕ ಸೌರಶಕ್ತಿ ಅಭಿವೃದ್ಧಿ ನಿಗಮ ನಿಯಮಿತವು 2024ರ ಜುಲೈ 22 ರಂದು ಒಪ್ಪಿಗೆ ಪತ್ರ ನೀಡಿತ್ತು. ನಂತರ ಈ ವಿದ್ಯುತ್ ಖರೀದಿ ಒಪ್ಪಿಗೆ ಏರ್ಪಟ್ಟಿದೆ ಎಂದು ಹೇಳಿದ್ದಾರೆ. ನವೀಕರಿಸಬಹುದಾದ ಇಂಧನ ನೀತಿಯನ್ನು 2009ರಲ್ಲೇ ಅಧಿಸೂಚಿಸಿದ ದಕ್ಷಿಣ ಭಾರತದ ಮೊದಲ ರಾಜ್ಯ ಕರ್ನಾಟಕ. ವಿದ್ಯುತ್ ಉತ್ಪಾದನಾ ವಲಯದಲ್ಲಿ ನವೀಕರಿಸಬಹುದಾದ ಇಂಧನದ ಪಾಲನ್ನು ಹೆಚ್ಚಿಸುವತ್ತ ರಾಜ್ಯ ಸರ್ಕಾರ ಗಮನಹರಿಸಿದ್ದು, ಇದರಿಂದ ರಾಜ್ಯದಲ್ಲಿ ಹೆಚ್ಚಿನ ಉದ್ಯೋಗ ಸೃಷ್ಟಿಯೂ ಆಗುತ್ತಿದೆ.

ನವೀಕರಿಸ ಬಹುದಾದದ ಇಂಧನ ನೀತಿಯ ಫಲ ಈಗ ಕಾಣುತ್ತಿದ್ದೇವೆ ಎಂದಿದ್ದಾರೆ. ವಿದ್ಯುತ್ ಉತ್ಪಾದನಾ ವಲಯದಲ್ಲಿ ನವೀಕರಿಸಬಹುದಾದ ಇಂಧನದ ಪಾಲನ್ನು ಹೆಚ್ಚಿಸುವತ್ತ ರಾಜ್ಯ ಸರ್ಕಾರ ಗಮನಹರಿಸಿದೆ. ಹವಾಮಾನ ಬದಲಾವಣೆ ಮತ್ತು ಜಾಗತಿಕ ತಾಪಮಾನದ ಸವಾಲುಗಳನ್ನು ಎದುರಿಸುವಲ್ಲಿ ಇಂಧನ ಸಂರಕ್ಷಣೆ ನಿರ್ಣಾಯಕ ಪಾತ್ರ ವಹಿಸುತ್ತದೆ. ಸಾಂಪ್ರದಾಯಿಕ ಇಂಧನ ಮೂಲಗಳಿಗಿಂತ ನವೀಕರಿಸಬಹುದಾದ ಇಂಧನ ಕಡಿಮೆ ಖರ್ಚಿನ ಪರ್ಯಾಯ ಇಂಧನ ಮೂಲವಾಗಿದೆಎಂದು ತಿಳಿಸಿದ್ದಾರೆ.

# ಆರೋಗ್ಯ ವಿಮೆ ಜಿಎಸ್‌ಟಿಗೆ ವಿನಾಯಿತಿ: ಪ್ರಧಾನಿಗೆ ದಿನೇಶ್ ಗುಂಡೂರಾವ್ ಪತ್ರ

**ಬೆಂಗಳೂರು, ಆ.6:** ಆರೋಗ್ಯ ವಿಮೆ ಮೇಲೆ ಶೇ 18 ರಷ್ಟು ಜಿಎಸ್.ಟಿ ತೆರಿಗೆ ವಿರುದ್ಧ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲು ಬಿಜೆಪಿಯೇತರ ಸರ್ಕಾರಗಳಿಗೆ ಮಾನ್ಯ ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ಅವರು ಮನವಿ ಮಾಡಿದ್ದಾರೆ.

ಈ ಸಂಬಂಧ ತಮಿಳುನಾಡು, ಕೇರಳ, ಆಂದ್ರಪ್ರದೇಶ, ಪಶ್ಚಿಮ ಬಂಗಾಳ ಸೇರಿದಂತೆ 7 ರಾಜ್ಯಗಳ ಆರೋಗ್ಯ ಸಚಿವರಿಗೆ ಪತ್ರ ಬರೆದಿರುವ ದಿನೇಶ್ ಗುಂಡೂರಾವ್, ಸೆಪ್ಟೆಂಬರ್ 9 ರಂದು ನಡೆಯಲಿರುವ ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಈ ಬಗ್ಗೆ ಧ್ವನಿ ಎತ್ತುವಂತೆ ಒತ್ತಾಯಿಸಿದ್ದಾರೆ.

ಆರೋಗ್ಯ ವಿಮೆಗಳ ಮೇಲೆ ಶೇ 18 ರಷ್ಟು ಜಿಎಸ್‌ಟಿ ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದ ಜನರಿಗೆ ಹೊರೆಯಾಗುತ್ತಿದೆ. ಹೆಲ್ತ್ ಇನ್ಸೂರೆನ್ಸ್ ರಕ್ಷಣೆಯಿಂದ ಜನರು ದೂರವಾಗುತ್ತಿದ್ದಾರೆ. ಪರಿಣಾಮ ವೈದ್ಯಕೀಯ ತುರ್ತು ಪರಿಸ್ಥಿತಿಗಳಲ್ಲಿ ಕುಟುಂಬ ವರ್ಗದವರು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ ಎಂದು ಹೇಳಿದ್ದಾರೆ.

ಆರೋಗ್ಯ ವಿಮೆಯ ರಕ್ಷಣೆ ಪಡೆಯುವ ನಿಟ್ಟಿನಲ್ಲಿ ಜನರಿಗೆ ಪ್ರೋತ್ಸಾಹ ನೀಡುವ ತೆರಿಗೆ ನೀತಿ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರದಿಂದ ಪ್ರಧಾನಿ ಮೋದಿಗೆ ಪತ್ರ ಬರೆಯಲಾಗಿದ್ದು, ಬಿಜೆಪಿಯೇತರ ಸರ್ಕಾರಗಳು ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿಕೊಡಲು ಮುಂದಾಗಬೇಕು ಎಂದು ಸಚಿವರು ಪತ್ರದಲ್ಲಿ ಮನವಿ ಮಾಡಿದ್ದಾರೆ.

# ವಕ್ಫ್ ಆಸ್ತಿ ರಕ್ಷಣೆಗೆ ಸಚಿವ ಜಮೀರ್ ಅಹಮದ್ ಕರೆ

**ಬೆಂಗಳೂರು, ಸೆ.6:** ವಕ್ಫ್ ಆಸ್ತಿ ದೇವರ ಆಸ್ತಿ. ಇದರ ಸಂರಕ್ಷಣೆ ಎಲ್ಲರ ಕರ್ತವ್ಯ ಎಂದು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ. ವಿಕಾಸ ಸೌಧ ಸಮ್ಮೇಳನ ಸಭಾಂಗಣದಲ್ಲಿ ಜಿಲ್ಲಾ ವಕ್ಫ್ ಅಧ್ಯಕ್ಷರು ಹಾಗೂ ಅಧಿಕಾರಿಗಳ ಸಭೆ ನಡೆಸಿದ ಅವರು, ವಕ್ಫ್ ಆಸ್ತಿ ಸಂರಕ್ಷಣೆ ಕೇವಲ ಸಚಿವ ಅಥವಾ ರಾಜ್ಯಾಧ್ಯಕ್ಷರ ಜವಾಬ್ದಾರಿ ಮಾತ್ರವಲ್ಲ.ಜಿಲ್ಲಾಧ್ಯಕ್ಷರು ಹಾಗೂ ಅಧಿಕಾರಿಗಳ ಹೊಣೆಗಾರಿಕೆಯೂ ಹೌದು ಎಂದು ಹೇಳಿದರು. ವಕ್ಫ್ ಆಸ್ತಿ ಸರ್ಕಾರ ಕೊಟ್ಟಿದ್ದು, ಅದು ಸರ್ಕಾರಕ್ಕೆ ಸೇರಿದ್ದು ಎಂಬ ಭಾವನೆ ಇದೆ. ಒಂದೇ ಒಂದು ಇಂಚು ವಕ್ಫ್ ಬೋರ್ಡ್ ಸರ್ಕಾರದಿಂದ ಪಡೆದಿಲ್ಲ. ವಕ್ಫ್ ಆಸ್ತಿ ಸಮುದಾಯದ ಒಳಿತಿಗಾಗಿ ದಾನಿಗಳು ಕೊಟ್ಟಿರುವ ದಾನ ಆಗಿದೆ.

ಖಬರಸ್ಥಾನ ಹೊರತು ಪಡಿಸಿದರೆ ಸರ್ಕಾರದಿಂದ ನಮಗೆ ಬೇರೆ ಯಾವುದೇ ಜಾಗ ಕೊಟ್ಟಿಲ್ಲ ಎಂದು ತಿಳಿಸಿದರು. ವಕ್ಫ್ ಬೋರ್ಡ್ ವತಿಯಿಂದ 15 ಜಿಲ್ಲೆಗಳಲ್ಲಿ ಮಹಿಳಾ ಕಾಲೇಜು ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ. ಅದೇ ರೀತಿ ತಾಲೂಕು ಮತ್ತು ಜಿಲ್ಲೆಗಳಲ್ಲಿ ವಕ್ಫ್ ಬೋರ್ಡ್ ವತಿಯಿಂದ ಆಸ್ಪತ್ರೆ ನಿರ್ಮಾಣಕ್ಕೂ ಚಿಂತನೆ ಇದೆ ಎಂದು ಹೇಳಿದರು. ಜಿಲ್ಲಾ ಮಟ್ಟದಲ್ಲಿ ವಕ್ಫ್ ಅದಾಲತ್ ನಡೆಸುತ್ತಿರುವುದರಿಂದ ಹಲವಾರು ಸಮಸ್ಯೆ ಬಗೆಹರಿದಿದ್ದು ರಾಜ್ಯದ ಪ್ರತಿ ಜಿಲ್ಲೆಯಲ್ಲೂ ನಡೆಸಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷರು ತಮ್ಮ ಜಿಲ್ಲೆಗಳ ಸಮಸ್ಯೆ ಹೇಳಿಕೊಂಡರು. ಕಾಲೇಜು ಹಾಗೂ ಆಸ್ಪತ್ರೆ ನಿರ್ಮಾಣಕ್ಕೆ ಜಾಗ ಕೊಡಲು ದಾನಿಗಳು ಸಿದ್ದ ಇರುವ ಬಗ್ಗೆಯೂ ಸಭೆಯ ಗಮನಕ್ಕೆ ತಂದರು.ಇದೇ ಸಂದರ್ಭದಲ್ಲಿ ಒಂದು ವರ್ಷ ಪೂರೈಸಿದ ರಾಜ್ಯ ವಕ್ಫ್ ಬೋರ್ಡ್ ಅಧ್ಯಕ್ಷ ಅನ್ವರ್ ಬಾಷಾ ಅವರನ್ನು ಸನ್ಮಾನಿಸಲಾಯಿತು.ಒಂದು ವರ್ಷದ ಸಾಧನೆ ಸ್ಮರಣ ಸಂಚಿಕೆ ಬಿಡುಗಡೆ ಮಾಡಲಾಯಿತು. ಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್, ಸದಸ್ಯರಾದ ಯಾಕೂಬ್, ಮೌಲನಾ ಶಾಫಿ ಸಾದಿ, ರಿಯಾಜ್, ಅಸೀಫ್, ವಸತಿ ಇಲಾಖೆ ಕಾರ್ಯದರ್ಶಿ ನವೀನ್‌ರಾಜ್ ಸಿಂಗ್, ಸಿಇಒ ಜಿಲಾನಿ ಮೊಕಾಶಿ ಉಪಸ್ಥಿತರಿದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಸಂಜಯ್ ಗಾಂಧಿ ಸಾವಿನಲ್ಲಿ ರಷ್ಯಾ ಕೈವಾಡ: ಸುಬ್ರಮಣ್ಯನ್ ಆರೋಪ



**ನವದೆಹಲಿ, ಸೆ.6:** ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಪುತ್ರ ಸಂಜಯ್ ಗಾಂಧಿ ಸಹಜ ಅಪಘಾತದಲ್ಲಿ ಮೃತಪಡಲಿಲ್ಲ, ಬದಲಿಗೆ ರಷ್ಯಾ ಅವರನ್ನು ಹತ್ಯೆಗೈದಿತ್ತು. ಎಂಬ ಹೇಳಿಕೆ ನೀಡುವ ಮೂಲಕ ಬಿಜೆಪಿ ನಾಯಕ ಸುಬ್ರಮಣ್ಯನ್ ಸ್ವಾಮಿ ಹೊಸ ವಿವಾದಕ್ಕೆ ಕಿಡಿ ಹಚ್ಚಿದ್ದಾರೆ. ಆಜ್ ತಕ್ ಮಾಜಿ ನಿರೂಪಕ ಶುಭಂಕರ್ ಮಿಶ್ರಾ ಅವರು ನಡೆಸಿರುವ ಸಂದರ್ಶನದ ನೇರ ಪ್ರಸಾರದಲ್ಲಿ ಸುಬ್ರಮಣ್ಯನ್ ಸ್ವಾಮಿ ಈ ಆರೋಪ ಮಾಡಿದ್ದಾರೆ.

ತಮ್ಮ ವಿವಾದಾತ್ಮಕ ಮಾತುಗಳಿಗೆ ಕುಖ್ಯಾತರಾಗಿರುವ ಸುಬ್ರಮಣ್ಯನ್ ಸ್ವಾಮಿ ಅವರು ಸಂಜಯ್ ಸಿಂಗ್ ಅವರ ಸಹೋದರ ರಾಜೀವ್ ಗಾಂಧಿಯವರೊಂದಿಗಿನ ತಮ್ಮ ಸ್ನೇಹವನ್ನು ಮೆಲುಕು ಹಾಕುವಾಗ ಈ ಆರೋಪವನ್ನು ಮಾಡಿದ್ದಾರೆ. ಸಂಜಯ್ ಗಾಂಧಿಯವರ ಅಕಾಲಿಕ ನಿಧನದ ನಂತರ, 1980ರಲ್ಲಿ ರಾಜಕೀಯವನ್ನು ಪ್ರವೇಶಿಸಿದ್ದ ರಾಜೀವ್ ಗಾಂಧಿ, ತಮ್ಮ ತಾಯಿ ಇಂದಿರಾ ಗಾಂಧಿ ಹತ್ಯೆಯ ನಂತರ ದೇಶದ ಪ್ರಧಾನಿಯಾಗಿದ್ದರು. ಜನರು ವ್ಯಾಪಕವಾಗಿ ನಂಬಿಕೊಂಡಿರುವಂತೆ ಸಂಜಯ್ ಗಾಂಧಿ ವಿಮಾನ ಅಪಘಾತದಲ್ಲಿ ಮೃತಪಡಲಿಲ್ಲ, ಬದಲಿಗೆ ರಷ್ಯಾ ಉದ್ದೇಶಪೂರ್ವಕವಾಗಿ ನಡೆಸಿದ್ದ ಕೃತ್ಯವಾಗಿತ್ತು ಎಂದು ಪಾಡ್‌ಕಾಸ್ಟ್ ಸಂದರ್ಭದಲ್ಲಿ ಸುಬ್ರಮಣ್ಯನ್ ಸ್ವಾಮಿ ಆರೋಪಿಸಿದ್ದಾರೆ. ಸಂಜಯ್ ಗಾಂಧಿ ಭಾರತವನ್ನು ಅಮೆರಿಕಾಗೆ ಹತ್ತಿರವಾಗಿಸುವ ಒಲವು ಹೊಂದಿದ್ದರಿಂದ, ರಷ್ಯಾ ಅವರನ್ನು ತನ್ನ ಪಾಲಿಗೆ ಬೆದರಿಕೆ ಎಂದು ಭಾವಿಸಿತ್ತು. ಹೀಗಾಗಿ ರಷ್ಯಾ ಅವರನ್ನು ಹತ್ಯೆಗೈದಿತು. ಅವರು ಭಾರತವನ್ನು ಅಮೆರಿಕಾಗೆ ನಿಕಟವಾಗಿಸಬಹುದು ಎಂದು ಭಯಗೊಂಡಿದ್ದರು. ಈ ಮಾತಿಗೆ ಸಾಕಷ್ಟು ಪುರಾವೆಗಳಿವೆ ಎಂದು ಅವರು ಪ್ರತಿಪಾದಿಸಿದ್ದಾರೆ.

ನಾನು ನನ್ನ ಸಂಶಯದ ಕುರಿತು ಇಂದಿರಾಗಾಂಧಿ ಅವರಲ್ಲೂ ಮಾತನಾಡಿದ್ದೆ. ಆದರೆ, ಅದಕ್ಕೆ ನಿರುತ್ಸಾಹದ ಉತ್ತರ ನೀಡಿದ್ದ ಅವರು, ಅದರಿಂದ ಪ್ರಯೋಜನವೇನು? ಆತ ಮರಳಿ ಬರಲಾರ ಎಂದು ಹೇಳಿದ್ದರು ಎಂದೂ ಸ್ವಾಮಿ ಹೇಳಿದ್ದಾರೆ. ಸಂಜಯ್ ಗಾಂಧಿ ಸಾವಿನಲ್ಲಿ ಯಾರದೋ ಕೈವಾಡವಿದೆ ಎಂದು ಇಂದಿರಾ ಗಾಂಧಿ ಕೂಡಾ ಶಂಕಿಸಿದರೂ, ಈ ವಿಷಯವನ್ನು ಮತ್ತಷ್ಟು ಮುಂದುವರಿಸುವುದರಲ್ಲಿ ಯಾವುದೇ ಅರ್ಥವಿಲ್ಲ ಎಂಬ ನಿಲುವಿಗೆ ತಲುಪಿದ್ದರು ಎಂದು ಅವರು ಹೇಳಿದ್ದಾರೆ. ಸಂಜಯ್ ಗಾಂಧಿ ಅಪಘಾತವನ್ನು ಸುದೀರ್ಘ ಕಾಲದಿಂದ ದುರಂತಮಯ ಘಟನೆ ಎಂದೇ ಭಾವಿಸಲಾಗಿದ್ದು, ಅವರ ಮೃತ್ಯುವಿನ ಕುರಿತು ಇಂದಿಗೂ ನಾನಾ ಊಹಾಪೋಹಗಳು ಹರಿದಾಡುತ್ತಿವೆ.



ಪ್ರಧಾನಿ ನರೇಂದ್ರ ಮೋದಿ ಅವರು ವಿಡಿಯೋ ಮೂಲಕ ಜಲಸಂಚಯ್ ಜನ್ ಭಾಗಿದಾರಿಗೆ ಚಾಲನೆ ನೀಡಿದರು.

### ಅನಿರೀಕ್ಷಿತ ಸನ್ನಿವೇಶ ಮುನ್ಸೂಚನೆ

# ಸನ್ನದ್ಧವಾಗಿರಲು ಭಾರತೀಯ ಸೇನೆಗೆ ರಕ್ಷಣಾ ಸಚಿವ ಸೂಚನೆ



**ನವದೆಹಲಿ, ಸೆ.6:** ನೆರೆಹೊರೆಯ ದೇಶಗಳಲ್ಲಿ ತೀವ್ರವಾದ ರಾಜಕೀಯ ಬೆಳವಣಿಗೆಗಳು ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ಅನಿರೀಕ್ಷಿತವಾದ ಸನ್ನಿವೇಶಗಳಿಗೆ ಸಿದ್ದವಾಗಿರಿ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾರತೀಯ ಸೇನೆಗೆ ಎಚ್ಚರಿಕೆ ರವಾನಿಸಿದ್ದಾರೆ. ರಕ್ಷಣಾ ಸಚಿವರ ಈ ಎಚ್ಚರಿಕೆ ಹಲವು ಆತಂಕವನ್ನು ಹುಟ್ಟುಹಾಕಿದೆ. ಬಾಂಗ್ಲಾದೇಶ ಹಾಗೂ ಪಾಕಿಸ್ತಾನದಲ್ಲಿ ರಾಜಕೀಯ ವೈಪರೀತ್ಯಗಳು ನಡೆಯುತ್ತಿದ್ದು, ದೇಶದಲ್ಲಿ ಅಲ್ಲೋಲಕಲ್ಲೋಲ ಪರಿಸ್ಥಿತಿಯಿದೆ. ಇನ್ನು ಶ್ರೀಲಂಕಾ ಕೂಡ ಈ ಹಿಂದಿನ ಅವಘಡದಿಂದ ಇನ್ನೂ ಚೇತರಿಸಿಕೊಂಡಿಲ್ಲ. ನೇಪಾಳದಲ್ಲಿ ಭಾರತದ ವಿರೋಧಿಯಾದ ಸರ್ಕಾರ ಆಡಳಿತದಲ್ಲಿದ್ದು , ಚೀನಾದೊಂದಿಗೆ ಸಾಮರಸ್ಯ ಸಾಧಿಸುತ್ತಿದೆ. ಚೀನಾ ಮೊದಲಿನಿಂದಲೂ ಭಾರತದ ಗಡಿಯಲ್ಲಿ ತಂಟೆಯನ್ನು ಮುಂದುವರೆಸುತ್ತಲೇ ಇದೆ. ಇನ್ನು ಮಿಕ್ಕಂತೆ ಮಾಲ್ಡಿವ್ಸ್ ತನ್ನ ಭಾರತ ವಿರೋಧಿ ಮನೋಭಾವವನ್ನು ತೊರೆದಿಲ್ಲ. ಇವೆಲ್ಲವೂ ಭಾರತಕ್ಕೆ ಸಂಕಷ್ಟವಾಗಿ ಪರಿಣಮಿಸುವ ಸಾಧ್ಯತೆ ಇದೆಯೆನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಗಡಿಯಲ್ಲಿ ಈಗಾಗಲೇ ಕಟ್ಟೆಚ್ಚರ ವಹಿಸಲಾಗಿದ್ದು, ಹಲವೆಡೆ ಸೇನೆಯನ್ನೂ ಸಹ ಜಮಾವಣೆ ಮಾಡಲಾಗಿದೆ. ರಕ್ಷಣಾ ಸಚಿವರ ಎಚ್ಚರಿಕೆ ಹಲವು ಚರ್ಚೆಗಳನ್ನೂ ಸಹ ಹುಟ್ಟುಹಾಕಿದೆ.

# ವಿನೇಶ್ ಫೋಗಟ್, ಭಜರಂಗ್ ಪುನಿಯಾ ಕಾಂಗ್ರೆಸ್ ಸೇರ್ಪಡೆ



**ನವದೆಹಲಿ, ಸೆ.6**: ಹರಿಯಾಣ ವಿಧಾನಸಭೆ ಚುನಾವಣೆಗೂ ಮುನ್ನ ಒಲಿಂಪಿಕ್ ಕುಸ್ತಿಪಟುಗಳಾದ ವಿನೇಶ್ ಫೋಗಟ್ ಮತ್ತು ಬಜರಂಗ್ ಪುನಿಯಾ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡಿದ್ದಾರೆ. ಎಐಸಿಸಿ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾದ ಬಳಿಕ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆಯಾದರು. ಸೆಪ್ಟೆಂಬರ್ 4 ರಂದು ಇಬ್ಬರು ಕುಸ್ತಿಪಟುಗಳು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿ ಕಾಂಗ್ರೆಸ್ ಸೇರ್ಪಡೆ ಬಗ್ಗೆ ಚರ್ಚೆ ನಡೆಸಿದ್ದರು. ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಅವರು ಸ್ಪರ್ಧಿಸಬಹುದು ಎನ್ನಲಾಗುತ್ತಿದೆ. ಕಾಂಗ್ರೆಸ್‌ಗೆ ಸೇರ್ಪಡೆಗೊಂಡ ಬಳಿಕ ಮಾತನಾಡಿದ ವಿನೇಶ್ ಫೋಗಟ್, ಮಹಿಳೆಯರನ್ನು ಬೆಂಬಲಿಸುವ ಪಕ್ಷಕ್ಕೆ ಸೇರ್ಪಡೆಯಾಗಲು ಹೆಮ್ಮೆಪಡುತ್ತೇನೆ. ನಾನು ಕಾಂಗ್ರೆಸ್ ಪಕ್ಷಕ್ಕೆ ಧನ್ಯವಾದ ಹೇಳುತ್ತೇನೆ, ನಮ್ಮ ಕೆಟ್ಟ ಸಮಯದಲ್ಲಿ ನಮ್ಮನ್ನು ಪ್ರಾಮಾಣಿಕವಾಗಿ ಬೆಂಬಲಿಸಿದವರು ಯಾರು ಎಂದು ನಮಗೆ ಚೆನ್ನಾಗಿ ತಿಳಿದಿದೆ. ನಮ್ಮನ್ನು ರಸ್ತೆಗಳಲ್ಲಿ ಎಳೆದಾಡಿದರು, ಬಿಜೆಪಿ ನನ್ನ ಇಮೇಜ್ಗೆ ಧಕ್ಕೆ ತಂದಿದೆ. ಮಾಜಿ ಸಂಸದ ಬ್ರಿಜ್ ಭೂಷಣ್ ಸಿಂಗ್ ವಿರುದ್ಧದ ಕಾನೂನು ಮುಂದು ವರಿಯುತ್ತದೆ ಎಂದರು.

ಅಸಹಾಯಕರಾಗಿರುವ ಪ್ರತಿಯೊಬ್ಬ ಮಹಿಳೆಯೊಂದಿಗೆ ನಾನು ನಿಲ್ಲುತ್ತೇನೆ, ನಾನು ಬಯಸಿದ್ದರೆ ನಾನು ಜಂತರ್ ಮಂತರ್‌ನಲ್ಲಿ ಕುಸ್ತಿಯನ್ನು ಬಿಡಬಹುದಿತ್ತು. ಆದರೆ ಬಿಜೆಪಿ ಐಟಿ ಸೆಲ್ ನಮ್ಮ ವೃತ್ತಿಜೀವನ ಮುಗಿದಿದೆ ಮತ್ತು ನಾವು ಕುಸ್ತಿ ಆಡಲು ಬಯಸುವುದಿಲ್ಲ ಎಂದು ಸುಳ್ಳು ಹೇಳುತ್ತಿತ್ತು. ಅದಕ್ಕೆ ಉತ್ತರಿಸಲು ನಾನು ರಾಷ್ಟ್ರೀಯ ಪಂದ್ಯಗಳಲ್ಲಿ ಆಡಿದ್ದೇನೆ ಮತ್ತು ಒಲಿಂಪಿಕ್ಸ್‌ನಲ್ಲೂ ಶಕ್ತಿ ಮೀರಿ ಪ್ರಯತ್ನಿಸಿದ್ದೇನೆ ಎಂದರು. ಬಜರಂಗ್ ಅವರು ನಮ್ಮ ಜೊತೆಗೆ ನಿಂತರು ಎನ್ನುವ ಕಾರಣಕ್ಕೆ ಡೋಪ್ ಆರೋಪದ ಮೇಲೆ ನಾಲ್ಕು ವರ್ಷಗಳ ಕಾಲ ನಿಷೇಧಿಸಲಾಯಿತು. ಕಾಂಗ್ರೆಸ್ ಕುಸ್ತಿಪಟುಗಳೊಂದಿಗೆ ನಿಂತಿದೆ, ಬಿಜೆಪಿ ಮಹಿಳಾ ಕುಸ್ತಿಪಟುಗಳಿಗೆ ಅನ್ಯಾಯ ಮಾಡಿದೆ ಎಂದು ಆರೋಪಿಸಿದರು. ಪ್ಯಾರಿಸ್ ಒಲಿಂಪಿಕ್ಸ್‌ನಿಂದ ಫೋಗಟ್ ಅವರನ್ನು ಅನರ್ಹಗೊಳಿಸಿರುವುದಕ್ಕೆ ಇಡೀ ದೇಶವೇ ಬೆಚ್ಚಿಬೀಳಿಸಿದಾಗ ಬಿಜೆಪಿ ಸಂಭ್ರಮಿಸುತ್ತಿದೆ ಎಂದು ಬಜರಂಗ್ ಪುನಿಯಾ ಆರೋಪಿಸಿದರು. ವಿನೇಶ್ ಫೈನಲ್ಗೆ ತಲುಪಿದಾಗ ಇಡೀ ದೇಶವೇ ಸಂತಸಗೊಂಡಿತ್ತು, ದುರದೃಷ್ಟವಶಾತ್ ಆಕೆಯನ್ನು ಅನರ್ಹಗೊಳಿಸಿದಾಗ ಬಿಜೆಪಿ ಐಟಿ ಸೆಲ್ನವರು ಸಂಭ್ರಮಿಸಿದ್ದರು ಎಂದರು. ಹರ್ಯಾಣದ ಮಾಜಿ ಮುಖ್ಯಮಂತ್ರಿ ಭೂಪಿಂದರ್ ಸಿಂಗ್ ಹೂಡಾ ಆಕೆಯ ಸಾಧನೆಗಳನ್ನು ಗುರುತಿಸಿ ರಾಜ್ಯಸಭಾ ಸ್ಥಾನವನ್ನು ನೀಡಲು ಪ್ರಸ್ತಾಪಿಸಿದರು; ಆದಾಗ್ಯೂ, ಫೋಗಟ್ ತನ್ನ ವಯಸ್ಸಿನ ಕಾರಣದಿಂದಾಗಿ ಅನರ್ಹಳಾಗಿದ್ದಳು ಎಂದರು. ಕೆ.ಸಿ ವೇಣುಗೋಪಾಲ್ ಮಾತನಾಡಿ, ಇಬ್ಬರು ಕುಸ್ತಿಪಟುಗಳು ಸಾಧನೆಯನ್ನು ಶ್ಲಾಘಿಸಿದರು. ವಿನೇಶ್ ಫೋಗಟ್ ರಾಜೀನಾಮೆ ನೀಡಿದ್ದು ಅಧಿಕಾರಿಗಳು ರಾಜಕೀಯ ಮಾಡುವುದನ್ನು ಬಿಟ್ಟು ಅವರ ರಾಜೀನಾಮೆಯನ್ನು ಅಂಗೀಕರಿಸಬೇಕು ಎಂದು ಒತ್ತಾಯಿಸಿದರು.

# ಭವಿಷ್ಯದಲ್ಲಿ ಎಲೆಕ್ಟ್ರಿಕ್ ವಾಹನ ತಯಾರಿಕೆಗೆ ಸರ್ಕಾರದಿಂದ ಸಬ್ಸಿಡಿ ಇಲ್ಲ: ಗಡ್ಕರಿ ಸ್ಪಷ್ಟನೆ



**ಬೆಂಗಳೂರು, ಸೆ.6:** ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಎಲೆಕ್ಟ್ರಿಕ್ ವಾಹನಗಳ ಮಾರುಕಟ್ಟೆಗೆ ಸಬ್ಸಿಡಿ ನೀಡುವ ಅಗತ್ಯವಿಲ್ಲ, ಏಕೆಂದರೆ ಗ್ರಾಹಕರು ಈಗ ಇವಿ ಅಥವಾ ಸಿಎನ್‌ಜಿ ವಾಹನಗಳನ್ನು ಆರಿಸಿಕೊಳ್ಳುತ್ತಿದ್ದಾರೆ ಎಂದು ಗುರುವಾರ ಹೇಳಿದ್ದಾರೆ. ಬಿಎನ್‌ಇಎಫ್ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಗಡ್ಕರಿ, ಆರಂಭದಲ್ಲಿ ಎಲೆಕ್ಟ್ರಿಕ್ ವಾಹನಗಳ ತಯಾರಿಕೆಯ ವೆಚ್ಚಗಳು ಹೆಚ್ಚಾಗಿತ್ತು, ಆದರೆ ಬೇಡಿಕೆ ಹೆಚ್ಚಾದಂತೆ ಉತ್ಪಾದನಾ ವೆಚ್ಚಗಳು ಕಡಿಮೆಯಾಗಿದೆ, ಇದರಿಂದಾಗಿ ಹೆಚ್ಚಿನ ಸಬ್ಸಿಡಿಗಳು ಅನಗತ್ಯವಾಗಿವೆ ಎಂದು ಹೇಳಿದ್ದಾರೆ.ಪೆಟ್ರೋಲ್ ಮತ್ತು ಡೀಸೆಲ್ ವಾಹನಗಳಿಗಿಂತ ಎಲೆಕ್ಟ್ರಿಕ್ ವಾಹನಗಳ ಮೇಲಿನ ಜಿಎಸ್‌ಟಿ ಕಡಿಮೆಯಾಗಿದೆ. ನನ್ನ ಅಭಿಪ್ರಾಯದಲ್ಲಿ, ಎಲೆಕ್ಟ್ರಿಕ್ ವಾಹನಗಳ ಉತ್ಪಾದನೆಗೆ ಇನ್ನು ಮುಂದೆ ಸರ್ಕಾರದಿಂದ ಸಬ್ಸಿಡಿ ಅಗತ್ಯವಿಲ್ಲ. ಸಬ್ಸಿಡಿಗಳನ್ನು ಕೇಳುವುದು ಇನ್ನು ಮುಂದೆ ಸಮರ್ಥನೀಯವಲ್ಲ ಎಂದು ಅವರು ಹೇಳಿದರು. ಪ್ರಸ್ತುತ, ಹೈಬ್ರಿಡ್ ಸೇರಿದಂತೆ ಆಂತರಿಕ ದಹನಕಾರಿ ಎಂಜಿನ್‌ಗಳಿಂದ ಚಾಲಿತ ವಾಹನಗಳಿಗೆ 28% ಮತ್ತು ಎಲೆಕ್ಟ್ರಿಕ್ ವಾಹನಗಳ ಮೇಲೆ 5% ಜಿಎಸ್‌ಟಿ ವಿಧಿಸಲಾಗುತ್ತದೆ. ಬುಧವಾರ, ಕೇಂದ್ರ ಭಾರೀ ಕೈಗಾರಿಕೆಗಳ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು, ಸರ್ಕಾರವು ತನ್ನ ಪ್ರಮುಖ ಎಲೆಕ್ಟ್ರಿಕ್ ಮೊಬಿಲಿಟಿ ಅಡಾಪ್ಷನ್ ಸ್ಕೀಮ್ ಫೇಮ್‌ನ ಮೂರನೇ ಹಂತವನ್ನು ಒಂದು ಅಥವಾ ಎರಡು ತಿಂಗಳುಗಳಲ್ಲಿ ಅಂತಿಮಗೊಳಿಸುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ.ಯೋಜನೆಗಾಗಿ ಸ್ವೀಕರಿಸಿದ ಒಳಹರಿವಿನ ಕುರಿತು ಅಂತರ-ಸಚಿವಾಲಯದ ಗುಂಪು ಕಾರ್ಯನಿರ್ವಹಿಸುತ್ತಿದೆ ಮತ್ತು (ಹೈಬ್ರಿಡ್ ಮತ್ತು) ಎಲೆಕ್ಟ್ರಿಕ್ ವೆಹಿಕಲ್ ಯೋಜನೆಯ ವೇಗದ ಅಳವಡಿಕೆ ಮತ್ತು ತಯಾರಿಕೆಯ ಮೊದಲ ಎರಡು ಹಂತಗಳಲ್ಲಿ ಸಮಸ್ಯೆಗಳನ್ನು ಪರಿಹರಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಅವರು ಹೇಳಿದರು. FAME 3 ತಾತ್ಕಾಲಿಕ ಎಲೆಕ್ಟ್ರಿಕ್ ಮೊಬಿಲಿಟಿ ಪ್ರಮೋಷನ್ ಸ್ಕೀಮ್ 2024 ಅನ್ನು ಬದಲಿಸುತ್ತದೆ, ಇದು ಸೆಪ್ಟೆಂಬರ್‌ನಲ್ಲಿ ಮುಕ್ತಾಯಗೊಳ್ಳಲಿದೆ.ಕೇಂದ್ರ ಸರ್ಕಾರವು ವೇಗವಾಗಿ ಅಳವಡಿಸಿಕೊಳ್ಳುವಿಕೆ ಮತ್ತು ತಯಾರಿಕೆ (ಹೈಬ್ರಿಡ್ ಮತ್ತು) ಎಲೆಕ್ಟ್ರಿಕ್ ವೆಹಿಕಲ್ (FAME) ಯೋಜನೆ ಇನ್ನೆರಡು ತಿಂಗಳಲ್ಲಿ ಜಾರಿಗೆ ಬರಲಿದೆ ಎಂದು ಭಾರೀ ಕೈಗಾರಿಕೆ ಸಚಿವ ಎಚ್.ಡಿ.ಕುಮಾರಸ್ವಾಮಿ ಬುಧವಾರ ಹೇಳಿದ್ದಾರೆ. ತಾತ್ಕಾಲಿಕ ಎಲೆಕ್ಟ್ರಿಕ್ ಮೊಬಿಲಿಟಿ ಪ್ರಮೋಷನ್ ಸ್ಕೀಮ್ 2024 ಈ ತಿಂಗಳ ಅಂತ್ಯದ ವೇಳೆಗೆ ಮುಕ್ತಾಯಗೊಳ್ಳಲಿರುವ ಕಾರಣ ಸಚಿವರ ಭರವಸೆ ಬಂದಿದೆ. ಯೋಜನೆಗೆ ಬಂದ ಒಳಹರಿವಿನ ಕುರಿತು ಅಂತರ ಸಚಿವಾಲಯದ ಗುಂಪು ಕೆಲಸ ಮಾಡುತ್ತಿದೆ ಮತ್ತು ಯೋಜನೆಯ ಮೊದಲ ಎರಡು ಹಂತಗಳಲ್ಲಿ ಸಮಸ್ಯೆಗಳನ್ನು ಪರಿಹರಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಕುಮಾರಸ್ವಾಮಿ ಮಾಹಿತಿ ನೀಡಿದರು."ಫೇಮ್-III ನಲ್ಲಿ, ಹಲವಾರು ಸಲಹೆಗಳು ಬರುತ್ತಿವೆ. ಏಕೆಂದರೆ FAME-I, FAME-II ನಲ್ಲಿ ಯಾವುದೇ ಕೊರತೆಯಿದೆ, ಅದನ್ನು ಹೇಗೆ ಬೇರ್ಪಡಿಸುವುದು, ಅದಕ್ಕಾಗಿ ನಾವು ಕೆಲಸ ಮಾಡುತ್ತಿದ್ದೇವೆ. ¦JAM ಕೂಡ ಕೆಲವು ಸಲಹೆಗಳನ್ನು ನೀಡಿದೆ, ಅದಕ್ಕಾಗಿ ನಮ್ಮ ಅಂತರ-ಸಚಿವಾಲಯದ ಗುಂಪು ಕಾರ್ಯನಿರ್ವಹಿಸುತ್ತಿದೆ. ನಾನು ಭಾವಿಸುತ್ತೇನೆ 1 ತಿಂಗಳು, 2 ತಿಂಗಳೊಳಗೆ ಅದನ್ನು ತೆರವುಗೊಳಿಸಲಾಗುವುದು ಎಂದು ಕುಮಾರಸ್ವಾಮಿ ಹೇಳಿದರು. ಹಲವಾರು ಎಲೆಕ್ಟ್ರಿಕ್ ವೆಹಿಕಲ್ (EV) ತಯಾರಕರು ಮತ್ತು ಉದ್ಯಮ ಸಂಸ್ಥೆಗಳು ಬ್ಯಾಟರಿ ಚಾಲಿತ ವಾಹನಗಳ ಮಾರಾಟದಲ್ಲಿನ ಕುಸಿತದ ಕಾರಣದಿಂದಾಗಿ FAME ನ ಮೂರನೇ ಹಂತವನ್ನು ಪರಿಚಯಿಸಲು ಸರ್ಕಾರವನ್ನು ಒತ್ತಾಯಿಸುತ್ತಿವೆ. ಈಂಒಇ-ಖಖ ಯೋಜನೆಗಿಂತ ಭಿನ್ನವಾಗಿ, EMPS ಅಡಿಯಲ್ಲಿ ಸಬ್ಸಿಡಿಯು ವಿದ್ಯುತ್ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳಿಗೆ ಸೀಮಿತವಾಗಿದೆ.ಭಾರೀ ಉದ್ಯಮ ಸಚಿವಾಲಯದ ಮೂಲಗಳು ಫೇಮ್ 3 ಯೋಜನೆಯಲ್ಲಿ ದೊಡ್ಡ ಬದಲಾವಣೆಗಳಿಲ್ಲ ಮತ್ತು ಯೋಜನೆಯ ಎರಡನೇ ಹಂತಕ್ಕೆ ಹೋಲಿಸಿದರೆ ಸಬ್ಸಿಡಿ ಮಾನದಂಡಗಳು ಒಂದೇ ಆಗಿರಬಹುದು ಎಂದು ಸೂಚಿಸಿವೆ. "ಯೋಜನೆಯು ಅಂತಿಮ ಹಂತದಲ್ಲಿದೆ ಮತ್ತು ಇದು ಅಕ್ಟೋಬರ್ ಆರಂಭದಲ್ಲಿ ಹೊರಬರುವ ಸಾಧ್ಯತೆಯಿದೆ" ಎಂದು ಸಚಿವಾಲಯದ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಫೇಮ್-II ಅನ್ನು 2019 ರಲ್ಲಿ ಪರಿಚಯಿಸಲಾಯಿತು. ಆದಾಗ್ಯೂ, ನಂತರ ಅದನ್ನು 1,500 ಕೋಟಿ ರೂ.ಗಳ ಹೆಚ್ಚುವರಿ ವೆಚ್ಚದೊಂದಿಗೆ ಮಾರ್ಚ್ 2024 ರವರೆಗೆ ವಿಸ್ತರಿಸಲಾಯಿತು. ಈ ಯೋಜನೆಯು ಮೊದಲು 10 ಲಕ್ಷ ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳು, ಐದು ಲಕ್ಷ ಎಲೆಕ್ಟ್ರಿಕ್ ತ್ರಿಚಕ್ರ ವಾಹನಗಳು, 55,000 ಪ್ರಯಾಣಿಕ ಕಾರುಗಳು ಮತ್ತು 7,000 ಎಲೆಕ್ಟ್ರಿಕ್ ಬಸ್‌ಗಳನ್ನು ಬೆಂಬಲಿಸಲು ಬಂದಿತು.

## ಮೊದಲನೇ ಪುಟದಿಂದ

# ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆ

ಆದರೆ ಮೂರನೇ ಸಂಖ್ಯೆಯ ವಿಯರ್ ಇನ್ನೂ ಸಿದ್ದವಾಗದ ಕಾರಣ ಉಳಿದ 7 ವಿಯರ್‌ಗಳೂ ಸಿದ್ಧವಾಗಿವೆ. ಮೊದಲ ಹಂತದಲ್ಲಿ 1500 ಕ್ಯೂಸೆಕ್ ನೀರನ್ನು ಲಿಫ್ಟ್ ಮಾಡಲಾಗುತ್ತದೆ. ತದನಂತರ 48 ಕಿಲೋಮೀಟರ್ ತೆರೆದ ಕಾಲುವೆಯಿಂದ ವೇದ ವ್ಯಾಲಿಯಿಂದ ವಾಣಿ ವಿಲಾಸ ಅಣೆಕಟ್ಟೆಗೆ ನೀರು ಹರಿಸಲಾಗುತ್ತದೆ.ಬರಪೀಡಿತ ಜಿಲ್ಲೆಗಳಿಗೆ ನೀರು ಹರಿಸುವ ಯೋಜನೆ ಇದಾಗಿದೆ. ಹಾಸನದ ಸಕಲೇಶಪುರ ತಾಲೂಕಿನ ಪಶ್ಚಿಮಘಟ್ಟದ ಮೇಲ್ಭಾಗದಲ್ಲಿ ಹರಿಯುವ ಕಾಡುಮನೆ ಹೊಳೆ, ಎತ್ತಿನಹೊಳೆ, ಕೇರಿಹೊಳೆ ಮತ್ತು ಹೊಂಗದಹಳ್ಳದಿಂದ ನೀರು ತರುವ ಯೋಜನೆಯಾಗಿದೆ. ಮುಂಗಾರು ಮಳೆಯ ಸಂದರ್ಭದಲ್ಲಿ ಅಂದರೆ 139 ದಿನಗಳಲ್ಲಿ 24.01 ಟಿಎಂಸಿ ನೀರನ್ನು ಬಯಲು ಸೀಮೆ ಜಿಲ್ಲೆಗಳಿಗೆ ಹರಿಸಲಾಗುತ್ತದೆ.ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಿಗೆ ನೀರು ತರುವುದಾಗಿದೆ.ಹಾಸನ, ಜಿಲ್ಲೆಯ ಪಶ್ಚಿಮಘಟ್ಟ ಪ್ರದೇಶದಲ್ಲಿ ಹರಿಯೋ ಎತ್ತಿನಹೊಳೆ ಪಶ್ಚಿಮಘಟ್ಟದಿಂದ ಪಶ್ಚಿಮ ದಿಕ್ಕಿನೆಡೆಗೆ ಅಂದರೆ ಸಮುದ್ರದ ಕಡೆಗೆ ಹರಿಯುತ್ತದೆ. ಹೀಗೆ ಸಮುದ್ರ ಸೇರಿ ಸುಮಾರು 24 ಟಿಎಂಸಿ ನೀರನ್ನು ಬಯಲುಸೀಮೆ ಜಿಲ್ಲೆಗಳಾದ ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ಬೆಂಗಳೂರು, ರಾಮನಗರ ಹಾಗೂ ಹಾಸನ ಮತ್ತು ಚಿಕ್ಕಮಗಳೂರು ಸೇರಿ ಒಟ್ಟು ಏಳು ಜಿಲ್ಲೆಗಳತ್ತ ಅಂದ್ರೆ ಪೂರ್ವಾಭಿಮುಖವಾಗಿ ನದಿಯ ನೀರನ್ನೇ ತಿರುಗಿಸುವ ಮಹತ್ವದ ಯೋಜನೆ ಇದಾಗಿದೆ. ಎತ್ತಿನಹೊಳೆ ರಾಜ್ಯದ ಬೃಹತ್ ಯೋಜನೆ:- ಇತ್ತೀಚಿನ ವರ್ಷಗಳಲ್ಲಿ ನಮ ರಾಜ್ಯದಲ್ಲಿ ನಡೆಯುತ್ತಿರುವ ಅತಿದೊಡ್ಡ ನಿರಾವರಿ ಯೋಜನೆ ಈ ಎತ್ತಿನಹೊಳೆ ಯೋಜನೆ. ಒಟ್ಟು 24 ಟಿಎಂಸಿ ನೀರನ್ನು ಮೇಲೆತ್ತಿ ಹರಿಸುವ ಈ ಯೋಜನೆಯಲ್ಲಿ 14 ಟಿಎಂಸಿ ಕುಡಿಯೋ ನಿರಿಗಾಗಿಯೂ 10 ಟಿಎಂಸಿ ನೀರನ್ನ ಉದ್ದೇಶಿತ ಏಳು ಜಿಲ್ಲೆಗಳ 527 ಕೆರೆಗಳನ್ನು ತುಂಬಿಸುವ ನಿಟ್ಟಿನಲ್ಲಿ ಈ ಯೋಜನೆ ಜಾರಿ ಮಾಡಲಾಗಿದೆ. ಈ ಯೋಜನೆಗಾಗಿ ಒಟ್ಟು ನಾಲ್ಕು ಭಾಗಗಳಾಗಿ ವಿಭಾಗ ಮಾಡಲಾಗಿದೆ. ನೀರೆತ್ತೋ ತೊಟ್ಟಿಗಳು, ಗುರುತ್ವ ಕಾಲುವೆ, ಸಮತೋಲನ ಜಲಾಶಯ ಮತ್ತು ಪೈಪ್‌ಲೈನ್‌ಗಳಾಗಿ ನಾಲ್ಕು ಭಾಗಮಾಡಿ ಯೋಜನೆ ಜಾರಿ ಮಾಡಲಾಗುತ್ತಿದೆ. ಇದಕ್ಕಾಗಿ ಒಟ್ಟು ಎಂಟು ಜಲಮೂಲಗಳಿಂದ ನೀರು ಹರಿಸಲು ಎಂಟು ಪೈಪ್ ಲೈನ್ ಮಾಡಲಾಗಿದೆ.9 ಪಂಪ್‌ಹೌಸ್, 8 ಉಪಕೇಂದ್ರ ಮೂಲಕ ಈ ಯೋಜನೆಯ ನೀರು ಹರಿಯುತ್ತದೆ. ಒಟ್ಟು 261 ಕಿ.ಮೀ ಈ ಯೋಜನೆಯಲ್ಲಿ ನೀರು ಹರಿಯೋ ಕಾಲುವೆಯ ಉದ್ದವಾಗಿದ್ದು ಈಗಾಗಲೇ ಮೂಲದಿಂದ ಸುಮಾರು 42 ಕಿ.ಮೀ ಅಂದರೆ ಬೇಲೂರಿನ ಐದಳ್ಳ ಕಾವಲುವರೆಗೂ ನೀರು ಸರಾಗವಾಗಿ ಹರಿಯಲು ಬೇಕಾದ ಕಾಮಗಾರಿ ಮುಗಿದಿದೆ. ಆದರೆ ಐದಳ್ಳ ಕಾವಲು ಬಳಿ 5 ಕಿ.ಮೀ ಅರಣ್ಯ ಭೂಮಿಯಲ್ಲಿ ಕಾಲುವೆ ಹೋಗಬೇಕಿರುವುದರಿಂದ ಅಲ್ಲಿ ಕಾಮಗಾರಿ ಆಗದೇ 32ನೇ ಕಿ.ಮೀನಲ್ಲಿ ನೀರನ್ನು ಬೇರೆಡೆ ತಿರುಗಿಸಿ ಚಿತ್ರದುರ್ಗ ಜಿಲ್ಲೆಯ ವಾಣಿವಿಲಾಸ ಸಾಗರದತ್ತ ಹರಿಸಲಾಗುತ್ತಿದೆ.ಎತ್ತಿನಹೊಳೆಯ ಈ ಯೋಜನೆಗಾಗಿ ಸಕಲೇಶಪುರ ತಾಲ್ಲೂಕಿನ ವಿವಿಧ ಭಾಗಗಳಲ್ಲಿ ಎಂಟು ಪೈಪ್‌ಲೈನ್‌ಗಳ ಮೂಲಕ ನೀರು ಹರಿಯಲಿದ್ದು ಮೊದಲ ಪೈಪ್‌ಲೈನ್‌ನಲ್ಲಿ 6.6 ಟಿಎಂಸಿ ನೀರು ಸಿಗಲಿದೆ, ಎರಡನೇ ಪೈಪ್‌ನಲ್ಲಿ 1.0 ಟಿಎಂಸಿ, ಮೂರನೇ ಪೈಪ್‌ಲೈನ್ ನಲ್ಲಿ 1.4 ಟಿಎಂಸಿ, ನಾಲ್ಕನೆಯದ್ದರಲ್ಲಿ 0.98 ಟಿಎಂಸಿ, 5ನೇ ಪೈಪ್‌ಲೈನ್‌ನಲ್ಲಿ 1.73 ಟಿಎಂಸಿ, ಆರನೇ ಪೈಪ್‌ಲೈನ್‌ನಲ್ಲಿ 2.01 ಟಿಎಂಸಿ, ಏಳನೇ ಪೈಪ್‌ಲೈನ್‌ನಲ್ಲಿ 7.76 ಟಿಎಂಸಿ, ಎಂಟನೇಯದರಲ್ಲಿ 2.51 ಟಿಎಂಸಿ ಸೇರಿ ಒಟ್ಟು 24 ಟಿಎಂಸಿ ನೀರು ಸಿಗಲಿದ್ದು, ಈ ನೀರನ್ನು ಬಯಲುಸೀಮೆಗೆ ಹರಿಸುವುದು ಈ ಯೋಜನೆಯ ಬಹುಮುಖ್ಯ ಉದ್ದೇಶವಾಗಿದೆ.

# ಅಗ್ಗದ ದರದಲ್ಲಿ ವಿದ್ಯುತ್ ಉತ್ಪಾದಿಸುತ್ತಿದೆ ಭಾರತ

ಭಾರತದ ತ್ವರಿತ ಬೆಳವಣಿಗೆ ಮತ್ತು ಆರ್ಥಿಕತೆ ಮೇಲೆ ಧನಾತ್ಮಕ ಪ್ರಭಾವ ಬೀರಲಿದೆ ಎಂದು ಪ್ರತಿಪಾದಿಸಿದರು. ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತ ಒಂದು ಸ್ಪರ್ಧಾತ್ಮಕ ಉದ್ಯಮವನ್ನೇ ಸೃಷ್ಟಿಸಲಿದೆ. ಅಷ್ಟರಮಟ್ಟಿಗೆ ಸದೃಢವಾಗಿದೆ. ಭಾರತದಲ್ಲಿ ಸೌರಶಕ್ತಿಯ ವೆಚ್ಚ ವಿಶ್ವದಲ್ಲೇ ಅತ್ಯಂತ ಅಗ್ಗವಾಗಿದೆ ಎಂದು ಹೇಳಿದರು.

ಹೆಚ್ಚುವರಿ ವಿದ್ಯುಚ್ಛಕ್ತಿ ಸಂಗ್ರಹಿಸಲು ಯೋಜಿಸಿದ್ದು, ದೊಡ್ಡ ಪ್ರಮಾಣದ ಗ್ರಿಡ್ ಸಂಗ್ರಹಣೆಯಲ್ಲಿ ಯಶಸ್ಸು ಅತ್ಯಗತ್ಯ. ಇದಕ್ಕಾಗಿ PSP ಯೋಜನೆಗಳ ಅಭಿವೃದ್ಧಿಗೆ ವೇಗ ನೀಡಲಾಗುತ್ತಿದೆ ಎಂದರು. 24,000 ಕೋಟಿ ರೂ. ವೆಚ್ಚದಲ್ಲಿ ಹೆಚ್ಚಿನ ದಕ್ಷತೆಯ ಸೌರ PV ಮಾದರಿ ಘಟಕಕ್ಕೆ PLI ಯೋಜನೆ ಜಾರಿಗೊಳಿಸುತ್ತಿದ್ದು, ಈ ಯೋಜನೆಯಡಿ 48,337 MW ಸಾಮರ್ಥ್ಯದ ಉನ್ನತ-ದಕ್ಷತೆಯ ಸೌರ PV ಮಾದರಿಗಳನ್ನು ಸ್ಥಾಪಿಸಲು ಅನುಮತಿ ನೀಡಲಾಗಿದೆ ಎಂದು ತಿಳಿಸಿದರು. ಭಾರತದ ನವೀಕರಿಸಬಹುದಾದ ಇಂಧನ ಸಾಮರ್ಥ್ಯ 10 ವರ್ಷಗಳಲ್ಲಿ 75.52 ಉಫ ನಿಂದ 203 ಉಫ ಗಿಂತ ಹೆಚ್ಚಾಗಿದೆ. 165 ಪ್ರತಿಶತದಷ್ಟು ಹೆಚ್ಚಳ ಕಂಡಿದೆ. ಭಾರತದಲ್ಲಿ ಒಟ್ಟು ಆರ್‌ಇ ಉತ್ಪಾದನೆಯು 193.50 ಬಿಲಿಯನ್ ಯುನಿಟ್‌ಗಳಿಂದ 2023-24ರಲ್ಲಿ 360 ಶತಕೋಟಿ ಯೂನಿಟ್‌ಗೆ ಏರಿಕೆಯಾಗಿದೆ, ಇದು ಶೇ.86ರಷ್ಟು ಹೆಚ್ಚಳವಾಗಿದೆ ಎಂದು ವಿವರಿಸಿದರು.

**3 ತಿಂಗಳಲ್ಲಿ 2.5 ಲಕ್ಷಕ್ಕೂ ಅಧಿಕ ಸೂರ್ಯ ಘರ್:** ತಾವು ನವೀಕರಿಸಬಹುದಾದ ಇಂಧನ ಖಾತೆ ವಹಿಸಿಕೊಂಡ ಮೇಲೆ ಪ್ರಧಾನ ಮಂತ್ರಿ ಸೂರ್ಯಘರ್ ಮುಫ್ತ್ ಬಿಜ್ಲಿ ಯೋಜನೆ ಅಡಿಯಲ್ಲಿ 2.5 ಲಕ್ಷಕ್ಕೂ ಹೆಚ್ಚು ಛಾವಣಿ ಸೌರ ಘಟಕಗಳನ್ನು ಸ್ಥಾಪಿಸಲಾಗಿದೆ. ಒಟ್ಟು 3.28 ಲಕ್ಷ ಅಳವಡಿಕೆಗಳ ಪೈಕಿ ಶೇ.75ಕ್ಕೂ ಹೆಚ್ಚು ಈ ಮೂರು ತಿಂಗಳಲ್ಲಿ ಆಗಿದೆ ಎಂದು ತಿಳಿಸಿದರು.

# ಜಮ್ಮು-ಕಾಶ್ಮೀರ ವಿಧಾನಸಭಾ ಚುನಾವಣೆ: ಕಾಂಗ್ರೆಸ್ ಗ್ಯಾರಂಟಿ ಮಾದರಿಯಲ್ಲೇ ಬಿಜೆಪಿ ಭರವಸೆ



ಜಮ್ಮು ಕಾಶ್ಮೀರ ವಿಧಾನಸಭೆ ಚುನಾವಣೆ ಹಿನ್ನಲೆ ಬಿಜೆಪಿ ವತಿಯಿಂದ ಗೃಹ ಸಚಿವ ಅಮಿತ್‌ಶಾ, ಕೇಂದ್ರ ಸಚಿವರಾದ ಜಿತೇಂದ್ರ ಸಿಂಗ್, ಇನ್ನಿತರರು ಸಂಕಲ್ಪ ಪತ್ರದಲ್ಲಿ ಗೃಹಲಕ್ಷ್ಮೀ ಸೇರಿ ಕಾಂಗ್ರೆಸ್ ಗ್ಯಾರಂಟಿ ಹೋಲುವ ಅನೇಕ ಯೋಜನೆಗಳ ಪ್ರಣಾಳಿಕೆ ಬಿಡುಗಡೆ ಮಾಡಿದರು.

**ನವದೆಹಲಿ, ಸೆ.6:** ರಾಜ್ಯದಲ್ಲಿ ಕಾಂಗ್ರೆಸ್ ಜಾರಿಗೆ ತಂದಿರುವ ಗ್ಯಾರಂಟಿಗಳನ್ನು ಟೀಕಿಸುತ್ತಲೇ ಬಂದಿರುವ ಬಿಜೆಪಿ ಈಗ ಜಮ್ಮು ಕಾಶ್ಮೀರ ವಿಧಾನಸಭೆ ಚುನಾವಣೆ ಅಂಗವಾಗಿ ಬಿಡುಗಡೆ ಮಾಡಿರುವ ಸಂಕಲ್ಪ ಪತ್ರದಲ್ಲಿ ಗೃಹಲಕ್ಷ್ಮೀ ಸೇರಿ ಕಾಂಗ್ರೆಸ್ ಗ್ಯಾರಂಟಿ ಹೋಲುವ ಅನೇಕ ಯೋಜನೆಗಳನ್ನು ನೀಡುವ ಭರವಸೆ ನೀಡಿದೆ.

ಗೃಹಸಚಿವ ಅಮಿತ್ ಶಾ ಶುಕ್ರವಾರ ಪ್ರಣಾಳಿಕೆ ಬಿಡುಗಡೆ ಮಾಡಿದರು. ಮಾ ಸಮ್ಮಾನ್ ಯೋಜನೆಯಡಿ ಕುಟುಂಬದ ಹಿರಿಯ ಮಹಿಳೆಗೆ ವರ್ಷಕ್ಕೆ 18000 ರೂಪಾಯಿ ನೀಡಲಾಗುವುದು, ಉಜ್ವಲ್ ಯೋಜನೆ ಫಲಾನುಭವಿಗಳಿಗೆ ವರ್ಷಕ್ಕೆ ಎರಡು ಉಚಿತ ಎಲ್‌ಪಿಜಿ ಸಿಲಿಂಡರ್, ಮಹಿಳಾ ಸ್ವಸಹಾಯ ಗುಂಪುಗಳಿಗೆ ಬ್ಯಾಂಕ್‌ನಿಂದ ಸಾಲ ಸೌಲಭ್ಯ ಒದಗಿಸುವ ಭರವಸೆ ಬಿಜೆಪಿ ನೀಡಿದೆ.

ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆ ಅಡಿ ಉಚಿತ ವಿದ್ಯುತ್, ಮತ್ತು ಸೋಲಾರ್ ಪ್ಯಾನಲ್ ಅಳವಡಿಕೆ ವೇಳೆ 10,000 ವಿಶೇಷ ಸಬ್ಸಡಿ, ವಿಧವೆಯರು, ವೃದ್ಧರು, ವಿಕಲಾಂಗರಿಗೆ 1000 ರಿಂದ 3000ಕ್ಕೆ ಸಹಾಯ ಧನ ಹೆಚ್ಚಳ ಮಾಡಲಾಗುವುದು, ಆಯುಷ್ಮಾನ್ ಭಾರತ್ ಯೋಜನೆಯಲ್ಲಿ ರಿಸ್ಕ್ ಕವರ್ 2 ಲಕ್ಷದಿಂದ ಐದು ಲಕ್ಷಕ್ಕೆ ಏರಿಕೆ ಮಾಡಲಾಗುವುದು ಎಂದು ಹೇಳಿದೆ.

ಪ್ರಗತಿ ಶಿಕ್ಷಾ ಯೋಜನೆಯಡಿ ವಿದ್ಯಾರ್ಥಿಗಳ ಪ್ರಯಾಣಕ್ಕೆ ವರ್ಷಕ್ಕೆ 3000 ಸಹಾಯಧನ, ಹಿಂದೂಳಿದ ಪ್ರದೇಶಗಳ ಪಿಯು ಮಕ್ಕಳಿಗೆ ಲ್ಯಾಪ್‌ಟಾಪ್, ಟ್ಯಾಬ್ ವಿತರಣೆ, 1000 ಮೆಡಿಕಲ್ ಸೀಟು ಹೆಚ್ಚಿಸುವುದು, ಐದು ಲಕ್ಷ ಉದ್ಯೋಗ ಸೃಷ್ಠಿ ಗುರಿ ಹೊಂದಿದೆ ಎಂದು ಬಿಜೆಪಿ ತಿಳಿಸಿದೆ. ರಾಜ್ಯ ಸರ್ಕಾರದೊಂದಿಗೆ ಸೇರಿ ಕಿಸಾನ್ ಸಮ್ಮಾನ್ ನಿಧಿಯಿಂದ ಒಟ್ಟು 10000 ರೂಪಾಯಿ ಹೆಚ್ಚಿಸಿ ರೈತರಿಗೆ ನೀಡಲಾಗುವುದು ಎಂದು ಅದು ಉಲ್ಲೇಖಿಸಿದೆ.

ಜಮ್ಮು-ಕಾಶ್ಮೀರದ ಸರ್ಕಾರಿ ಉದ್ಯೋಗದಲ್ಲಿ 20% ಅಗ್ನಿವೀರ್ ಗಳಿಗೆ ಮೀಸಲು, ಪ್ರವಾಸೋದ್ಯಮ ಅಭಿವೃದ್ಧಿ ಮಾಡಲಾಗುವುದು ಇದಕ್ಕಾಗಿ ವಿಶೇಷ ಕೇಂದ್ರಗಳನ್ನು ಸ್ಥಾಪಿಸಲಾಗುವುದು, ಗ್ರಾಮೀಣ ರಸ್ತೆ ಅಭಿವೃದ್ಧಿ ಮಾಡಲಾಗುವುದು ಜೊತೆಗೆ ಜಮ್ಮು ಕಾಶ್ಮೀರದಲ್ಲಿರುವ ಹಿಂದೂ ದೇವಸ್ಥಾನಗಳ ಅಭಿವೃದ್ಧಿ, ಕಾಶ್ಮೀರಿ ಪಂಡಿತರು ಸೇರಿ ವಲಸಿಗರಿಗೆ ರಕ್ಷಣೆ, ಭಯೋತ್ಪಾದನೆ ಮುಕ್ತ ರಾಜ್ಯ ನಿರ್ಮಾಣ ಸೇರಿ 25 ಭರವಸೆಗಳನ್ನು ಬಿಜೆಪಿ ನೀಡಿದೆ.

ಈ ವೇಳೆ ಮಾತನಾಡಿದ ಗೃಹ ಸಚಿವ ಅಮಿತ್ ಶಾ, ಜಮ್ಮು ಮತ್ತು ಕಾಶ್ಮೀರ ನಮ್ಮ ಪಕ್ಷಕ್ಕೆ ಮುಖ್ಯವಾಗಿದೆ, ನಾವು ಯಾವಾಗಲೂ ಈ ಭೂಮಿಯನ್ನು ಭಾರತದೊಂದಿಗೆ ಅಖಂಡವಾಗಿಡಲು ಪ್ರಯತ್ನಿಸಿದ್ದೇವೆ. ನಮ್ಮ ಪಕ್ಷವು ರಾಜ್ಯ ಯಾವಾಗಲೂ ಭಾರತದ ಭಾಗವಾಗಿದೆ ಮತ್ತು ಅದು ಉಳಿಯುತ್ತದೆ ಎಂದು ನಂಬುತ್ತದೆ. ಯಾವಾಗಲೂ ಪ್ರತ್ಯೇಕತಾವಾದ ಮತ್ತು ಭಯೋತ್ಪಾದನೆಯ ನೆರಳಿನಲ್ಲಿ ರಾಜ್ಯ ಉಳಿಯಿತು 2014ರ ನಂತರದ ಈ ಹತ್ತು ವರ್ಷಗಳು ರಾಜ್ಯಕ್ಕೆ ಸುವರ್ಣ ಅವಧಿಯಾಗಿ ಗುರುತಿಸಲ್ಪಡುತ್ತವೆ ಎಂದರು.

# ಆರ್ಥಿಕ ಅವ್ಯವಹಾರಗಳ ಸಿಬಿಐ ತನಿಖೆಗೆ ಪ್ರಶ್ನೆ
## ಸಂದೀಪ್ ಘೋಷ್ ಸಲ್ಲಿಸಿದ್ದ ಅರ್ಜಿ ವಜಾ

**ನವದೆಹಲಿ, ಸೆ.6:** ಆರ್ಥಿಕ ಅವ್ಯವಹಾರಗಳ ತನಿಖೆಯನ್ನು ಸಿಬಿಐಗೆ ವರ್ಗಾಯಿಸಿದ ಕಲ್ಕತ್ತಾ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಆರ್ಜಿ ಕಾರ್ ಮೆಡಿಕಲ್ ಕಾಲೇಜು ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ಶುಕ್ರವಾರ ವಜಾಗೊಳಿಸಿದೆ.

ಪ್ರಕರಣದ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್, ನ್ಯಾಯಮೂರ್ತಿ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠವು ತನಿಖೆಯನ್ನು ವರ್ಗಾವಣೆ ಮಾಡುವಂತೆ ಕೋರಿ ಸಲ್ಲಿಸಿರುವ ಅರ್ಜಿಯನ್ನು ವಜಾ ಮಾಡಿತು. ಘೋಷ್ ಪರ ಹಿರಿಯ ವಕೀಲ ಮೀನಾಕ್ಷಿ ಅರೋರಾ ವಾದ ಮಂಡಿಸಿದರು. ಅರ್ಜಿದಾರರು ವಿಚಾರಣೆಗೆ ಆಕ್ಷೇಪಣೆ ಸಲ್ಲಿಸುತ್ತಿಲ್ಲ ಆದರೆ ಹೈಕೋರ್ಟ್ ಮಾಡಿದ ಕೆಲವು ಪ್ರತಿಕೂಲ ಹೇಳಿಕೆಗಳಿಂದ ಅಸಮಾಧಾನಗೊಂಡಿದ್ದಾರೆ, ಆಗಸ್ಟ್ 9 ರಂದು ನಡೆದ ಟ್ರೈನಿ ವೈದ್ಯೆಯ ಅತ್ಯಾಚಾರ-ಕೊಲೆಯೊಂದಿಗೆ ಆರೋಪಿತ ಅಕ್ರಮಗಳನ್ನು ಜೋಡಿಸುವ ಹೈಕೋರ್ಟ್ನ ಕಲ್ಪನೆ ಬಗ್ಗೆ ಆಕ್ಷೇಪವಿದೆ ಎಂದು ಅವರು ಹೇಳಿದರು. ವಾದವನ್ನು ಒಪ್ಪಿಕೊಳ್ಳಲು ನಿರಾಕರಿಸಿದ ಸಿಜೆಐ ಇದು ತನಿಖೆಯ



ವಿಷಯವಾಗಿದೆ, ಬಯೋಮೆಡಿಕಲ್ ತ್ಯಾಜ್ಯದ ಸಮಸ್ಯೆಯು ಒಂದು ಪ್ರಚೋದಕವಾಗಿದೆ. ಆದ್ದರಿಂದ ಈ ವಿಷಯದಲ್ಲಿ ತಾರ್ಕಿಕ ತೀರ್ಮಾನಕ್ಕೆ ಬರಬೇಕು ಎನ್ನುವುದು ಹೈಕೋರ್ಟ್ ಬಯಸುತ್ತದೆ ಇದರಲ್ಲಿ ನಾವು ಮಧ್ಯಪ್ರವೇಶಿಸುವ ಅಗತ್ಯವಿಲ್ಲ ಎಂದು ಸಿಜೆಐ ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಅರೋರಾ, ಹೈಕೋರ್ಟ್ ಈ ಬಗ್ಗೆ ಸ್ಪಷ್ಟವಾದ ತೀರ್ಮಾನಕ್ಕೆ ಬರುತ್ತದೆ ಎಂದು ನಾವು ಭಾವಿಸುವುದಿಲ್ಲ ಎಂದರು. ಇದಕ್ಕೆ ಪ್ರತ್ಯುತ್ತರ ನೀಡಿದ ಸಿಜೆಐ ನಾವು ತನಿಖೆಯನ್ನು ಸ್ತಬ್ಧಗೊಳಿಸಬಾರದು, ನಮ್ಮ ಮುಂದೆ ಸ್ಥಿತಿ ವರದಿಗಳನ್ನು ಸಲ್ಲಿಸುವಂತೆ ನಾವು ಸಿಬಿಐಗೆ ಸೂಚಿಸುತ್ತೇವೆ ಎಂದರು. ಹೈಕೋರ್ಟ್ ಮಾಡಿದ ಅವಲೋಕನಗಳನ್ನು ಆದೇಶದಿಂದ ತೆಗೆದುಹಾಕಬೇಕು ಎಂದು ಅರೋರಾ ಒತ್ತಾಯಿಸಿದರು. ಈ ಹಂತದಲ್ಲಿ ಅರ್ಜಿದಾರರು ಪೂರ್ವಗ್ರಹಪೀಡಿತರಾಗಿರುವುದರಿಂದ ಇವುಗಳನ್ನು ಪ್ರಾಥಮಿಕ ಅವಲೋಕನಗಳು ಎಂದು ನ್ಯಾಯಾಲಯವು ದಾಖಲಿಸಬಹುದು ಎಂದು ಅರೋರಾ ವಿನಂತಿಸಿದರು. ಆದರೆ ಅದಕ್ಕೆ ಪೀಠ ನಿರಾಕರಿಸಿತು.

ಆರ್ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಮಾಜಿ ಉಪ ಅಧೀಕ್ಷಕ ಅಖ್ತರ್ ಅಲಿ ಅವರು ಮಾಜಿ ಪ್ರಾಂಶುಪಾಲ ಡಾ. ಘೋಷ್ ವಿರುದ್ಧ ಕಲ್ಕತ್ತಾ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಮೃತ ದೇಹಗಳ ದುರುಪಯೋಗ, ಜೈವಿಕ ತ್ಯಾಜ್ಯವನ್ನು ಮುಕ್ತ ಮಾರುಕಟ್ಟೆಯಲ್ಲಿ ಮರು ಮಾರಾಟ, ಸಾರ್ವಜನಿಕ ನಿಧಿಯ ದುರುಪಯೋಗ ಮುಂತಾದ ಗಂಭೀರ ಅಕ್ರಮಗಳನ್ನು ಮಾಡಿದ್ದರು, ಆರೋಪದ ಹಿನ್ನಲೆ ಹೈಕೋರ್ಟ್ ತನಿಖೆಗೆ ನೀಡಿದೆ.



ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಶುಕ್ರವಾರ ನಡೆದ ಸಮಾರಂಭದಲ್ಲಿ ಅಧ್ಯಕ್ಷ ದ್ರೌಪದಿ ಮುರ್ಮು ಅವರು ಇಸ್ರೇಲ್ ರಾಜ್ಯದ ರಾಯಭಾರಿ ರುವೆನ್ ಅಜರ್ ಅವರಿಂದ ರುಜುವಾತುಗಳನ್ನು ಸ್ವೀಕರಿಸಿದರು.



ಪ್ರಧಾನಿ ನರೇಂದ್ರ ಮೋದಿ ಅವರು ಶುಕ್ರವಾರ ನವದೆಹಲಿಯಲ್ಲಿ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಪುರಸ್ಕೃತರೊಂದಿಗೆ ಸಂವಾದ ನಡೆಸಿದರು.

# ಶೇ.65ಕ್ಕೆ ಮೀಸಲಾತಿ ಏರಿಕೆ ವಿಚಾರ: ಬಿಹಾರ
## ಹೈಕೋರ್ಟ್ ಆದೇಶಕ್ಕಿಲ್ಲ ತಡೆಯಾಜ್ಞೆ

**ನವದೆಹಲಿ,ಸೆ.6:** ಬಿಹಾರದಲ್ಲಿ ಮೀಸಲಾತಿ ಮಿತಿಯನ್ನು ಶೇ.65ಕ್ಕೆ ಹೆಚ್ಚಿಸುವುದಕ್ಕೆ ತಡೆ ನೀಡಿದ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ ಅರ್ಜಿಯ ಮೇಲೆ ಸುಪ್ರೀಂ ಕೋರ್ಟ್ ಶುಕ್ರವಾರ ಕೇಂದ್ರ ಮತ್ತು ಬಿಹಾರ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.

ಆದರೆ, ಸದ್ಯಕ್ಕೆ ಹೈಕೋರ್ಟ್ ಆದೇಶಕ್ಕೆ ತಡೆಯಾಜ್ಞೆ ವಿಧಿಸಿಲ್ಲ. ಬಿಹಾರದ ಪ್ರಮುಖ ವಿರೋಧ ಪಕ್ಷವಾಗಿರುವ ರಾಷ್ಟ್ರೀಯ ಜನತಾ ದಳವು, ಕಳೆದ ವರ್ಷ ಜಾತಿ ಸಮೀಕ್ಷೆಯ ನಂತರ ಅಂಗೀಕರಿಸಲ್ಪಟ್ಟ ಮೀಸಲಾತಿಯ ಹೆಚ್ಚಳದ ಕುರಿತು ಬಿಹಾರ ಹೈಕೋರ್ಟ್‌ನ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಸುಪ್ರೀಂ ಕೋರ್ಟ್ ಬೆಳವಣಿಗೆಗಳ ಬಗ್ಗೆ ಪ್ರತಿಕ್ರಿಯಿಸಿದ ಆರ್‌ಜೆಡಿ, ಮೀಸಲಾತಿ ಮತ್ತು ವಂಚಿತರ ಹಕ್ಕುಗಳಿಗಾಗಿ ಹೋರಾಟವನ್ನು ಮುಂದುವರಿಸುವುದಾಗಿ ಹೇಳಿದೆ.

ಬಿಹಾರ ಮೀಸಲಾತಿ ತಿದ್ದುಪಡಿ ಕಾಯಿದೆಯನ್ನು ರದ್ದುಪಡಿಸಿದ ಪಟನಾ ಹೈಕೋರ್ಟ್ ಆದೇಶದ ವಿರುದ್ಧ ಆರ್ಜೆಡಿ ಸಲ್ಲಿಸಿದ ಅರ್ಜಿಗೆ ಸುಪ್ರೀಂ ಕೋರ್ಟ್ ನೋಟಿಸ್ ನೀಡಿದೆ. ಆರ್‌ಜೆಡಿಯು ವಂಚಿತರು ಮತ್ತು ನಿರ್ಲಕ್ಷಿಸಲ್ಪಟ್ಟವರ ಮೀಸಲಾತಿ-ಹಕ್ಕುಗಳಿಗಾಗಿ ಬೀದಿಗಳಲ್ಲಿ, ಸದನ ಮತ್ತು ನ್ಯಾಯಾಲಯಗಳಲ್ಲಿ ಹೋರಾಡುತ್ತಲೇ ಇರುತ್ತದೆ ಎಂದು ಪಕ್ಷವು ಬರೆದಿದೆ.




ಹಿಂದುಳಿದ ವರ್ಗಗಳು, ಅತ್ಯಂತ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿಗಳು (ಎಸ್‌ಸಿಗಳು), ಪರಿಶಿಷ್ಟ ಪಂಗಡಗಳು (ಎಸ್‌ಟಿಗಳು) ಮೀಸಲಾತಿ ಕಾನೂನುಗಳಿಗೆ ತಿದ್ದುಪಡಿ ಮಾಡುವ ಮೂಲಕ ಕೋಟಾವನ್ನು ಶೇ.50 ರಿಂದ 65ಕ್ಕೆ ಹೆಚ್ಚಿಸಲಾಯಿತು. ತಿದ್ದುಪಡಿಗಳನ್ನು ಪ್ರಸ್ತಾಪಿಸುವ ಮಸೂದೆಗಳನ್ನು ಬಿಹಾರ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನಲ್ಲಿ ಸರ್ವಾನುಮತದಿಂದ ಅಂಗೀಕರಿಸಲಾಯಿತು. ಮೀಸಲಾತಿ ಹೆಚ್ಚಳವು ರಾಜ್ಯದ ಶಿಕ್ಷಣ ಸಂಸ್ಥೆಗಳು ಮತ್ತು ಸರ್ಕಾರಿ ಉದ್ಯೋಗಗಳಿಗೆ ಅನ್ವಯಿಸುತ್ತದೆ.

ತಿದ್ದುಪಡಿಗಳ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ಅರ್ಜಿದಾರರು ಕೋರ್ಟ್ ಸಂಪರ್ಕಿಸಿದ ನಂತರ, ಹೈಕೋರ್ಟ್ ಜೂನ್ 20 ರಂದು ಅವರು ಸಂವಿಧಾನದ ಕಾನೂನಲ್ಲಿ ಇದು ಕೆಟ್ಟದು ಮತ್ತು ಸಮಾನತೆಯ ಷರತ್ತಿನ ಉಲ್ಲಂಘನೆ ಎಂದು ತೀರ್ಪು ನೀಡಿತ್ತು. 1992ರ ಇಂದ್ರ ಸಾಹ್ನಿ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನಿಗದಿಪಡಿಸಿದ ಮೀಸಲಾತಿಗಳ ಮೇಲಿನ ಶೇ.50 ಮಿತಿಯನ್ನು ರಾಜ್ಯವನ್ನು ಉಲ್ಲಂಘಿಸಲು ಸಾಧ್ಯವಾಗದ ಯಾವುದೇ ಪರಿಸ್ಥಿತಿಯನ್ನು ಉಲ್ಲಂಘಿಸುವುದಿಲ್ಲ ಎಂದು ಪೀಠ ಹೇಳಿದೆ. ಹೈಕೋರ್ಟ್ ಆದೇಶದ ವಿರುದ್ಧ ಬಿಹಾರ ಸರ್ಕಾರವೂ ಸುಪ್ರೀಂಕೋರ್ಟ್‌ಗೆ ಮೊರೆಹೋಗಿತ್ತು. ಜುಲೈನಲ್ಲಿ ಪೀಠವು ತಡೆಯಾಜ್ಞೆ ನೀಡಲು ನಿರಾಕರಿಸಿತ್ತು. ಶುಕ್ರವಾರ, ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಮತ್ತು ನ್ಯಾಯಮೂರ್ತಿಗಳಾದ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರ ಪೀಠವು ಬಿಹಾರ ಸರ್ಕಾರ ಮತ್ತು ಕೇಂದ್ರಕ್ಕೆ ನೋಟಿಸ್ ಜಾರಿಗೊಳಿಸಿತು.

ಬಿಹಾರದ ಜಾತಿ ಸಮೀಕ್ಷೆಯು ಬಿಹಾರದ ಜನಸಂಖ್ಯೆಯ ಶೇಕಡಾ 36 ರಷ್ಟು ಅತ್ಯಂತ ಹಿಂದುಳಿದ ವರ್ಗಗಳಿಂದ, ಶೇಕಡಾ 27.1 ರಷ್ಟು ಹಿಂದುಳಿದ ವರ್ಗಗಳಿಗೆ ಸೇರಿದವರು, ಶೇಕಡಾ 19.7 ರಷ್ಟು ಪರಿಶಿಷ್ಟ ಜಾತಿಗಳು ಮತ್ತು ಶೇಕಡಾ 1.7 ರಷ್ಟು ಪರಿಶಿಷ್ಟ ಪಂಗಡದವರು ಎಂದು ಬಹಿರಂಗಪಡಿಸಿದೆ. ಮೇಲ್ಜಾತಿಗಳೆಂದು ಕರೆಯಲ್ಪಡುವ ಸಾಮಾನ್ಯ ವರ್ಗವು ಶೇ.15.5 ರಷ್ಟಿದೆ.

ಹುದ್ದೆಗಳು ಮತ್ತು ಸೇವೆಗಳಲ್ಲಿನ ಖಾಲಿ ಹುದ್ದೆಗಳ ಬಿಹಾರ ಮೀಸಲಾತಿ (ಪರಿಶಿಷ್ಟ ಜಾತಿ ಮತ್ತು ಪಂಗಡಗಳು ಮತ್ತು ಇತರ ಹಿಂದುಳಿದ ವರ್ಗಗಳಿಗೆ) ತಿದ್ದುಪಡಿ ಕಾಯ್ದೆ, 2023 ಮತ್ತು ಬಿಹಾರ (ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ) ಮೀಸಲಾತಿ (ತಿದ್ದುಪಡಿ) ಕಾಯಿದೆ, 2023 ಅನ್ನು ನಂತರದಲ್ಲಿ ಮೀಸಲಾತಿಯನ್ನು ರಾಜ್ಯವು ಶೇ.65ಕ್ಕೆ ಹೆಚ್ಚಿಸಲು ತರಲಾಯಿತು.

ಅಧಿಕಾರಕ್ಕೆ ಬಂದರೆ ದೇಶದಾದ್ಯಂತ ಜಾತಿ ಸಮೀಕ್ಷೆ ನಡೆಸುವುದಾಗಿ ಕಾಂಗ್ರೆಸ್ ಭರವಸೆ ನೀಡುವುದರೊಂದಿಗೆ, ಈ ವಿಷಯವು ರಾಷ್ಟ್ರೀಯ ರಾಜಕೀಯ ವಿಷಯವಾಗಿ ಮಾರ್ಪಟ್ಟಿದೆ. ಮೀಸಲಾತಿಯ ಮೇಲಿನ ಶೇ.50 ಮಿತಿಯನ್ನು ಕಿತ್ತುಹಾಕಲಾಗುವುದು ಎಂದು ಒತ್ತಾಯಿಸುತ್ತದೆ. ಈ ಆರೋಪವನ್ನು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವ ವಹಿಸಿದ್ದಾರೆ. ಈ ವಿಷಯವು ಇಂಡಿಯಾ ಮೈತ್ರಿಕೂಟದಲ್ಲಿ ವ್ಯಾಪಕ ಬೆಂಬಲವನ್ನು ಕಂಡುಕೊಂಡಿದೆ.

# ಮಣಿಪುರದಲ್ಲಿ ಬಾಂಬ್ ದಾಳಿ
## ಎರಡು ಕಟ್ಟಡಗಳಿಗೆ ಹಾನಿ

**ಮಣಿಪುರ, ಸೆ. 6:** ಶುಕ್ರವಾರ ಬೆಳಗ್ಗೆ ಮಣಿಪುರದ ಬಿಷ್ಣುಪುರ್ ಜಿಲ್ಲೆಯಲ್ಲಿ ಶಂಕಿತ ಉಗ್ರರು ಹೊಸ ಬಾಂಬ್ ದಾಳಿ ನಡೆಸಿದ್ದು, ಕನಿಷ್ಠ ಎರಡು ಕಟ್ಟಡಗಳಿಗೆ ಹಾನಿಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ರಾಜ್ಯದ ರಾಜಧಾನಿ ಇಂಫಾಲ್‌ನಿಂದ ಸುಮಾರು 45 ಕಿಮೀ ದೂರದಲ್ಲಿರುವ ಟ್ರೊಂಗ್ಲಾವೊಬಿಯ ತಗ್ಗು ಪ್ರದೇಶದ ವಸತಿ ಪ್ರದೇಶದ ಕಡೆಗೆ ಚುರಾಚಂದ್ಪುರ ಜಿಲ್ಲೆಯ ಹತ್ತಿರದ ಗುಡ್ಡಗಾಡು ಪ್ರದೇಶಗಳಲ್ಲಿ ಎತ್ತರದ ಸ್ಥಾನಗಳಿಂದ ರಾಕೆಟ್‌ಗಳನ್ನು ಹಾರಿಸಲಾಯಿತು. ರಾಕೆಟ್ ವ್ಯಾಪ್ತಿಯು 3 ಕಿಮೀಗಿಂತ ಹೆಚ್ಚು ಎಂದು ಅಂದಾಜಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಅದೃಷ್ಟವಶಾತ್ ದಾಳಿಯಿಂದ ಯಾವುದೇ ಗಾಯಗಳಾಗಿಲ್ಲ ಎಂದು ವರದಿಯಾಗಿದೆ. ಆದರೆ, ಬಾಂಬ್ ದಾಳಿಯಿಂದಾಗಿ ಸ್ಥಳೀಯ ಸಮುದಾಯ ಭವನ ಮತ್ತು ಖಾಲಿ ಕೋಣೆಗೆ ಹಾನಿಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಇದಲ್ಲದೆ, ಶಂಕಿತ ಉಗ್ರರು ಬಿಷ್ಣುಪುರ್ ಜಿಲ್ಲೆಯ ಕಡೆಗೆ ಹಲವಾರು ಸುತ್ತು ಗುಂಡು ಹಾರಿಸಿದ್ದು, ಭದ್ರತಾ ಪಡೆಗಳು



ಪ್ರತಿದಾಳಿ ನಡೆಸಲು ಪ್ರೇರೇಪಿಸಿತು. ಗುರುವಾರ ರಾತ್ರಿ, ಟ್ರೋಂಗ್ಲೋಬಿಯಿಂದ ಕೆಲವು ಕಿಲೋಮೀಟರ್ ದೂರದಲ್ಲಿರುವ ಕುಂಬಿ ಗ್ರಾಮವು ನೆಲದಿಂದ 100 ಮೀಟರ್‌ಗಿಂತ ಕಡಿಮೆ ಎತ್ತರದಲ್ಲಿ ಅನೇಕ ಡ್ರೋನ್‌ಗಳು ಹಾರಾಡುತ್ತಿರು ವುದನ್ನು ಗುರುತಿಸಿದ ನಂತರ ಹೆಚ್ಚಿನ ಉದ್ವಿಗ್ನತೆಯನ್ನು ಅನುಭವಿಸಿತು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಮಣಿಪುರದ ಇಂಫಾಲ್ ಪಶ್ಚಿಮದ ಕೌತ್ರುಕ್ ಪ್ರದೇಶದಲ್ಲಿ ಸೆಪ್ಟೆಂಬರ್ 1 ರಂದು ಮಧ್ಯಾಹ್ನ 2:30ರ ಸುಮಾರಿಗೆ ಹೊಸ ಹಿಂಸಾಚಾರ ಪ್ರಾರಂಭವಾಯಿತು. ಉಗ್ರರು ಡ್ರೋನ್ ಬಾಂಬ್ ದಾಳಿ ನಡೆಸಿದ್ದಾರೆ ಎಂದು ವರದಿಯಾಗಿದೆ. ಉಗ್ರರು ಭಾನುವಾರ ಮಧ್ಯಾಹ್ನಚ ದಿಂದ ಬೆಟ್ಟದ ತುದಿಯಿಂದ ಕೌಟ್ರುಕ್ ಮತ್ತು ನೆರೆಯ ಕಡಂಗ್‌ಬಂಡ್‌ನ ತಗ್ಗು ಪ್ರದೇಶಗಳವರೆಗೆ ಮನಬಂದಂತೆ ಗುಂಡಿನ ದಾಳಿ ಆರಂಭಿಸಿದ್ದು, ಕೌತ್ರುಕ್ ಗ್ರಾಮದ ಹೊರವಲಯವನ್ನು ತಲುಪುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಶಾಲೆಗೆ ಮಾಂಸಾಹಾರ ತಂದಿದ್ದಕ್ಕೆ ವಿದ್ಯಾರ್ಥಿ ಅಮಾನತು

**ಲಖನೌ, ಸೆ. 6:** ಉತ್ತರ ಪ್ರದೇಶದ ಅಮ್ರೋಹಾದಲ್ಲಿರುವ ಖಾಸಗಿ ಶಾಲೆಯೊಂದರ ಪ್ರಾಂಶುಪಾಲರು, ತನ್ನ ಡಬ್ಬಿಯಲ್ಲಿ ಮಾಂಸಾಹಾರಿ ಊಟ ತಂದ ಆರೋಪದ ಮೇಲೆ ನರ್ಸರಿ ವಿದ್ಯಾರ್ಥಿಯನ್ನು ಅಮಾನತುಗೊಳಿಸಿದ್ದಾರೆ. ಪ್ರಾಂಶುಪಾಲರು ಮತ್ತು ಮಗುವಿನ ತಾಯಿ ನಡುವೆ ತೀವ್ರ ವಾಗ್ವಾದದ ವಿಡಿಯೋ ವೈರಲ್ ಆದ ನಂತರ ವಿಷಯ ಬೆಳಕಿಗೆ ಬಂದಿದ್ದು, ಸಾರ್ವಜನಿಕರು ಪ್ರಾಂಶುಪಾಲರ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದ್ದಾರೆ. ಈ ವಿಡಿಯೋವನ್ನು ಪೋಷಕರೊಬ್ಬರು ಚಿತ್ರೀಕರಿಸಿದ್ದಾರೆ ಎಂದು ವರದಿಯಾಗಿದೆ. ನಮ್ಮ ದೇವಸ್ಥಾನಗಳನ್ನು ಕೆಡವಿ ಶಾಲೆಗೆ ಮಾಂಸಾಹಾರ ತರಿಸುವ ಇಂತಹ ನೈತಿಕತೆಯನ್ನು ಮಕ್ಕಳಿಗೆ ಕಲಿಸಲು ನಾವು ಬಯಸುವುದಿಲ್ಲ ಎಂದು ಪ್ರಾಂಶುಪಾಲರು ಮಗುವಿನ ತಾಯಿಗೆ ಹೇಳಿದರು. ವಿದ್ಯಾರ್ಥಿಯು ಸಹ ವಿದ್ಯಾರ್ಥಿಗಳಿಗೆ ಮಾಂಸಾಹಾರಿ ಆಹಾರವನ್ನು ತಿನ್ನಿಸಿ, ಅವರನ್ನು ಇಸ್ಲಾಂಗೆ ಪರಿವರ್ತಿಸುವ ಬಗ್ಗೆ ಮಾತನಾಡಿದ್ದಾನೆ ಎಂದು ಪ್ರಾಂಶುಪಾಲರು ಆರೋಪಿಸಿದ್ದಾರೆ. ಮಗುವಿನ ತಾಯಿ ಪ್ರಾಂಶುಪಾಲರ ಆರೋಪಗಳನ್ನು ತಳ್ಳಿಹಾಕಿದ್ದಾರೆ. ತನ್ನ ಏಳು ವರ್ಷದ ಮಗನಿಗೆ ಅಂತಹ ವಿಷಯಗಳನ್ನು ಗ್ರಹಿಸಲು ಸಹ ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಈ ವಿಚಾರಗಳನ್ನು ಮಗು ಮನೆಯಲ್ಲಿ ಕಲಿಯುತ್ತದೆ ಎಂದು ಪ್ರಾಂಶುಪಾಲರು ಪ್ರತಿಕ್ರಿಯಿಸಿದ್ದಾರೆ.

# ಮಣಿಪುರದಲ್ಲಿ ಶಾಂತಿ ನೆಲೆಗೊಳಿಸಲು ಸಂಘ ಪ್ರಯತ್ನಿಸುತ್ತಿದೆ-ಮೋಹನ್ ಭಾಗವತ್

**ಪುಣೆ, ಸೆ.6:** ಮಣಿಪುರದಲ್ಲಿ ಎರಡು ಸಮುದಾಯಗಳ ನಡುವೆ ಏರ್ಪಟ್ಟ ಸಂಘರ್ಷದಲ್ಲಿ 200 ಅಧಿಕ ಮಂದಿ ಸಾವನ್ನಪ್ಪಿದ್ದು 60,000 ಅಧಿಕ ಮಂದಿ ಸ್ಥಳಾಂತರಗೊಂಡಿದ್ದಾರೆ ಇಂತಹ ಸವಾಲಿನ ಪರಿಸ್ಥಿತಿಯಲ್ಲೂ ಆರ್‌ಎಸ್‌ಎಸ್ ಸ್ವಯಂಸೇವಕರು ಈಶಾನ್ಯ ರಾಜ್ಯದಲ್ಲಿ ಭದ್ರವಾಗಿ ನೆಲೆಸಿದ್ದು, ಎರಡು ಸಮುದಾಯಗಳ ನಡುವೆ ಶಾಂತಿ ನೆಲೆಗೊಳಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ.

1971 ರಲ್ಲಿ ಮಣಿಪುರದಲ್ಲಿ ಭಯ್ಯಾಜಿ ಎಂದು ಜನಪ್ರಿಯವಾಗಿರುವ ಶಂಕರ್ ದಿನಕರ್ ಕೇನ್ ಅವರ ಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಆರ್‌ಎಸ್‌ಎಸ್



ಮುಖ್ಯಸ್ಥರು, ಕೆಲವರು ಶಾಂತವಾಗಿರುವುದಕ್ಕಿಂತ ಮಿಂಚಿನಂತೆ ಹೊಳೆಯಬೇಕು ಎಂದು ಭಾವಿಸುತ್ತಾರೆ. ಆದರೆ ಸಿಡಿಲು ಬಡಿದ ನಂತರ ಅವರು ಮೊದಲಿಗಿಂತ ಹೆಚ್ಚು ಕತ್ತಲೆಗೆ ಸರಿಯುತ್ತಾರೆ ಆದ್ದರಿಂದ, ಕೆಲಸಗಾರರು ದೀಪಗಳಂತೆ ಉರಿಯಬೇಕು ಮತ್ತು ಅಗತ್ಯವಿದ್ದಾಗ ಹೊಳೆಯಬೇಕು ಎಂದು ಭಾಗವತ್ ಹೇಳಿದರು. ಮಣಿಪುರದಲ್ಲಿ ಪರಿಸ್ಥಿತಿ ಕಷ್ಟಕರವಾಗಿದೆ, ಸುರಕ್ಷತೆಯ ಭರವಸೆ ಇಲ್ಲ, ಅವರ ಭದ್ರತೆಯ ಬಗ್ಗೆ ಸ್ಥಳೀಯರಿಗೆ ಅನುಮಾನವಿದೆ, ವ್ಯಾಪಾರ ಅಥವಾ ಸಾಮಾಜಿಕ ಕಾರ್ಯಕ್ಕಾಗಿ ಅಲ್ಲಿಗೆ ಹೋದವರಿಗೆ ಪರಿಸ್ಥಿತಿ ಇನ್ನಷ್ಟು ಸವಾಲಾಗಿದೆ ಆದರೆ ಅಂತಹ ಪರಿಸ್ಥಿತಿಗಳಲ್ಲಿಯೂ ಸಹ, ಸಂಘದ ಸ್ವಯಂಸೇವಕರು ದೃಢವಾಗಿ ನೆಲೆಸಿದ್ದಾರೆ, ಪರಿಸ್ಥಿತಿಯನ್ನು ಶಾಂತಗೊಳಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಭಾಗವತ್ ಹೇಳಿದರು. ಎನ್ಜಿಒಗಳು ಎಲ್ಲವನ್ನೂ ನಿಭಾಯಿಸಲು ಸಾಧ್ಯವಿಲ್ಲ, ಆದರೆ ಸಂಘವು ಏನು ಮಾಡಬಹುದೋ ಅದನ್ನು ಮಾಡಲು ಯಾವುದೇ ಆಯ್ಕೆಯನ್ನು ಬಿಡುತ್ತಿಲ್ಲ. ಸಂಘದ ಸದಸ್ಯರು ಸಂಘರ್ಷದಲ್ಲಿ ತೊಡಗಿರುವ ಎಲ್ಲಾ ಪಕ್ಷಗಳೊಂದಿಗೆ ಸಂವಾದದಲ್ಲಿ ತೊಡಗಿದ್ದಾರೆ. ಪರಿಣಾಮವಾಗಿ, ನಾವುವಾವರ ವಿಶ್ವಾಸ ಗಳಿಸಿದ್ದೇವೆ ಎಂದು ಅವರು ಹೇಳಿದರು.

### ಭಾರತ್ ಕೋ.ಅಪರೇಟಿವ್ (ಮುಂಬಯಿ) ಲಿಮಿಟೆಡ್-48ನೇ ವಾರ್ಷಿಕ ಮಹಾಸಭೆ
# ಸಾಧನೆಯ ಹಾದಿಯಲ್ಲಿ ಭಾರತ್ ಬ್ಯಾಂಕ್ ಮುನ್ನಡೆ: ಸುವರ್ಣ

**ಮುಂಬಯಿ, ಸೆ.6:** ಆಧುನಿಕತೆಯ ಬದಲಾವಣೆಯೊಂದಿಗೆ ಬಲಿಷ್ಠ ಹೆಜ್ಜೆಗಳಲ್ಲಿ ಭಾರತ್ ಬ್ಯಾಂಕ್ ಮುನ್ನಡೆಯುತ್ತಿದೆ. ಗ್ರಾಹಕರ ವಿಶ್ವಾಸಕ್ಕೆ ಸಮರ್ಥ ಪಥಸಂಸ್ಥೆಯಾಗಿ ಕಾರ್ಯಚರಿಸುತ್ತಿದೆ. ಬ್ಯಾಂಕ್ ಪಾರದರ್ಶಕತ್ವದ ಸೇವೆಯೊಂದಿಗೆ ಕಾರ್ಯನಿರತ ಈ ಬ್ಯಾಂಕ್ ಗ್ರಾಹಕರು ಮತ್ತು ಬ್ಯಾಂಕ್ ಮಂಡಳಿ, ನೌಕರವೃಂದದ ಬಂಧುತ್ವ ಇನ್ನಷ್ಟು ಪ್ರಬಲಗೊಂಡಿದೆ. ಈ ಮೂಲಕ ಬ್ಯಾಂಕ್ ಸಾಧನೆಯತ್ತ ಕ್ರಮಿಸುತ್ತಿದೆ ಎಂದು ಭಾರತ್ ಬ್ಯಾಂಕ್‌ನ ಕಾರ್ಯಾಧ್ಯಕ್ಷ ಸೂರ್ಯಕಾಂತ್ ಜಯ ಸುವರ್ಣ ನುಡಿದರು.

ಕಳೆದ ಗುರುವಾರ ಪೂರ್ವಾಹ್ನ ಗೋರೆಗಾಂವ್ ಪೂರ್ವದ ಬ್ರಿಜ್‌ವಾಸಿ ಪ್ಯಾಲೇಸ್ ಸಭಾಗೃಹದಲ್ಲಿ ಜರುಗಿಸಲ್ಪಟ್ಟ ಭಾರತ್ ಬ್ಯಾಂಕ್‌ನ 48ನೇ ಮಹಾಸಭೆಗೆ ನಿರ್ದೇಶಕರನ್ನೊಳಗೊಂಡು ದೀಪ ಪ್ರಜ್ವಲಿಸಿ ಮಹಾಸಭೆಗೆ ಚಾಲನೆಯನ್ನಿತ್ತು ಸಭೆಯ ಅಧ್ಯಕ್ಷತೆ ವಹಿಸಿ ಸುವರ್ಣ ಮಾತನಾಡಿ ಬ್ಯಾಂಕ್‌ನ ಆರ್ಥಿಕ ಸ್ಥಿರತೆ ಮತ್ತು ಸಾಮರ್ಥ್ಯಗಳನ್ನು ಇನ್ನಷ್ಟು ಸುಧಾರಿಸಿದ್ದು, ಬ್ಯಾಂಕ್ ಸಾಧನೆಯ ಹಾದಿಯಲ್ಲಿದೆ. ಠೇವಣಿದಾರರ ಹಿತಾಸಕ್ತಿ ಹಣಕಾಸು ವ್ಯವಸ್ಥೆ ಮತ್ತು ದಕ್ಷತೆ ಸೂಚಿಸುವ ಮಾನದಂಡವಾದ ಸಿಆರ್‌ಎಆರ್ ಸಾಲ ಮತ್ತು ಬಂಡವಾಳ ಅನುಪಾತವು 13.70% ಅಷ್ಟಿದ್ದು ಬ್ಯಾಂಕು




ಸುಸ್ಥಿತಿಯಲ್ಲಿ ಸಾಗುತ್ತಿದೆ. ಅತ್ಯಾಧುನಿಕ ಉತ್ಕೃಷ್ಟ ಸುರಕ್ಷಿತ ಮತ್ತು ಪರಿಣಾಮಕಾರಿ ಬ್ಯಾಂಕಿಂಗ್ ಸೇವೆಗಳನ್ನು ನೀಡಲು ಹಾಗೂ ಬ್ಯಾಂಕಿಂಗ್ ಕ್ಷೇತ್ರದಲ್ಲಿ ನಿರಂತರವಾಗಿ ಬದಲಾಗುತ್ತಿರುವ ಸನ್ನಿವೇಶಕ್ಕೆ ತ್ವರಿತವಾಗಿ ಹೊಂದಿಕೊಳ್ಳಲು ಬ್ಯಾಂಕ್ ಬದ್ಧವಾಗಿದೆ. ಮುಂಬರುವ ಹಣಕಾಸು ವರ್ಷಕ್ಕೆ ಬ್ಯಾಂಕು ಸಣ್ಣ ಮೊತ್ತದ ಚಿಲ್ಲರೆ ಮುಂಗಡ ವ್ಯವಹಾರಕ್ಕೆ ಆದ್ಯತೆಯನ್ನು ನೀಡಲಿದ್ದು ಮರುಪಾವತಿ ಪ್ರಕ್ರಿಯೆಯನ್ನು ಮತ್ತಷ್ಟು ಬಲಪಡಿಸಲಾಗುವುದು ಎಂದೂ ಸೂರ್ಯಕಾಂತ್ ತಿಳಿಸಿದರು.

ಬ್ಯಾಂಕ್‌ನ ಉಪ ಕಾರ್ಯಾಧ್ಯಕ್ಷ ಸೋಮನಾಥ್ ಬಿ.ಅಮೀನ್, ನಿರ್ದೇಶಕರುಗಳಾದ ಭಾಸ್ಕರ್ ಎಂ.ಸಾಲ್ಯಾನ್, ಗಂಗಾಧರ್ ಜೆ.ಪೂಜಾರಿ, ಚಂದ್ರಶೇಖರ್ ಎಸ್.ಪೂಜಾರಿ, ಅಶೋಕ್ ಎಂ.ಕೋಟ್ಯಾನ್, ಮೋಹನದಾಸ್ ಜಿ.ಪೂಜಾರಿ, ನರೇಶ್ ಕೆ.ಪೂಜಾರಿ, ನಿರಂಜನ್ ಲಕ್ಷ್ಮಣ ಪೂಜಾರಿ, ಸಂತೋಷ್ ಕೆ.ಪೂಜಾರಿ, ದಯಾನಂದ್ ಆರ್.ಪೂಜಾರಿ, ಗಣೇಶ್ ಡಿ.ಪೂಜಾರಿ, ಹರೀಶ್ ವಿ.ಪೂಜಾರಿ, ನಾರಾಯಣ್ ಎಲ್.ಸುವರ್ಣ, ಸುರೇಶ್ ಬಿ.ಸುವರ್ಣ, ಆಶಾ ಆರ್.ಬಂಗೇರ, ಜಯಲಕ್ಷ್ಮಿ ಪಿ.ಸಾಲ್ಯಾನ್, ಅಲ್ಬಗನ್ ಸಿ.ಹರಿಜನ್, ಗೌರೀಶ್ ಆರ್. ಕೋಟ್ಯಾನ್, ಜಯಶ್ರೀ ಎಂ. ಹೆಜ್ಮಾಡಿ ವೇದಿಕೆಯಲ್ಲಿ ಆಸೀನರಾಗಿದ್ದರು.

ಬ್ಯಾಂಕ್‌ನ ಷೇರುದಾರ ಸದಸ್ಯರ ಪರವಾಗಿ ನ್ಯಾ। ಶಶಿಧರ್ ಯು.ಕಾಪು, ಶೇವಂತಿಲಾಲ್ ಚಿಮನ್ ಲಾಲ್ ಶ್ಹಾ, ಧರ್ಮೇಶ್ ಎಸ್.ಸಾಲ್ಯಾನ್, ಡಾ। ಪ್ರಕಾಶ್ ಮೂಡುಬಿದ್ರಿ, ಒ.ಪಿ.ಪೂಜಾರಿ, ಸೌಕತ್ ವಾಲ್, ಹರಿರಾಂ ಚೌಧರಿ, ಪದ್ಮನಾಭ ಎ.ಪೂಜಾರಿ, ಸನತ್ ಎನ್.ಆರ್, ಕೃಷ್ಣಮೂರ್ತಿ ಶೇಷನ್, ದಿವಾಕರ್ ಸಾಲಿಯನ್, ಜಯರಾಮ್ ಸುಬ್ರಹ್ಮಣ್ಯ, ಓಂಪ್ರಕಾಶ್, ಡಾ। ಸತೀಶ್ ಎನ್.ಬಂಗೇರ, ನಿಲೇಶ್ ಸಾರಂಗ್ ಮಾತನಾಡಿ ತಮ್ಮ ಸಲಹೆ ಸೂಚನೆಗಳನ್ನೀಡಿ ಬ್ಯಾಂಕ್‌ನ ಉನ್ನತಿಗಾಗಿ ಹಾರೈಸಿದರು.

ಸಭೆಯಲ್ಲಿ ಭಾರತ್ ಬ್ಯಾಂಕ್‌ನ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಪ್ರಜ್ವಲ್ ಜೆ. ಪೂಜಾರಿ, ಸದಸ್ಯರಾದ ಅಶೋಕ್ ಕೆ. ಕೋಟ್ಯಾನ್, ನಿತ್ಯಾನಂದ ಡಿ.ಕೋಟ್ಯಾನ್, ಮಹಾ ಪ್ರಬಂಧಕರುಗಳಾದ ವಿಶ್ವನಾಥ್ ಜಿ.ಸುವರ್ಣ, ಮಹೇಶ್ ಬಿ.ಕೋಟ್ಯಾನ್, ಸತೀಶ್ ಎಂ.ಬಂಗೇರ ಮತ್ತಿತರ ಉನ್ನತಾಧಿಕಾರಿಗಳು ಹಾಗೂ ಷೇರುದಾರ ಸದಸ್ಯರನೇಕರು ಹಾಜರಿದ್ದರು.

ಬ್ಯಾಂಕ್‌ನ ಸಹಾಯಕ ಪ್ರಬಂಧಕ ಯಶೋಧರ ಡಿ.ಪೂಜಾರಿ ಪ್ರಾರ್ಥನೆಗೈದರು. ಗತ ವರ್ಷದಲ್ಲಿ ಅಗಲಿದ ಸದಸ್ಯರು, ಹಿತೈಷಿಗಳಿಗೆ ಮೌನ ಪ್ರಾರ್ಥನೆ ಮೂಲಕ ಸಭೆಯಲ್ಲಿ ಸದ್ಗತಿ, ಚಿರಶಾಂತಿ ಕೋರಲಾಯಿತು. ಆಡಳಿತ ನಿರ್ದೇಶಕ ಮತ್ತು ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ವಿದ್ಯಾನಂದ್ ಎಸ್. ಕರ್ಕೇರ ಸುಖಾಗಮನ ಬಯಸಿ ಸಭಾ ಕಾರ್ಯಕಲಾಪ ನಿರ್ವಹಿಸಿದರು. ಜಂಟಿ ಆಡಳಿತ ನಿರ್ದೇಶಕ ದಿನೇಶ್ ಬಿ. ಸಾಲಿಯಾನ್ ವಂದಿಸಿದರು.

# ಎನ್‌ಎಸ್‌ಇ ಗೂಳಿ ಪ್ರತಿಮೆ ಉದ್ಘಾಟನೆ




**ಮುಂಬಯಿ, ಸೆ.6:** ಬಾಂದ್ರಾ ಬಿಕೆಸಿ ಇಲ್ಲಿನ ನ್ಯಾಷನಲ್ ಸ್ಟಾಕ್ ಎಕ್ಸ್‌ಚೇಂಜ್‌ನ ಪ್ರಧಾನ ಕಚೇರಿಯಲ್ಲಿ ಹೊಸದಾಗಿ ಸ್ಥಾಪಿಸಲಾದ ಎನ್‌ಎಸ್‌ಇ ಬುಲ್ ಪ್ರತಿಮೆಯನ್ನು ಇಂದಿಲ್ಲಿ ಮಹಾರಾಷ್ಟ್ರ ಗವರ್ನರ್ ಸಿ.ಪಿ ರಾಧಾಕೃಷ್ಣನ್ ಉದ್ಘಾಟಿಸಿದರು.

ಬಳಿಕ ದಿ ಜರ್ನಿ ಆಫ್ ಎನೇಬಲ್ 1.4 ಬಿಲಿಯನ್ ಡ್ರೀಮ್ಸ್ ಶೀರ್ಷಿಕೆಯ ಕಾಫಿ ಟೇಬಲ್ ಪುಸ್ತಕವನ್ನು ಅನಾವರಣಗೊಳಿಸಿ ವಿಧ್ಯುಕ್ತ ಬೆಲ್ ಅನ್ನು ಬಾರಿಸಿದರು.

ರಾಷ್ಟ್ರೀಯ ಷೇರು ವಿನಿಮಯ ಕೇಂದ್ರದ ಸಿಇಒ ಮತ್ತು ಎಂಡಿ ಆಶಿಶ್‌ಕುಮಾರ್ ಚೌಹಾಣ್ ಮತ್ತು ಡಿ.ಆರ್ ಚೋಕ್ಸಿ, ಫಿನ್‌ಸರ್ವ್‌ನ ಎಂಡಿ ದೇವೆನ್ ಚೋಸೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

### ಗೌರಿ ಹಬ್ಬದ ಅಂಗವಾಗಿ ಮಹಿಳೆಯರಿಗೆ ಬಾಗಿನ ವಿತರಣೆ

# ಇಂದಿನ ಯುವ ಸಮೂಹಕ್ಕೆ ಭಾರತೀಯ ಸಂಸ್ಕೃತಿ ಅರಿವು ಮೂಡಿಸಬೇಕು



**ಬೆಂಗಳೂರು, ಸೆ. 06 :** ಜಯನಗರ ವಿಧಾನಸಭಾ ಕ್ಷೇತ್ರ: ಶಾಸಕರ ನಿವಾಸದಲ್ಲಿ ಗೌರಿ, ಗಣೇಶ ಹಬ್ಬದ ಪ್ರಯುಕ್ತ ಗೌರಿ ಪೂಜೆ ಮತ್ತು 500 ಸುಮಂಗಲಿಯರಿಗೆ ಬಾಗಿನ ವಿತರಣೆ ಇನ್ಫೋಸಿಸ್ ಫೌಂಡೇಶನ್‌ನ ಅಧ್ಯಕ್ಷರು ಹಾಗೂ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ, ಶಾಸಕರಾದ ಸಿ.ಕೆ.ರಾಮಮೂರ್ತಿ, ನಿಕಟಪೂರ್ವ ಬಿಬಿಎಂಪಿ ಸದಸ್ಯೆ ಎಚ್.ಸಿ.ನಾಗರತ್ನ ರಾಮಮೂರ್ತಿ, ಚಲನಚಿತ್ರ ನಟರು ಹಾಗೂ ಬಿಜೆಪಿ ನಾಯಕಿ ಮಾಳವಿಕಾ ಅವಿನಾಶ್, ತಾರಾ ಅನುರಾಧ ಅವರು ಮಹಿಳೆಯರಿಗೆ ಬಾಗಿನ ವಿತರಣೆ ಮಾಡಿದರು.

ಸುಧಾಮೂರ್ತಿ ಮಾತನಾಡಿ ಭಾರತೀಯ ಸಂಸ್ಕೃತಿಯನ್ನು ಬಿಂಬಿಸುವ ಹಬ್ಬ ಗೌರಿ ಹಬ್ಬವಾಗಿದೆ, ಮಹಿಳೆಯರಿಗೆ ಗೌರಿಹಬ್ಬದ ಸಂದರ್ಭದಲ್ಲಿ ತವರಿನಿಂದ ಬಾಗಿನವನ್ನು ಮಹಿಳೆಯರು ನೀಡಲಾಗುತ್ತದೆ. ಎಲ್ಲರು ಸಂಸ್ಕೃತಿ, ಪದ್ಧತಿ ಪಾರಂಪರಿಕ ಸಂಪ್ರಾದಯ ಉಳಿಸಬೇಕು ಇಂದಿನ ಯುವ ಸಮೂಹ ತಿಳಿಸಬೇಕು. ಸೋಮಾರಿಗಳಾಬೇಡಿ, ಎಲ್ಲರು ಕಾಯಕ ಮಹತ್ವ ಅರಿತು ದುಡಿದು ದೇಶ ಅಭಿವೃದ್ಧಿ ಕೈಜೋಡಿಸಬೇಕು ಎಂದು ಹೇಳಿದರು. ಶಾಸಕ ಸಿ. ಕೆ.ರಾಮಮೂರ್ತಿ ಮಾತನಾಡಿ, ಜಯನಗರ ವಿಧಾನಸಭಾ ಕ್ಷೇತ್ರ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿ, ಸಂಪ್ರಾದಯ ಸಾಂಸ್ಕೃತಿಕ ಕೇಂದ್ರವಾಗಿದೆ. ಜಯನಗರ ವಿಧಾನಸಭಾ ಕ್ಷೇತ್ರದ ಜನರು ನನ್ನ ಕುಟುಂಬದಂತೆ ಎಲ್ಲರು ಒಟ್ಟಾಗಿ ಹಬ್ಬದ ಅಚರಣೆ ಮಾಡಬೇಕು ಎಂಬ ಉದ್ದೇಶದಿಂದ ಗೌರಿಹಬ್ಬದಲ್ಲಿ ಮಹಿಳೆಯರಿಗೆ ತವರಿನಿಂದ ಬಾಗಿನ ಕೊಡುವಂತೆ ನನ್ನ ಮನೆಯಿಂದ ಮಹಿಳೆಯರಿಗೆ ಬಾಗಿನ ನೀಡಲಾಗುತ್ತಿದೆ. ಗೌರಿ ವ್ರತ ಅಚರಣೆಯಿಂದ ಎಲ್ಲರ ಬಾಳಿನಲ್ಲಿ ಸುಖ, ನೆಮ್ಮದಿ ಸಂಪತ್ತು ಲಭಿಸುತ್ತದೆ ಎಂಬ ನಂಬಿಕೆ ಇದೆ ಎಂದರು.

# ದರ್ಶನ್ ಪತ್ನಿ ವಿಜಯಲಕ್ಷ್ಮೀ, ಸಹೋದರ ದಿನಕರ ತೂಗುದೀಪ್ ಜೈಲಿಗೆ ಭೇಟಿ

**ಬೆಂಗಳೂರು, ಸೆ. 06 :** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲಿಸರು ಆರೋಪ ಪಟ್ಟಿ ಸಲ್ಲಿಸಿದ ಬೆನ್ನಲ್ಲೆ ಈ ಪ್ರಕರಣದಲ್ಲಿ 2ನೇ ಆರೋಪಿಯಾಗಿರುವ ನಟ ದರ್ಶನ್ ಜಾಮೀನು ಕೋರಿ ಅರ್ಜಿ ಸಲ್ಲಿಸಲು ಸಿದ್ಧತೆ ನಡೆಸಿದ್ದಾರೆ. ಪೊಲೀಸರು ಆರೋಪಪಟ್ಟಿ ಸಲ್ಲಿಸಿದ ನಂತರ ನಟ ದರ್ಶನ್ ಪತ್ನಿ ವಿಜಯಲಕ್ಷ್ಮಿ ಹಾಗೂ ಸಹೋದರ ದಿನಕರ ತೂಗುದೀಪ ಅವರು ನಿನ್ನೆ ಸಂಜೆ ಬಳ್ಳಾರಿ ಜೈಲಿನಲ್ಲಿರುವ ನಟ ದರ್ಶನ್ ಅವರನ್ನು ಭೇಟಿ ಮಾಡಿ ಜಾಮೀನು ಅರ್ಜಿಗೆ ಸಹಿ ಪಡೆದುಕೊಂಡರು ಎಂದು ಹೇಳಲಾಗಿದೆ. ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಎ2 ಆಗಿರುವ ನಟ ದರ್ಶನ್ ಇದುವರೆಗೂ ಜಾಮೀನು ಕೋರಿ ಅರ್ಜಿ ಸಲ್ಲಿಸಿರಲಿಲ್ಲ. ಪೊಲೀಸರು ಆರೋಪಪಟ್ಟಿ ಸಲ್ಲಿಸಿದ ನಂತರ ಜಾಮೀನು ಅರ್ಜಿ ಸಲ್ಲಿಸಲು ಮುಂದಾಗಿದ್ದಾರೆ.

ಅದರಂತೆ ನಿನ್ನೆ ತಮ್ಮ ಪತ್ನಿ ವಿಜಯಲಕ್ಷ್ಮಿ ತಂದಿದ್ದ ಜಾಮೀನು ಅರ್ಜಿಗೆ ನಟ ದರ್ಶನ್ ಬಳ್ಳಾರಿ ಜೈಲಿನಲ್ಲೇ ಸಹಿ ಹಾಕಿದ್ದಾರೆ. ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಸಲ್ಲಿಸಿರುವ ಆರೋಪಪಟ್ಟಿಯನ್ನು ನ್ಯಾಯಾಲಯದಿಂದ ಪಡೆದು ಬಳಿಕ ನ್ಯಾಯಾಲಯಕ್ಕೆ ಜಾಮೀನು ಕೋರಿ ಅರ್ಜಿಯನ್ನು ಸಲ್ಲಿಸಲಾಗುತ್ತದೆ ಎಂದು ದರ್ಶನ್ ಪರ ವಕೀಲರು ಮಾಹಿತಿ ನೀಡಿದ್ದಾರೆ. ಯಾವುದೇ ಪ್ರಕರಣದ ಆರೋಪಿ ಜಾಮೀನು ಪಡೆಯಲು ಅರ್ಜಿಗೆ ಖುದ್ದು ಸಹಿ ಹಾಕಬೇಕು. ಅದರಂತೆ ದರ್ಶನ್ ಪತ್ನಿ ನಿನ್ನೆ ಜಾಮೀನು ಅರ್ಜಿಗೆ ದರ್ಶನ್ ಅವರಿಂದ ಸಹಿ ಪಡೆದಿದ್ದಾರೆ ಎಂದು ಹೇಳಲಾಗಿದೆ. ಸಂದರ್ಶಕರ ಸಮಯಕ್ಕೆ ಮುನ್ನ ಜೈಲಿಗೆ ಆಗಮಿಸಿದ್ದ ವಿಜಯಲಕ್ಷ್ಮಿ ಸಂದರ್ಶಕರ ಕೊಠಡಿಯಲ್ಲಿ ಅರ್ಧಗಂಟೆ ಕಾದು ಕುಳಿತರು. ಬಳಿಕ, ಹೈಸೆಕ್ಯೂರಿಟಿ ಸೆಲ್ನಿಂದ ಆಗಮಿಸಿದ ದರ್ಶನ್ ಕಂಡು ಕುಶಲೋಪರಿ ವಿಚಾರಿಸಿ ಜಾಮೀನು ಬಗ್ಗೆ ಚರ್ಚೆ ನಡೆಸಿದ್ದಾರೆ. ಈ ವೇಳೆ ಚಾರ್ಜ್ ಶೀಟ್ನಲ್ಲಿರುವ ಅಂಶ, ವಕೀಲರು ಹೇಳಿರುವ ಮಾಹಿತಿಯನ್ನು ವಿಜಯಲಕ್ಷ್ಮಿ ಹಾಗೂ ಸಹೋದರ ದಿನಕರ್ ಅವರು ಹಂಚಿಕೊಂಡಿದ್ದಾರೆ.

ಜೈಲುಗಳ ನಿಯಮದಂತೆ ದರ್ಶನ್ ಅವರಿಗೆ ಕೊಡುವ ಸೌಲಭ್ಯವನ್ನು ಪೂರೈಸಿ, ವಾರದಲ್ಲಿ ಕನಿಷ್ಠ ಎರಡು ಬಾರಿಯಾದರೂ ಭೇಟಿಗೆ ಅವಕಾಶ ಕೊಡಿ ಎಂದು ಜೈಲು ಅಧೀಕ್ಷಕಿ ಲತಾ ಅವರಿಗೆ ಮನವಿ ಮಾಡಿದ್ದಾರೆ. ಎರಡನೇ ಬಾರಿಗೆ ಭೇಟಿ ನೀಡಿದ್ದ ವಿಜಯಲಕ್ಷ್ಮಿ ಬ್ಯಾಗ್ನಲ್ಲಿ ಬಟ್ಟೆ ಮತ್ತು ಬೇಕರಿ ಪದಾರ್ಥಗಳು, ಡ್ರೈ ಫ್ರೂಟ್ಸ್ ಗಳನ್ನು ನೀಡಲಾಯಿತು. ಭೇಟಿ ಬಳಿಕ ಸ್ವತಃ ದರ್ಶನ್ ಬ್ಯಾಗ್ ಹಿಡಿದು ಸ್ಪೈ ಸೆಕ್ಯೂರಿಟಿ ಸೆಲ್ಗೆ ಮರಳಿದರು. ಜಾಮೀನಿನ ವಕಾಲತ್ತು ಅರ್ಜಿಗೆ ದರ್ಶನ್ ಸಹಿ ಪಡೆದ ಬಳಿಕ ಜೈಲು ಅಧಿಕಾರಿಗಳ ಸಮಕ್ಷಮದಲ್ಲಿ ನೋಟರಿ ಮಾಡಿಕೊಳ್ಳುವ ಕಾರಣಕ್ಕೆ ವಕೀಲರೊಬ್ಬರು ಪುನಃ ಜೈಲಿಗೆ ಭೇಟಿ ಅಧೀಕ್ಷಕರ ಜೊತೆ ಚರ್ಚೆ ನಡೆಸಿ ಸಹಿ ಪಡೆದರು. ನಟ ದರ್ಶನ್ ಇರುವ ಹೈಸೆಕ್ಯೂರಿಟಿ ಸೆಲ್ ಗೆ ಟಿವಿ ವ್ಯವಸ್ಥೆಯನ್ನು ಮಾಡಲಾಗಿದ್ದು,ಭದ್ರತೆ ಯಥಾಸ್ಥಿತಿಯಲ್ಲಿ ಮುಂದುವರೆಸಲಾಗಿದೆ.

# ಉದ್ಯಮಿ ಸುಶೀಲ್ ಮಂತ್ರಿಗೆ ಬಿಗ್ ರಿಲೀಫ್: ಲುಕ್‌ಔಟ್ ನೋಟಿಸ್ ಅಮಾನತ್ತು



**ಬೆಂಗಳೂರು, ಸೆ. 06 :** ಮಂತ್ರಿ ಡೆವಲಪರ್ಸ್ ಮುಖ್ಯಸ್ಥ ಸುಶೀಲ್ ಮಂತ್ರಿ, ಪತ್ನಿ ಸ್ನೇಹಲ್ ಹಾಗೂ ಪುತ್ರ ಪ್ರತೀಕ್ ವಿರುದ್ಧ ಹೊರಡಿಸಿದ್ದ ಲುಕ್ ಔಟ್ ನೋಟಿಸ್ ಅನ್ನು ಹೈಕೋರ್ಟ್ ಅಮಾನತ್ತಿನಲ್ಲಿಟ್ಟಿದೆ. ಕೇಂದ್ರ ಗೃಹ ಇಲಾಖೆಯ ವಲಸೆ ವಿಭಾಗದ ಅಧಿಕಾರಿಗಳು ಹೊರಡಿಸಿರುವ ಲುಕ್‌ಔಟ್ ನೋಟಿಸ್ ಪ್ರಶ್ನಿಸಿ ಸುಶೀಲ್ ಮಂತ್ರಿ, ಸ್ನೇಹಲ್ ಮತ್ತು ಪ್ರತೀಕ್ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಹೇಮಂತ್ ಚಂದನಗೌಡ ಅವರ ಏಕಸದಸ್ಯ ಪೀಠ ಈ ಆದೇಶ ನೀಡಿದೆ. ಸುಶೀಲ್ ಮಂತ್ರಿ ಕುಟುಂಬದ ವಿರುದ್ಧ ಕಬ್ಬನ್ ಪಾರ್ಕ್ ಠಾಣೆಯಲ್ಲಿ ಈಗಾಗಲೇ ಹತ್ತು ಕ್ರಿಮಿನಲ್ ಪ್ರಕರಣ ದಾಖಲಾಗಿದೆ.

ಈ ಎಲ್ಲ ಪ್ರಕರಣಗಳಿಗೂ ಹೈಕೋರ್ಟ್ ತಡೆ ನೀಡಿದ್ದು ಅರ್ಜಿದಾರರ ವಿರುದ್ಧದ ಎಲ್‌ಒಸಿ ಹಿಂಪಡೆಯಬೇಕು ಎಂದು ಅರ್ಜಿದಾರರ ಪರ ವಕೀಲರು ಮನವಿ ಮಾಡಿದರು.ಅರ್ಜಿದಾರರ ವಿರುದ್ಧ ಹಣಕಾಸು ದುರ್ಬಳಕೆಗೆ ಸಂಬಂಧಿಸಿದಂತೆ ಹಲವು ಕ್ರಿಮಿನಲ್ ಪ್ರಕರಣಗಳು ದಾಖಲಾಗಿದ್ದು, ವಿದೇಶಕ್ಕೆ ತೆರಳಿದರೆ ವಾಪಸಾಗುವ ಸಾಧ್ಯತೆ ಇಲ್ಲದ ಹಿನ್ನೆಲೆಯಲ್ಲಿ ಎಲ್‌ಒಸಿ ಹೊರಡಿಸಲು ಮನವಿ ಮಾಡಲಾಗಿತ್ತು. ಈಗ ಅವರ ವಿರುದ್ಧದ ಕ್ರಿಮಿನಲ್ ಪ್ರಕರಣಗಳಿಗೆ ಹೈಕೋರ್ಟ್ ತಡೆ ವಿಧಿಸಿದೆ ಎನ್ನುವುದನ್ನು ನ್ಯಾಯಪೀಠದ ಗಮನಕ್ಕೆ ತಂದರು. ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ ಸುತ್ತೋಲೆಯನ್ನು ಅಮಾನತ್ತಿನಲ್ಲಿಟ್ಟು ಆದೇಶಿಸಿತು. ಅರ್ಜಿದಾರರ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣಕ್ಕೂ ತಡೆ ನೀಡಿ ಆದೇಶಿಸಿದೆ. ಏನಿದು ಪ್ರಕರಣ:-ಹಣ ಪಡೆದ ಬಳಿಕ ಮನೆಗಳ ನಿರ್ಮಾಣ ಕಾರ್ಯ ಪೂರ್ಣಗೊಳಿಸದೆ ಮತ್ತು ಮನೆ ಹಸ್ತಾಂತರಿಸದ ಹಿನ್ನೆಲೆಯಲ್ಲಿ ಮಂತ್ರಿ ಡೆವಲಪರ್ಸ್ ವಿರುದ್ಧ ಮುಂಗಡ ಪಾವತಿ ಮಾಡಿದ್ದ ಗ್ರಾಹಕರು ದೂರು ನೀಡಿದ್ದರು. ದೂರು ದಾಖಲಿಸಿಕೊಂಡಿದ್ದ ಕಬ್ಬನ್ ಪಾರ್ಕ್ ಪೊಲೀಸರ ಮನವಿಯ ಮೇರೆಗೆ ಕೇಂದ್ರ ಗೃಹ ಇಲಾಖೆಯು ಅರ್ಜಿದಾರರ ವಿರುದ್ಧ ಲುಕ್‌ಔಟ್ ಸುತ್ತೋಲೆಯನ್ನು ಹೊರಡಿಸಿತ್ತು.

# ಎತ್ತಿನಹೊಳೆ; ಕಾಂಗ್ರೆಸ್ ಸರ್ಕಾರದ ಮತ್ತೊಂದು ಬಂಡಲ್ ಬೊಗಳೆ



**ಬೆಂಗಳೂರು, ಸೆ. 06 :** ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಸೇರಿದಂತೆ ಬಯಲುಸೀಮೆ ಜಿಲ್ಲೆಗಳ ಜನರ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ 2010ರಲ್ಲಿ ಸನ್ಮಾನ್ಯ ಬಿ.ಎಸ್. ಯಡಿಯೂರಪ್ಪನವರ ನೇತೃತ್ವದ ಬಿಜೆಪಿ ಸರ್ಕಾರ ರೂಪಿಸಿದ ಮಹತ್ವಾಕಾಂಕ್ಷಿ ಎತ್ತಿನಹೊಳೆ ಯೋಜನೆಯನ್ನ ಕಾಂಗ್ರೆಸ್ ಸರ್ಕಾರ ಇಂದು ತನ್ನದೇ ಸಾಧನೆ ಎಂದು ಪುಟಗಟ್ಟಲೆ ಜಾಹೀರಾತು ಕೊಟ್ಟು ಪ್ರಚಾರ ಪಡೆಯಲು ಪ್ರಯತ್ನಿಸುತ್ತಿರುವುದು ಕಾಂಗ್ರೆಸ್ ಪಕ್ಷ ಬೌದ್ಧಿಕವಾಗಿ, ನೈತಿಕವಾಗಿ ಎಷ್ಟು ದಿವಾಳಿ ಆಗಿದೆ ಎನ್ನುವುದಕ್ಕೆ ಮತ್ತೊಂದು ಸಾಕ್ಷಿ.


2010ರಲ್ಲಿ ಅಂದಿನ ಜಲ ಸಂಪನ್ಮೂಲ ಸಚಿವರಾಗಿದ್ದ ಶ್ರೀ ಬಸವರಾಜ ಬೊಮ್ಮಾಯಿ ಅವರು ಎತ್ತಿನಹೊಳೆ ಯೋಜನೆಯ ಪ್ರಸ್ತಾವನೆಯನ್ನು ಅಂದಿನ ಮುಖ್ಯಮಂತ್ರಿ ಯಡಿಯರಪ್ಪನವರ ಮುಂದಿಟ್ಟಾಗ ಯಡಿಯೂರಪ್ಪನವರ ನೇತೃತ್ವದ ಬಿಜೆಪಿ ಸರ್ಕಾರ ಅದಕ್ಕೆ ತಾತ್ವಿಕ ಒಪ್ಪಿಗೆ ನೀಡಿತ್ತು. 2012 ಅಂದಿನ ಮುಖ್ಯಮಂತ್ರಿಗಳಾದ ಶ್ರೀ ಡಿ.ವಿ. ಸದಾನಂದ ಗೌಡರು ಒಟ್ಟು 8,000 ಕೋಟಿ ರೂಪಾಯಿ ಮೊತ್ತದ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಿದರು. ಅಂದಿನ ಜನಸಂಪನ್ಮೂಲ ಸಚಿವರಾಗಿದ್ದ ಬಸವರಾಲ ಬೊಮ್ಮಾಯಿ ಅವರು ಕೇಂದ್ರ ಸರ್ಕಾರದಿಂದ ಮತ್ತು ಇನ್ನಿತರ ಪ್ರಾಧಿಕಾರಗಳಿಂದ ಎಲ್ಲ ರೀತಿಯ ಅನುಮತಿ ಪಡೆಯಲು ಕಾರಣರಾದರು.

ನಂತರ 2013ರಲ್ಲಿ ಅಧಿಕಾರಕ್ಕೆ ಬಂದ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ 2017ರ ವೇಳೆಗೆ ಯೋಜನೆ ಪೂರ್ಣಗೊಳಿಸುತ್ತೇವೆ ಎಂದು ಮಾತು ಕೊಟ್ಟು, ಬಯಲು ಸೀಮೆ ಜನರಿಗೆ ಮೋಸ ಮಾಡಿದರು. ಐದು ವರ್ಷ ಪೂರ್ಣಾವಧಿ ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯನವರು ಈ ಯೋಜನೆ ಪೂರ್ಣಗೊಳಿಸುವ ಬದ್ಧತೆ ತೋರಲೇ ಇಲ್ಲ.

ನಂತರ 2022-23ರ ಬಜೆಟ್ ನಲ್ಲಿ ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಬಿಜೆಪಿ ಸರ್ಕಾರ 3,000 ಕೋಟಿ ರೂಪಾಯಿ ಅನುದಾನ ನೀಡಿ ಎತ್ತಿನಹೊಳೆ ಯೋಜನೆಗೆ ವೇಗ ನೀಡಿತ್ತು. 2014ರಲ್ಲಿ 8,500 ಕೋಟಿ ರೂಪಾಯಿ ವೆಚ್ಚದಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿದ್ದ ಯೋಜನೆಯ ವೆಚ್ಚ ಇದೀಗ 23,251 ಕೋಟಿ ರೂ.ಗೆ ಮುಟ್ಟಿದೆ. ಇದಕ್ಕೆ ಯಾರು ಕಾರಣ? 2013ರಿಂದ ಈಗ 2024ರವರೆಗೆ ಒಟ್ಟು ಸುಮಾರು 7-8 ವರ್ಷ ಕಾಂಗ್ರೆಸ್ ಪಕ್ಷವೇ ಅಧಿಕಾರದಲ್ಲಿತ್ತು, ಸುಮಾರು ಆರೂವರೆ ವರ್ಷ ಸಿದ್ದರಾಮಯ್ಯನವರೇ ಮುಖ್ಯಮಂತ್ರಿಗಳಾಗಿದ್ದರು. ಈ ಯೋಜನೆ ಇಷ್ಟು ವಿಳಂಬವಾಗಲು ಯಾರು ಕಾರಣ? ಯೋಜನಾ ವೆಚ್ಚ ಆರಂಭಿಕ ಅಂದಾಜಿಗಿಂತ ಮೂರು ಪಟ್ಟು ಹೆಚ್ಚಾಗಲು ಕಾರಣ ಯಾರು?

ಇಷ್ಟಾದರೂ ಬೆಟ್ಟ ಅಗೆದು ಇಲಿ ಹಿಡಿದರು ಎಂಬಂತೆ ಕಟ್ಟ ಕಡೆಯ ಜಿಲ್ಲೆಗಳಾದ ಬೆಂಗಳೂರು ಗ್ರಾಮಾಂತರ , ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳಿಗೆ ಎತ್ತಿನಹೊಳೆ ನೀರು ತಲುಪುತ್ತದೆಯೋ ಇಲ್ಲವೋ ಎಂಬ ದಟ್ಟ ಅನುಮಾನ ಈ ಜಿಲ್ಲೆಗಳ ಜನರಲ್ಲಿ ಕಾಡುತ್ತಿದೆ. ಅಸಲಿಗೆ ಈ ಯೋಜನೆ ರೂಪಿಸಿದ್ದೇ ಈ ಮೂರು ಬಯಲುಸೀಮೆ ಜಿಲ್ಲೆಗಳಿಗೆ ಶಾಶ್ವತ ಕುಡಿಯುವ ನೀರು ಒದಗಿಸಲು. ಈ ಉದ್ದೇಶವೇ ಸಾರ್ಥಕವಾಗಿದ್ದಾರೆ ಈ ಇಡೀ ಯೋಜನೆ ನೀರಿನಲ್ಲಿ ಹೋಮ ಮಾಡಿದಂತಾಗುತ್ತದೆ. ಸಿಎ ಸಿದ್ದರಾಮಯ್ಯ ಹಾಗೂ ಡಿಸಿಎಂ ಶಿವಕುಮಾರ ಅವರಿಗೆ ನಿಜವಾಗಿಯೂ ಈ ಭಾಗದ ಜನರ ಬಗ್ಗೆ ಬದ್ಧತೆ ಇದ್ದಿದ್ದರೆ ಎತ್ತಿನಹೊಳೆ ಯೋಜನೆಗೆ ಈ ಮೂರು ಜಿಲ್ಲೆಗಳಲ್ಲಿ ಒಂದು ಕಡೆ ಚಾಲನೆ ನೀಡಬೇಕಾಗಿತ್ತು. ಕಾಂಗ್ರೆಸ್ ಸರ್ಕಾರದ ಬೋಗಸ್ ಗ್ಯಾರೆಂಟಿಗಳ ರೀತಿಯಲ್ಲಿ ಇಂದಿನ ಕಾರ್ಯಕ್ರಮವೂ ಒಂದು ಬಿಟ್ಟಿ ಪ್ರಚಾರ ಪಡೆಯುವ ನಾಟಕವೇ ಹೊರತು ಇದರಿಂದ ಜನರಿಗೆ ಯಾವುದೇ ಲಾಭವಿಲ್ಲ.

# ನರ ಮಾನಸಿಕ ರೋಗಗಳ ಪತ್ತೆ ಹಚ್ಚುವಿಕೆ ಹಾಗೂ ನಿಬಾವಣೆಯಲ್ಲಿ ಕುಟುಂಬ ವೈದ್ಯರ ಪಾತ್ರ ದೊಡ್ಡದು: ಡಾ.ರಾಹುಲ್ ಮಾಧವರಾವ್



**ಮಂಗಳೂರು, ಸೆ. 06 :** ಮಂಗಳೂರು ನಗರದ ಕುಟುಂಬ ವೈದ್ಯರ ಸಂಘಟನಯ ಆಶ್ರಯದಲ್ಲಿ ಜರುಗಿದ ವಿಚಾರ ಸಂಕಿರಣದಲ್ಲಿ ಭಾಗವಹಿಸಿದ ಫಾದರ್ ಮುಲ್ಲರ್ಸ್ ಮೆಡಿಕಲ್ ಕಾಲೇಜಿನ ನರಮಾನಸಿಕ ವಿಭಾಗದ ತಜ್ಞರಾದ ಡಾ ರಾಹುಲ್ ಮಾಧವ ರಾವ್ ಮಾತಾಡುತ್ತಾ, ನರ ಹಾಗೂ ಮಾನಸಿಕ ರೋಗಗಳ ಪತ್ತೆ ಹಚ್ಚುವಿಕೆ ಹಾಗೂ ನಿಬಾವಣೆಯಲ್ಲಿ ಕುಟುಂಬ ವೈದ್ಯರ ಪಾತ್ರ ದೊಡ್ಡದು ಎಂಬ ಅಭಿಪ್ರಾಯ ಪಟ್ಟರು. ಸಂಕಿರಣದ ಸಂಚಾಲಕರಾದ ಹಿರಿಯ ನರ ಮಾನಸಿಕ ರೋಗಗಳ ತಜ್ಞ ಡಾ ಮಾಧವ ರಾವ್ ಗೋಷ್ಠಿಯಲ್ಲಿ ತಜ್ಞ ಮಾಹಿತಿ ಹಂಚಿಕೊಂಡರು. ಇಪ್ಪತ್ತರ ಸಂಭ್ರಮದಲ್ಲಿ ಇರುವ ಮಂಗಳೂರು ಕುಟುಂಬ ವೈದ್ಯರ ಸಂಘಟನೆ, ನೂರು ವರ್ಷಗಳ ಹೊಸ್ತಿಲಲ್ಲಿ ಇರುವ ಐಎಂಎ ಯ ಕುಟುಂಬ ವೈದ್ಯರ ರಾಜ್ಯ ಸಮ್ಮೇಳನವನ್ನ ಹನ್ನೆರಡು ವರ್ಷಗಳ ಬಳಿಕ ಮಂಗಳೂರಲ್ಲಿ ಅಕ್ಟೋಬರ್ 20 ರಂದು ಹಮ್ಮಿಕೊಳ್ಳಲಾಗಿದೆ ಎಂದು ಕುಟುಂಬ ವೈದ್ಯರ ಸಂಘಟನೆಯ ಅಧ್ಯಕ್ಷರೂ, ಸಮ್ಮೇಳನದ ಅಧ್ಯಕ್ಷರೂ ಆದ ಡಾ ಎಂ ಅಣ್ಣಯ್ಯ ಕುಲಾಲ್ ಉಲ್ಲೂರು ತಿಳಿಸಿದರೂ. ಸಮ್ಮೇಳನದ ವಿಚಾರ ಸಂಕಿರಣ ಉದ್ಘಾಟನೆ ಹಾಗೂ ಸಮ್ಮೇಳನದ ಉದ್ಘಾಟನೆಗೆ ಆರೋಗ್ಯ ಹಾಗೂ ಹೃದಯತಜ್ಞ ಸಂಸದ ಡಾ ಸಿ.ಎನ್.ಮಂಜುನಾಥ್, ಆರೋಗ್ಯ ಮಂತ್ರಿ ಡಾ ದಿನೇಶ್ ಗುಂಡೂರಾವ್. ಸ್ಪೀಕರ್ ಯು ಟಿ ಖಾದರ್, ಸಂಸದರಾದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಕೋಟ ಶ್ರೀನಿವಾಸ್ ಪೂಜಾರಿ, ಶಾಸಕರಾದ ವೇದವ್ಯಾಸ ಕಾಮತ್, ಡಾ ಭರತ್ ಶೆಟ್ಟಿ, ಮೇಯರ್ ಡಾ ಸುಧೀರ್ ಶೆಟ್ಟಿ, ಸ್ಥಳೀಯ ಕಾರ್ಪೊರೇಟರ್ ವಿನಯ್ ರಾಜ್ ಜೊತೆ ರಾಜ್ಯ ಕೆಎಂಸಿ ಅಧ್ಯಕ್ಷ ಡಾ ಯೋಗಾನಂದ ರೆಡ್ಡಿ , ಐಎಂಎ ಮತ್ತು ಐಎಂಎ ಸಿಜಿಪಿ ಯ ರಾಷ್ಟ್ರ ರಾಜ್ಯ ಹಾಗೂ ಮಂಗಳೂರಿನ ಪದಾಧಿಕಾರಿಗಳು ಭಾಗವಹಿಸುತ್ತಾರೆ. ಅಲ್ಲದೇ ರಾಜ್ಯದ ವಿವಿಧ ಜಿಲ್ಲೆಗಳ 300 ಕ್ಕೂ ಅಧಿಕ ಕುಟುಂಬ ವೈದ್ಯರು ಹಾಗೂ ಆಸಕ್ತ ಎಂಬಿಬಿಎಸ್ ವಿದ್ಯಾರ್ಥಿಗಳು ಭಾಗವಹಿಸಲಿದ್ದು, ಡಾ ಸದಾಶಿವ ಪೋಲಾನಯ ಅವರ ಗೌರವ ಅದ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದ್ದು, ಡಾ ಜಿಕೆ ಭಟ್ ಸಂಕಬಿತ್ತಿಲು ಸಂಘಟನಾ ಕಾರ್ಯದರ್ಶಿಯಾಗಿ, ಡಾ ಜೆ ಎನ್ ಭಟ್ ಗೋಷ್ಠಿಗಳ ಉಸ್ತುವಾರಿಯಾಗಿ, ಡಾ ಶೇಖರ್ ಪೂಜಾರಿ ಕೋಶಾಧಿಕಾರಿಯಾಗಿ ಇತರ ಸಮಿತಿಯ ಸದಸ್ಯರ ಜೊತೆ ಸಮ್ಮೇಳನದ ಯಶಸ್ಸಿಗಾಗಿ ದುಡಿಯುತ್ತಿದ್ದು ಸರ್ವರೂ ಸಹಕರಿಸಬೇಕುಎಂದು ಅದ್ಯಕ್ಷ ಡಾ ಕುಲಾಲ್ ಮನವಿ ಮಾಡಿಕೊಂಡರು. ಧನ್ಯವಾದದೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.



ಬೆಂಗಳೂರಿನ ಅರಮನೆ ರಸ್ತೆಯ ಮೈಸೂರು ಬ್ಯಾಂಕ್ ಸರ್ಕಲ್ ಬಳಿ ಇರುವ ಕರ್ನಾಟಕ ರಾಜ್ಯ ಸರ್ಕಾರಿ ವಿಶ್ವವಿದ್ಯಾಲಯಗಳ ವಿಶ್ರಾಂತ ಕುಲಪತಿಗಳ ವೇದಿಕೆಯ ಸಭಾಂಗಣದಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ವಿಶ್ರಾಂತ ವಿಜ್ಞಾನಿ ಡಾ.ವಾಸುದೇವ ಕಲ್ಕುಂಟೆ ಅತ್ರಿ, ವೇದಿಕೆಯ ಅಧ್ಯಕ ಡಾ ಚಂದ್ರಶೇಖರ್ ಶೆಟ್ಟಿ ಅವರು ಜೀವಮಾನ ಸಾಧಕ ಪ್ರಶಸ್ತಿಗೆ ಪುರಸ್ಕೃತರಾದ ಡಾ. ಎಸ್ ಶ್ರೀನಿವಾಸ್ ಮೂರ್ತಿ, ಡಾ. ಕೆ. ಸುಧಾರಾವ್, ಡಾ.ಎ. ಮುರಿಗೆಪ್ಪ ಅವರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಡಾ. ಆರ್.ಎನ್.ಶ್ರೀನಿವಾಸ್ ಗೌಡ, ವೇದಿಕೆಯ ಕಾರ್ಯದರ್ಶಿ ಡಾ.ಎಚ್.ಮಹೇಶಪ್ಪ, ಡಾ.ಕೆ. ನಾರಾಯಣಗೌಡ ಮತ್ತಿತರರು ಹಾಜರಿದ್ದರು.

# ಯಾವುದೆ ಕ್ಷೇತ್ರದಲ್ಲಿಯಾದ್ದರೂ ಆತ್ಮಗೌರವಕ್ಕೆ ಧಕ್ಕೆ ಬರಬಾರದು: ರಮೇಶ್ ಅರವಿಂದ್



**ಬೆಂಗಳೂರು, ಸೆ. 06 :** ಭಾರತ ಚಿತ್ರರಂಗದಲ್ಲೇ ಹೊಸ ಅಲೆಯನ್ನೇ ಸೃಷ್ಟಿಸಿರುವ ನ್ಯಾ. ಹೇಮಾ ಸಮಿತಿ ವರದಿ ಬಹಿರಂಗವಾದ ಬೆನ್ನಲ್ಲೇ ಖ್ಯಾತ ನಟ, ನಿರ್ದೇಶಕ, ನಿರ್ಮಾಪಕರ ವಿರುದ್ಧ ನಟಿಯರು ಲೈಂಗಿಕ ಕಿರುಕುಳದಂತಹ ಆರೋಪಗಳನ್ನು ಮಾಡುತ್ತಿದ್ದಾರೆ. ಚಿತ್ರರಂಗದಲ್ಲಿ ನಟಿಯರು ಅನುಭವಿಸುತ್ತಿರುವ ಲೈಂಗಿಕ ಕಿರುಕುಳ ದೇಶಾದ್ಯಂತ ಸಖತ್ ಸದ್ದು ಮಾಡುತ್ತಿದ್ದು, ಬೇರೆ ಚಿತ್ರರಂಗಗಳ ನಟ-ನಟಿಯರು ಚಿತ್ರೋದ್ಯಮದ ಪರಿಸ್ಥಿತಿಗಳ ಬಗ್ಗೆಯೂ ಸಮಿತಿ ರಚಿಸುವಂತೆ ಆಗ್ರಹಿಸುತ್ತಿದ್ದು, METOO ಅಭಿಯಾನ ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ. ಜಸ್ಟಿಸ್ ಹೇಮಾ ಸಮಿತಿ ವರದಿ ಬಹಿರಂಗವಾದ ಬೆನ್ನಲ್ಲೇ ಸ್ಯಾಂಡಲ್ವುಡ್‌ನಲ್ಲೂ ಕೂಡ ಇದರ ಈ ಬಗ್ಗೆ ಖ್ಯಾತ ನಟ-ನಟಿಯರು ಧ್ವನಿ ಎತ್ತುತ್ತಿದ್ದು, ಈ ಬಗ್ಗೆ ಕಮಿಟಿ ರಚಿಸುವಂತೆ ಸಿಎಂ ಸಿದ್ದರಾಮಯ್ಯಗೆ ಮನವಿ ಮಾಡಿದ್ದಾರೆ.

ಈ ಕುರಿತು ನಟ, ನಿರ್ದೇಶಕ ರಮೇಶ್ ಅರವಿಂದ್ ಮಾತನಾಡಿದ ಅವರು, ಯಾವುದೇ ಕ್ಷೇತ್ರವಾಗಲಿ ಆತ್ಮ ಗೌರವಕ್ಕೆ ಧಕ್ಕೆ ಬರಬಾರದು ಎಂದು ಹೇಳಿದ್ದಾರೆ. ಚಿತ್ರರಂಗ ಮಾತ್ರವಲ್ಲ ಯಾವುದೇ ಕ್ಷೇತ್ರವಾದರೂ ಸರಿ. ಗಂಡು-ಹೆಣ್ಣು ಕೆಲಸ ಮಾಡುವ ಯಾವುದೇ ಕ್ಷೇತ್ರದಲ್ಲಿ ಹೆಣ್ಣುಮಕ್ಕಳಿಗೆ ಕೊಡಬೇಕಾದ ಗೌರವ, ವೇದಿಕೆ, ಸಂಬಳ ಕೊಡಬೇಕು. ಯಾವುದೇ ಕ್ಷೇತ್ರವಾಗಲಿ ಯಾರಿಗೂ ಆತ್ಮ ಗೌರವಕ್ಕೆ ಧಕ್ಕೆ ಬರಬಾರದು. ಈ ರೀತಿಯ ಘಟನೆ ಎಲ್ಲೇ ನಡೆದರೂ ನಾವು ಅವರ ಜೊತೆ ಇರುತ್ತೇವೆ. ಹೆಣ್ಣು ಮಕ್ಕಳಿಗೆ ಎಲ್ಲಾದರೂ ಅನ್ಯಾಯವಾದರೆ ಅವರಿಗೆ ನ್ಯಾಯ ಸಿಗಲೇ ಬೇಕು ಎಂದು ಹೇಳಿದ್ದಾರೆ. ಒಂದು ಸಿನಿಮಾ ಟ್ರೈಲರ್‌ಗಾಗಿ ನಾವು ಎಷ್ಟು ಶ್ರಮ ಪಡುತ್ತೇವೆ. ಸಿನಿಮಾಗಾಗಿ ನಾವೆಲ್ಲ ಕಷ್ಟ ಪಟ್ಟು ಬೆವರು ಸುರಿಸಿ ಕೆಲಸ ಮಾಡುತ್ತೇವೆ.


ಸಿನಿಮಾ ಇಮೇಜ್ ಗೆ ಎಲ್ಲೂ ಡ್ಯಾಮೇಜ್ ಆಗಬಾರದು. ಚಿತ್ರರಂಗ ಅನ್ನೋದು ಗ್ರೇಟ್ ಫೀಲ್ಡ್ ಯಾರು ಅನುಮಾನ ಪಡಬೇಡಿ. ಕೆಲವರಿಂದ ಏನಾದರೂ ತಪ್ಪಾಗಿದ್ರೆ ಅವರಿಗೆ ಏನು ಬೇಕಾದರೂ ಮಾಡಿ. ಅದನ್ನು ಬಿಟ್ಟು ಸಿನಿಮಾ ನಟರು, ನಟಿಯರು ಎಂದು ಸಾಮ್ಯಾನ ರೀತಿಯಾಗಿ ಮಾತನಾಡಬೇಡಿ, ಲೈಂಗಿಕ ಕಿರುಕುಳ ಕೊಡುವವರು ಎಲ್ಲಾ ಕಡೆ ಇರುತ್ತಾರೆ. ಸಿನಿಮಾ ಮಾತ್ರವಲ್ಲ ನಮ್ಮ ಅಕ್ಕ ಪಕ್ಕದ ಮನೆಯಲ್ಲೂ ಇರುತ್ತಾರೆ. ಲೈಂಗಿಕ ಕಿರುಕುಳ ಎಲ್ಲಿ ನಡೆದರೂ ತಪ್ಪು. ಸಿನಿಮಾದಲ್ಲಿ ನಡೆದರೂ ತಪ್ಪು. ಸಿನಿಮಾ ಅನ್ನೋದು ದೊಡ್ಡ ಸಾಗರ. ನಮ್ಮ ಗಮನ ಇರೋದು ಕ್ರಿಯೇಟಿವಿಟಿ ಕಡೆಗೆ. ಯಾರಿಗಾದರೂ ಅನ್ಯಾಯ ಆಗಿದ್ದರೆ ಖಂಡಿತಾ ನಾವು ಜೊತೆಗೆ ಇರುತ್ತೇವೆ. ಅದರೆ ಫೈರ್ ಸಂಸ್ಥೆಯ ಭಾಗಿದಾರ ಆಗಲಾರೆ ಯಾಕಂದ್ರೆ ನಾನು ಕಾರ್ಯಕರ್ತ ಅಲ್ಲ ಎಂದು ನಟ, ನಿರ್ದೇಶಕ ರಮೇಶ್ ಅರವಿಂದ್ ಅಭಿಪ್ರಾಯಪಟ್ಟಿದ್ದಾರೆ.

# ಸೆ.8, 15 ರಭಾನುವಾರವೂ ತೆರೆದಿರಲಿದೆ ಬೆಸ್ಕಾಂ ಉಪವಿಭಾಗದ ಕ್ಯಾಶ್ ಕೌಂಟರ್

**ಬೆಂಗಳೂರು, ಸೆ. 06 :** ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡಿರುವ ಗ್ರಾಹಕರು ವಿದ್ಯುತ್ ಸಂಪರ್ಕದ ಕಡಿತದಿಂದ ತೊಂದರೆಗೊಳಗಾಗದಂತೆ ಸೆ. 8 ಮತ್ತು 15ರ ಭಾನುವಾರವೂ ಬೆಸ್ಕಾಂ ಉಪ ವಿಭಾಗಗಳ ಕ್ಯಾಶ್ ಕೌಂಟರ್ಗಳು ತೆರೆದಿರಲಿವೆ ಎಂದು ಬೆಸ್ಕಾಂ ತಿಳಿಸಿದೆ.

ಈ ಕುರಿತು ಶುಕ್ರವಾರ ಪತ್ರಿಕಾ ಪ್ರಕಟಣೆ ಹೊರಡಿಸಿ, ಬಿಲ್ ಬಾಕಿ ಉಳಿಸಿಕೊಂಡಿರುವ ಗ್ರಾಹಕರು ವಿದ್ಯುತ್ ಸಂಪರ್ಕ ಕಡಿತದಿಂದ ತೊಂದರೆಗೆ ಒಳಗಾಗಬಾರದು ಎಂಬ ಉದ್ದೇಶದಿಂದ ಬೆಸ್ಕಾಂ ವಲಯದ ಎಲ್ಲ ಉಪ ವಿಭಾಗಗಳ ಕ್ಯಾಶ್ ಕೌಂಟರ್ ಗಳನ್ನು ಈ ತಿಂಗಳ 8 ಮತ್ತು 15ರ ಭಾನುವಾರವೂ ತೆರೆಯಲು ನಿರ್ಧರಿಸಲಾಗಿದೆ. ಆನ್‌ಲೈನ್ ಪೇಮೆಂಟ್ ಬಳಸದವರ ಅನಕೂಲಕ್ಕಾಗಿ ಈ ವಿಶೇಷ ವ್ಯವಸ್ಥೆ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಬಿಲ್ ಬಂದ 30 ದಿನದೊಳಗೆ ವಿದ್ಯುತ್ ಶುಲ್ಕ ಪಾವತಿಸದಿದ್ದಲ್ಲಿ ಮತ್ತು ಹೆಚ್ಚುವರಿ ಭದ್ರತಾ ಠೇವಣಿ ಮೊತ್ತ ಪಾವತಿಸದಿದ್ದಲ್ಲಿ ಕೆಇಆರ್‌ಸಿ ನಿಯಮಾವಳಿ ಅನ್ವಯ ಗ್ರಾಹಕರ ವಿದ್ಯುತ್ ಸಂಪರ್ಕ ಕಡಿತಗೊಳಿಸಲು ನಿರ್ಧರಿಸಿದ್ದು, ಸೆಪ್ಟೆಂಬರ್ 1ರಿಂದಲೇ ಈ ನಿಯಮ ಜಾರಿಯಾಗಿದೆ ಎಂದು ಹೇಳಿದೆ. ಗೃಹ ಮತ್ತು ವಾಣಿಜ್ಯ ಬಳಕೆದಾರರು, ಅಪಾರ್ಟ್ಮೆಂಟ್‌ಗಳು ಹಾಗೂ ತಾತ್ಕಲಿಕ ವಿದ್ಯುತ್ ಸಂಪರ್ಕ ಪಡೆದ ಗ್ರಾಹಕರು ನಿಗದಿತ 30 ದಿನದೊಳಗೆ ಬಿಲ್ ಪಾವತಿಸದಿದ್ದಲ್ಲಿ ಮೀಟರ್ ರೀಡಿಂಗ್‌ಗೆ ಬರುವ ದಿನವೇ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು. ಹಾಗಾಗಿ, ಗ್ರಾಹಕರು ಸಕಾಲದಲ್ಲಿ ಶುಲ್ಕ ಪಾವತಿಸುವಂತೆ ಎಂದು ಬೆಸ್ಕಾಂ ಈಗಾಗಲೇ ಕೋರಿದೆ. ವಿದ್ಯುತ್ ಬಿಲ್ ಬಾಕಿ ಮೊತ್ತ ಮತ್ತು ಹೆಚ್ಚುವರಿ ಭದ್ರತಾ ಠೇವಣಿ ಮೊತ್ತ 100 ರೂ.ಗಳಿಗಿಂತ ಅಧಿಕವಾಗಿದ್ದಲ್ಲಿ, ಅಂತಹ ಸ್ಥಾಪನಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗುತ್ತದೆ. ಗೃಹ ಜ್ಯೋತಿಯೋಜನೆ ಅಡಿಯಲ್ಲಿ ಶೂನ್ಯ ಬಿಲ್ ಪಡೆಯುತ್ತಿರುವ ಗ್ರಾಹಕರ ಹಿಂಬಾಕಿ ಶೂನ್ಯವಿದ್ದಲ್ಲಿ ಈ ಬಗ್ಗೆ ಚಿಂತಿಸಬೇಕಿಲ್ಲ ಎಂದು ಪ್ರಕಟಣೆ ಸ್ಪಷ್ಟ ಪಡಿಸಿದೆ.

# ರೇವ್ ಪಾರ್ಟಿ: ಫಾರ್ಮ್‌ಹೌಸ್ ಮಾಲೀಕನ ವಿರುದ್ಧದ ಪ್ರಕರಣ ರದ್ದು



**ಬೆಂಗಳೂರು, ಸೆ. 06 :** ನಗರದ ಹೊರವಲಯದ ಹೆಬ್ಬಗೋಡಿ ಸಮೀಪದ ಸಿಂಗೇನ ಅಗ್ರಹಾರದ ಜಿ.ಆರ್.ಫಾರ್ಮ್ ಹೌಸ್‌ನಲ್ಲಿ ಕಳೆದ ಮೇ ತಿಂಗಳಲ್ಲಿ ನಡೆದ ರೇವ್ ಪಾರ್ಟಿ ಪ್ರಕರಣದ ಸಂಬಂಧ ಫಾರ್ಮ್ ಹೌಸ್ ಬಾಡಿಗೆ ನೀಡಿದ್ದ ವ್ಯಕ್ತಿಯ ವಿರುದ್ಧದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ. ಪ್ರಕರಣ ರದ್ದು ಕೋರಿ ಸಿಂಗೇನ ಅಗ್ರಹಾರದ 68 ವರ್ಷದ ಆರ್.ಗೋಪಾಲ್ ರೆಡ್ಡಿ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಆದೇಶ ಮಾಡಿದೆ. ಅರ್ಜಿದಾರರು ಜಾಗವನ್ನು ಬಾಡಿಗೆಗೆ ನೀಡಿದ್ದಾರೆಂದ ಮಾತ್ರಕ್ಕೆ ಅವರಿಗೆ ಬಾಡಿಗೆ ಜಾಗದಲ್ಲಿ ನಡೆಯುತ್ತಿದ್ದ ಮಾದಕ ದ್ರವ್ಯ ಸೇವನೆ ಚಟುವಟಿಕೆಗಳ ಬಗ್ಗೆ ಸಂಪೂರ್ಣ ಅರಿವಿದೆ ಎಂದರ್ಥವಲ್ಲ, ಅದಕ್ಕಾಗಿ ಅವರನ್ನು ಮಾದಕ ದ್ರವ್ಯ ನಿಗ್ರಹ ಕಾಯ್ದೆ (ಎನ್‌ಡಿಪಿಎಸ್) ಅಡಿ ಹೊಣೆಗಾರರನ್ನಾಗಿ ಮಾಡಲಾಗದು. ಫಾರ್ಮ್‌ಹೌಸ್‌ನಲ್ಲಿ ನಡೆಯುತ್ತಿದ್ದ ಹುಟ್ಟು ಹಬ್ಬದ ಪಾರ್ಟಿಗಳಲ್ಲಿ ಅಕ್ರಮ ಚಟುವಟಿಕೆಗಳು ನಡೆಯುತ್ತಿ ರುವುದು ಅರ್ಜಿದಾರರಿಗೆ ತಿಳಿದಿದೆ ಎಂಬುದನ್ನು ಸಾಬೀತುಪಡಿಸಲು ಮೇಲ್ನೋಟಕ್ಕೆ ಯಾವುದೇ ಸಾಕ್ಷ್ಯಗಳಿಲ್ಲ. ಹಾಗಾಗಿ, ಕೃತ್ಯದಲ್ಲಿ ಕೃತ್ಯಕ್ಕೆ ಅವರ ಪಾತ್ರವಿದೆ ಎಂದು ಹೇಳಲಾಗದು ಎಂದು ಆದೇಶಿಸಿದೆ.

ಅರ್ಜಿದಾರರ ಪರ ವಕೀಲರು, ಅರ್ಜಿದಾರರು ಆ ಜಾಗವನ್ನು ಬಾಡಿಗೆ ನೀಡಿ ಬೇರೆಡೆ ನೆಲೆಸಿದ್ದಾರೆ. ಅವರಿಗೆ ಆ ಜಾಗದಲ್ಲಿ ಯಾವ ಚಟುವಟಿಕೆಗಳು ನಡೆಯುತ್ತಿವೆ ಎಂಬ ಬಗ್ಗೆ ಅರಿವಿಲ್ಲ. ಜಾಗವನ್ನು ನೋಡಿಕೊಳ್ಳಲು ಮ್ಯಾನೇಜರ್ ಇದ್ದು, ಅವರೇ ಅದರ ನಿರ್ವಹಣೆ ಉಸ್ತುವಾರಿ ಹೊತ್ತಿದ್ದಾರೆ. 68 ವರ್ಷದ ಅವರ ಮೇಲೆ ಪ್ರಕರಣ ದಾಖಲಾಗಿದ್ದು, ಅದನ್ನು ರದ್ದುಗೊಳಿಸ ಬೇಕು ಎಂದು ಕೋರಿದ್ದರು.ಏನಿದು ಪ್ರಕರಣ? 2024ರ ಮೇ 19ರಂದು ಖಚಿತ ಮಾಹಿತಿ ಆಧರಿಸಿ ಪೊಲೀಸರು ಹೆಬ್ಬಗೋಡಿ ಸಮೀಪದ ಸಿಂಗೇನ ಅಗ್ರಹಾರದಲ್ಲಿನ ಜಿ.ಆರ್. ಫಾರ್ಮ್ ಮೇಲೆ ದಾಳಿ ಮಾಡಿದ್ದಾಗ ಅಲ್ಲಿ ಬರ್ತ್ಡೇ ಪಾರ್ಟಿಗಳ ಹೆಸರಿನಲ್ಲಿ ಮದ್ಯ, ಡ್ರಗ್ಸ್ ಸೇವಿಸುವ ರೇವ್ ಪಾರ್ಟಿಗಳು ನಡೆಯುತ್ತಿರುವುದು ಕಂಡು ಬಂದಿತ್ತು. ಅಲ್ಲಿ ಪಾರ್ಟಿಯಲ್ಲಿದ್ದವರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ್ದಾಗ ಅವರು ಮಾದಕ ದ್ರವ್ಯ ಸೇವನೆ ಮಾಡಿರುವುದು ದೃಢ ಪಟ್ಟಿತ್ತು. ಫಾರ್ಮ್‌ಹೌಸ್ ಬಾಡಿಗೆ ನೀಡಿದ್ದ ಆರ್. ಗೋಪಾಲ ರೆಡ್ಡಿಯನ್ನು ಆರನೇ ಆರೋಪಿಯನ್ನಾಗಿ ಮಾಡಲಾಗಿತ್ತು. ಅರ್ಜಿದಾರರು ಅದನ್ನು ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋಗಿದ್ದರು.

# ಸುಪ್ರೀಂ ಕೋರ್ಟ್‌ನಲ್ಲಿ ಕೇಂದ್ರದ ಅನ್ಯಾಯ ಪ್ರಶ್ನಿಸಲು ಕರ್ನಾಟಕ ಚಿಂತನೆ: ಎಚ್.ಕೆ.ಪಾಟೀಲ್

**ಹುಬ್ಬಳ್ಳಿ, ಸೆ. 6:** ಮಹದಾಯಿ ಯೋಜನೆ ಜಾರಿ ಕುರಿತಂತೆ ರಾಜ್ಯ ಸಚಿವ ಸಂಪುಟದಲ್ಲಿ ವನ್ಯಜೀವಿ ಮಂಡಳಿ ತಿರಸ್ಕಾರ ಮಾಡಿದೆ. ಈ ಹಿನ್ನೆಲೆಯಲ್ಲಿ ಸರ್ವಪಕ್ಷ ನಿಯೋಗ ಪ್ರಧಾನಿ ಬಳಿ ಕರೆದೊಯ್ಯಲು ಸರ್ಕಾರ ತೀರ್ಮಾನಿಸಿದೆ. ಕೇಂದ್ರ ಸರ್ಕಾರ ಅನ್ಯಾಯ ಮಾಡಿದೆ. ನಾವು ಸುಪ್ರೀಂ ಕೋರ್ಟ್ ಮೆಟ್ಟಲು ಹತ್ತುತ್ತೇವೆ ಎಂದು ಕಾನೂನು ಸಂಸದೀಯ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರೊಂದಿಗೆ ಜೊತೆಗೆ ಮಾತನಾಡಿದ ಅವರು, ಮಹದಾಯಿ ಯೋಜನೆ ಜಾರಿಯಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಅನ್ಯಾಯ ಮಾಡುತ್ತಿದೆ. ಉತ್ತರ ಕರ್ನಾಟಕದ ಪ್ರಮುಖ ನದಿ ನೀರು ಯೋಜನೆ ಜಾರಿಯನ್ನು ವನ್ಯಜೀವಿ ಮಂಡಳಿ ತಿರಸ್ಕಾರ ಮಾಡಿದೆ.

ಇದೇ ವಿಚಾರವಾಗಿ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ಕುರಿತು ಸಚಿವ ಸಂಪುಟದಲ್ಲಿ ಸುದೀರ್ಘವಾದ ಚರ್ಚಿಸಲಾಗಿದೆ. ಮಹದಾಯಿ ಯೋಜನೆಗೆ ಭಾರೀ ಹಿನ್ನಡೆ ಆಗಿದ್ದು. ಕೇಂದ್ರ ಸರ್ಕಾರದ ವನ್ಯ ಜೀವಿ ಮಂಡಳಿ ಮುಂದೆ ಸಹ ಹಾಕುವ ಮೂಲಕ ಕರ್ನಾಟಕಕ್ಕೆ ಮಾಡಿದ ದೊಡ್ಡ ಅನ್ಯಾಯ ಆಗಿದೆ.



ಈ ಹಿಂದೆಯೇ ಅರಣ್ಯ ಇಲಾಖೆಯ ಅವರು ಈಗಾಗಲೇ ಅನುಮತಿ ಕೊಡಲು ಸಿದ್ಧರಿದ್ದರು. ಆದರೆ ಕೇಂದ್ರ ಸರ್ಕಾರದವರು 10 ವರ್ಷಗಳಿಂದ ಸರಿಯಾಗಿ ನಡೆದುಕೊಂಡಿಲ್ಲ. ಚುನಾವಣೆಗೆ ಬಂದಾಗಲೇ ಎಲ್ಲ ಕೇಂದ್ರದಲ್ಲಿ ಆಡಳಿತ ಪಕ್ಷದ ನಾಯಕರು ಯೋಜನೆಗೆ ಅನುಮತಿ ಕೊಡಿಸುತ್ತೇವೆ ಯಾವುದೇ ಕಾರಣಕ್ಕೂ ಬಿಡಲ್ಲ. ಅನುಮತಿ ಸಿಗುತ್ತದೆ ಎಂಬ ಭರವಸೆ ಕೊಡುತ್ತಲೇ ಬಂದಿದ್ದಾರೆ.

ಗೋವಾದ್ದು 4000 ಕೆವಿ ವಿದ್ಯುತ್ ಲೈನ್ ಎಳೆಯಲು 435 ಎಕರೆ ಭೂಮಿಯನ್ನ ಚಿಟಿಕೆ ಹೊಡೆಯುವುದರೊಳಾಗಿ ಕ್ಲೀಯರ್ ಮಾಡಲು ಬಿಜೆಪಿ ಕೇಂದ್ರದ ಸಚಿವರು ಪತ್ರ ಬರೆಯುತ್ತಾರೆ. ತ್ವರಿತವಾಗಿ ಬೇರೆ ರಾಜ್ಯಗಳ ಕೆಲಸಗಳು ನಿಮ್ಮಂದ ಆಗುವಾಗ, ಕರ್ನಾಟಕ ಕೆಲಸಕ್ಕೆ ತಾತ್ಸಾರ ಏಕೆ ಎಂದು ಅವರು ಪ್ರಶ್ನಿಸಿದರು.

ಇದುವರೆಗೆ ಮಹದಾಯಿ ಯೋಜನೆಗೆ ಸಂಬಂಧಿಸಿದಂತೆ ಕಾನೂನು ತೊಡಕು ನಿವಾರಣೆ ಆಗಿದ್ದು, ನ್ಯಾಯಾಧೀಕರಣದಲ್ಲಿ ತೀರ್ಮಾನ ಸಹ ಆಯಿತು. ಮೊದಲು ಅಂತರ ರಾಜ್ಯ ವಿವಾದ ಬಗೆಹರಿಸಲಿ ಎಂದೆವು, ಆದರೆ ಈಗ ಏನಾಯಿತು? ಮತ್ತೇ ಅನ್ಯಾಯ ಮಾಡಲಾಗಿದೆ ಎಂದು ಅವರು ದೂರಿದರು.

ಮಹದಾಯಿ ವಿಚಾರದಲ್ಲಿ ಕರ್ನಾಟಕಕ್ಕೆ ಆದ ಅನ್ಯಾಯವನ್ನು ಸಹಿಸುವುದಿಲ್ಲ. ಈಗ ತಕ್ಷಣ ನಮ್ಮ ಮುಖ್ಯಮಂತ್ರಿಗಳು ಸರ್ವ ಪಕ್ಷಗಳ ಸಭೆ ಕರೆಯುತ್ತಾರೆ. ಸಭೆಯಲ್ಲಿ ಹೋರಾಟದ ಬಗ್ಗೆ ಚರ್ಚೆ ನಡೆಸಲಾಗುವುದು. ನಂತರ ಪ್ರಧಾನಿ ನರೇಂದ್ರ ಮೋದಿ ಬಳಿ ಸರ್ವ ಪಕ್ಷಗಳ ನಿಯೋಗ ತೆಗೆದುಕೊಂಡು ಹೋಗಲಾಗುವುದು.

ಇದರ ಜೊತೆಗೆ ಸುಪ್ರೀಂ ಕೋರ್ಟ್ ಕಟ್ಟೆ ಹತ್ತಿ ಹತ್ತಬೇಕು ಎನ್ನುವ ಕಾರಣದಿಂದಾಗಿ ನಿರ್ಧಾರ ಆಗಿದೆ ಕಾನೂನು ತಜ್ಞರ ಜೊತೆಗೆ ಚರ್ಚೆ ಮಾಡಲಾಗುವುದು ಎಂದರು. ಇನ್ನು ಕೋವೀಡ್‌ನಲ್ಲಿ ಆದ ಹಗರಣ ಕುರಿತು ಮೈಕಲ್ ಖುನ್ನಾ ವರದಿ ಅಧ್ಯಯನಕ್ಕಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಅತೀಖ್ ನೇತೃತ್ವದ ಸಮಿತಿ ರಚನೆ ಸಹ ಮಾಡಲಾಗುವುದು.

ಸಮಿತಿ ವರದಿ ನಂತರ ಕ್ರಮ ಕೈಗೊಳ್ಳಲಾಗುತ್ತದೆ ಎಂದರು. ರಾಜ್ಯಪಾಲರು ಒಟ್ಟು 11 ಬಿಲ್ ವಾಪಸು ಕಳುಹಿಸಿದ್ದರು ಇದರಲ್ಲಿ ಬಲ್‌ಗಳಲ್ಲಿ ಒಪ್ಪಿಗೆ ಪಡೆಯಬೇಕಾಗಿತ್ತು. ಕೇಲವು ಮಾಹಿತಿ ಕೋರಲಾಗಿತ್ತು. ಕೇಲವು ತಾಂತ್ರಿಕ ಸಮಸ್ಯೆ ಇದ್ದವು ಈಗಾಗಲೇ 5 ಬಿಲ್‌ಗಳನ್ನ ಮತ್ತೇ ಮರಳಿ ಮಂಡನೆ ಮಾಡಲಾಗಿದೆ.

ಇನ್ನು ಆರು ಬಿಲ್ ಗಳಿಗೆ ರಾಜ್ಯಪಾಲರು ಕೇಳಿದ ಮಾಹಿತಿ ಸಂಗ್ರಹ ಮಾಡಲಾಗುವುದು. ಈ ವಾರಾಂತ್ಯದಲ್ಲಿ ಎಲ್ಲ ಬಿಲ್‌ಗಳನ್ನ ಕಳುಹಿಸಲಾಗುವುದು. ಕಾನೂನು ತಜ್ಞರ ಸಲಹೆ ಪಡೆದುಕೊಂಡು ಈ ವಿಚಾರವನ್ನು ಸುಪ್ರೀಂ ಕೊರ್ಟ್‌ಗೆ ಹಾಕಲಾಗುವುದು ಎಂದು ಅವರು ರಾಜ್ಯ ಸರ್ಕಾರದ ಮುಂದಿನ ನಡೆ ಬಗ್ಗೆ ತಿಳಿಸಿದರು.

# ಮುಂದಿನ ಸಚಿವ ಸಂಪುಟ ಸಭೆ ಕಲಬುರಗಿಯಲ್ಲಿ: ಖರ್ಗೆ

**ಕಲಬುರಗಿ, ಸೆ. 6:** ಮುಂದಿನ ಸಚಿವ ಸಂಪುಟ ಸಭೆಯನ್ನು ಕಲಬುರಗಿಯಲ್ಲಿ ನಡೆಸಲು ರಾಜ್ಯ ಸರ್ಕಾರ ತೀರ್ಮಾನಸಿದೆ. ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಇತರೆ ಸಚಿವರು ಸಹ ಒಪ್ಪಿಗೆ ಸೂಚಿಸಿದ್ದು, ಕಲ್ಯಾಣ ಕರ್ನಾಟಕ ಭಾಗದ ವಿಷಯಗಳ ಕುರಿತು ಚರ್ಚಿಸಲು ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ. ಆದರೆ ದಿನಾಂಕ್ ಇನ್ನೂ ನಿರ್ಧಾರವಾಗಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಮಾಧ್ಯಮಗಳಿಗೆ ತಿಳಿಸಿದರು.

ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಹಾಗೂ ಕೈಗೊಳ್ಳಬೇಕಿರುವ ಜನಪರ ಕೆಲಸಗಳ ಕುರಿತು ಸಮಗ್ರ ಚರ್ಚೆ ನಡೆಸಲು ಮುಂದಿನ ಸಚಿವ ಸಂಪುಟ ಸಭೆಯನ್ನು ಕಲಬುರಗಿ ಯಲ್ಲಿ ನಡೆಸಲು ಮುಖ್ಯಮಂತ್ರಿ ಗಳಾದ ಸಿದ್ದರಾಮಯ್ಯ ಹಾಗೂ ಸಂಪುಟದ ಎಲ್ಲ ಸಚಿವರು ಒಪ್ಪಿದ್ದಾರೆ ಎಂದು ತಿಳಿಸಿದ್ದಾರೆ.

ಈ ಭಾಗದ ಜನರ ಆಶೋತ್ತರಗಳಿಗೆ ಸ್ಪಂದಿಸುವ ಉದ್ದೇಶದಿಂದ ಸಿಎಂ ಅವರಿಗೆ ಕಲಬುರಗಿ ಯಲ್ಲಿ ಸಚಿವ ಸಂಪುಟ ಸಭೆ ನಡೆಸಲು ಮನವಿ ಮಾಡಲಾಗಿತ್ತು. ಈ ಹಿನ್ನೆಲೆಯಲ್ಲಿ ಸಿಎಂ ಹಾಗೂ ಸಚಿವರು ಸಭೆ ನಡೆಸಲು ಒಪ್ಪಿಗೆ ಸೂಚಿಸಿದ್ದು ಸಭೆಯ ದಿನಾಂಕ ಸಧ್ಯದಲ್ಲೇ ನಿಗದಿಪಡಿಸಲಾಗುವುದು ಎಂದು ಸಚಿವರು ಹೇಳಿದ್ದಾರೆ.



ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ದಿಗಾಗಿ ಸಂವಿಧಾನ ಕಲಂ 371 ಕ್ಕೆ ತಿದ್ದುಪಡಿ ತಂದು ಜೆ ಸೇರಿಸಿ ಶಿಕ್ಷಣ, ಉದ್ಯೋಗ ಹಾಗೂ ಅನುದಾನ ಒದಗಿಸಿಕೊಡುವುದಕ್ಕೆ ವಿಶೇಷ ಸ್ಥಾನಮಾನ ಜಾರಿಗೆ ಬಂದು ದಶಕಗಳು ಕಳೆದಿರುವ ಈ ಸಂದರ್ಭದಲ್ಲಿ ಕಲಬುರಗಿಯಲ್ಲಿ ಸಚಿವ ಸಂಪುಟ ಸಭೆ ನಡೆಸಿ ಈ ಭಾಗದ ಅಭಿವೃದ್ದಿಗೆ ಸಹಕಾರಿಯಾಗುವಂತ ಯೋಜನೆಗಳನ್ನು ಜಾರಿಗೊಳಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರದ ಇಡೀ ಸಚಿವ ಸಂಪುಟ ಕಲಬುರಗಿಗೆ ಆಗಮಿಸುತ್ತಿರುವುದು ಹರ್ಷ ತಂದಿದೆ. ನನ್ನ ಮನವಿಗೆ ಓಗೊಟ್ಟು ಸಭೆ ನಡೆಸಲು ಒಪ್ಪಿರುವ ಮುಖ್ಯಮಂತ್ರಿಗಳಿಗೆ ವೈಯಕ್ತಿಕವಾಗಿ ನನ್ನ,ನಮ್ಮ ಭಾಗದ ಎಲ್ಲ ಶಾಸಕರ ಹಾಗೂ ಈ ಭಾಗದ ಎಲ್ಲ ಜನರ ಪರವಾಗಿ ಧನ್ಯವಾದಗಳನ್ನು ಅರ್ಪಿಸುತ್ತಿದ್ದೇನೆ.

ಈ ಹಿಂದೆಯೂ ಹಲವು ಬಾರಿ ಕಲಬುರಗಿಯಲ್ಲಿ ಸಚಿವ ಸಂಪುಟ ಸಭೆಯನ್ನು ಮಾಡಲಾಗಿದೆ. 2008 ರಿಂದ 2013ರ ತನಕ 5 ಬಾರಿ ಕಲಬುರಗಿಯಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆದಿತ್ತು. ಅಲ್ಲದೇ 2014 ಮತ್ತು 2021ರಲ್ಲೂ ಸಹ ಕಲಬುರಗಿಯಲ್ಲಿ ಸಚಿವ ಸಂಪುಟ ಸಭೆ ನಡೆದಿತ್ತು. ಇದೀಗ ಮತ್ತೆ ಸಿಎಂ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ ನಡೆದಿದ್ದು, ಈ ಭಾಗದ ಜನರಲ್ಲಿ ಹೆಚ್ಚಿನ ನಿರೀಕ್ಷೆಗಳು ಗರಿಗೆದರಿವೆ.



ಹಬ್ಬದ ಪ್ರಯುಕ್ತ ಶುಕ್ರವಾರ ಕೋಲಾರ ಜಿಲ್ಲೆಯ ಕೆಜಿಎಫ್‌ನಲ್ಲಿ ಪೊಲೀಸರು ಪಥಸಂಚಲನ ನಡೆಸಿದರು.

# ಮಳೆಹಾನಿಗೆ ಸರ್ಕಾರದಿಂದ ಪರಿಹಾರ: ಸಚಿವ ಖಂಡ್ರೆ

**ಬೀದರ್, ಸೆ. 6:** ಜಿಲ್ಲೆಯಲ್ಲಿ ಭಾರಿ ಮಳೆಯಿಂದಾಗಿ ರೈತರ ಬೆಳೆ ಆಸ್ತಿಆಸ್ತಿಗಳು ಹಾನಿಯಾಗಿದ್ದು, ಇದಕ್ಕೆ ಸರ್ಕಾರದಿಂದ ನಿಯಮಾನುಸಾರ ಪರಿಹಾರ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಮಳೆಯಿಂದ ಹಾನಿಗೊಳಗಾದ ತಾಲ್ಲೂಕಿನ ಚಿಮಕೋಡ, ಮಾಳೆಗಾಂವ ಹಾಗೂ ಹಮೀಲಾಪುರ ಗ್ರಾಮದ ಹೊಲಗಳ ಬೆಳೆ ಹಾಗೂ ಮನೆಗಳನ್ನು ವೀಕ್ಷಿಸಿದ ನಂತರ ಮಾತನಾಡಿದ ಅವರು, ನಮ್ಮ ದೇಶದ ಬೆನ್ನೆಲಬು ರೈತ ಅನ್ನದಾತನಾಗಿದ್ದಾರೆ. ಅವರ ಸಂಕಷ್ಟದಲ್ಲಿ ನಾವಿದ್ದೇವೆ. ಮಾಂಜ್ರಾ ನದಿಯ ದಡದಲ್ಲಿರುವ ಚಿಮಕೋಡ ಗ್ರಾಮದ ರೈತರ ಜಮೀನುಗಳು ಪ್ರವಾಹದ ಸಂದರ್ಭದಲ್ಲಿ ಪದೇ ಪದೇ ಹಾನಿಗೊಳಗಾಗುತ್ತವೆ. ಇದಕ್ಕೆ ಶಾಶ್ವತ ಪರಿಹಾರ ನೀಡುವ ಕೆಲಸ ಮಾಡಬೇಕಿದೆ ಎಂದು ಹೇಳಿದರು.



ಮಳೆಯಿಂದ ಹಾನಿಯಾದ ಜಮೀನು ಹಾಗೂ ಮನೆಗಳಿಗೆ ಸರ್ಕಾರದ ಎನ್.ಡಿ.ಆರ್.ಎಫ್ ಹಾಗೂ ಎಸ್.ಡಿ.ಆರ್.ಎಫ್ ನಿಯಮಗಳ ಪ್ರಕಾರ ಪರಿಹಾರ ನೀಡಲಾಗುವುದು. ಜಿಲ್ಲಾಡಳಿತಕ್ಕೆ ಹಾನಿಯ ಮಾಹಿತಿ ಸಂಗ್ರಹಿಸಿ ಸರ್ಕಾರದ ಮಾನದಂಡಗಳ ಪ್ರಕಾರ ಪರಿಹಾರ ನೀಡಲು ಸೂಚಿಸಿದ್ದೇನೆ ಎಂದು ಹೇಳಿದರು.

ಚಿಮಕೋಡ ಗ್ರಾಮದ ಮಾರುತಿ ತುಕಾರಾಂ ಜಮೀನಿನಲ್ಲಿರುವ ಸೋಯಾ, ತೊಗರಿ, ಹೆಸರು ಬೆಳೆಗಳು ಹಾಗೂ ಗೌರಮ್ಮ ಝುರೆಪ್ಪಾ ಜಮೀನಿನಲ್ಲಿರುವ ತೊಗರಿ, ಸೋಯಾ ಮತ್ತು ನರಸಪ್ಪ ಟೊಳ್ಳಿ ಇವರ ಜಮೀನಿನಲ್ಲಿರುವ ಸೋಯಾ ಮತ್ತು ತೊಗರಿ ಬೆಳೆಗಳು ಮಳೆಯಿಂದ ಹಾನಿಯಾದ ಜಮೀನುಗಳನ್ನು ವೀಕ್ಷಿಸಿದ ಸಚಿವರು ಹಾನಿಯ ನಿಖರ ಮಾಹಿತಿ ಸಂಗ್ರಹಿಸಿ ಅವರಿಗೆ ಆದಷ್ಟು ಬೇಗನೆ ಪರಿಹಾರ ನೀಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹಮೀಲಾಪುರ ಗ್ರಾಮದಲ್ಲಿ ಮಳೆಯಿಂದ ಹಾನಿಯಾದ ಮನೆಗಳ ವೀಕ್ಷಣೆಯ ನಂತರ ಪರಿಹಾರ ಮಂಜೂರಾತಿ ಆದೇಶ ಪ್ರತಿಗಳನ್ನು ಫಲಾನುಭವಿಗಳಿಗೆ ನೀಡಿ. ಮನೆ ಇಲ್ಲದವರಿಗೆ ಶಾಶ್ವತ ಮನೆಗಳನ್ನು ಒದಗಿಸುವ ಕೆಲಸ ಮಾಡಲಾಗುವುದು ಹಾಗೂ ಮನೆಗಳ ಹಾನಿಗೆ ತಕ್ಕಂತೆ ಪರಿಹಾರ ನೀಡುವಂತೆ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಬೀದರ್ ಸಹಾಯಕ ಆಯುಕ್ತರಾದ ಸುರೇಖಾ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಜಿಯಾವುಲ್ಲಾ ಕೆ. ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# 2ಎ ಮೀಸಲಾತಿಗೆ ಆಗ್ರಹ, ಕಾನೂನು ಹೋರಾಟದ ವೇದಿಕೆ ಸಿದ್ಧ: ಕೂಡಲಸಂಗಮ ಶ್ರೀ

**ಬೆಳಗಾವಿ, ಸೆ. 6 :** 22 ರಂದು ಬೆಳಗಾವಿಯಲ್ಲಿ ಬೃಹತ್ ಪಂಚಮಸಾಲಿ ಲಿಂಗಾಯತ ವಕೀಲರ ಸಮಾವೇಶ ಆಯೋಜಿಸಲಾಗಿದ್ದು, ಆ ಮೂಲಕ ಪಂಚಮಸಾಲಿ ಲಿಂಗಾಯತ ಸಮಾಜಕ್ಕೆ 2ಎ ಮೀಸಲಾತಿಗೆ ಕಾನೂನು ಮಾಡಲಿದ್ದೇವೆ ಎಂದು ಕೂಡಲಸಂಗಮದ ಶ್ರೀ ಬಸವ ಜಯ ಮೃತುಂಜ್ಯಯ ಸ್ವಾಮೀಜಿ ತಿಳಿಸಿದರು.

ಚಿಕ್ಕೋಡಿಯಲ್ಲಿ ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿ, ಈ ಹಿಂದಿನ ಸಿಎಂ ಬಸವರಾಜ ಬೊಮ್ಮಾಯಿ ಅವರು ಲಿಂಗಾಯತ ಪಂಚಮಸಾಲಿ ಸಮಾಜಕ್ಕೆ 2ಎ



ಮೀಸಲಾತಿಗಾಗಿ ಸ್ಪಂದಿಸಿದಷ್ಟು ಸಿಎಂ ಸಿದ್ದರಾಮಯ್ಯ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದ ಅವರು, ಅಧಿಕಾರ ಇದ್ದರೂ, ಇಲ್ಲದಿದ್ದಾಗಲೂ ಮೀಸಲಾತಿಯ ನಮ್ಮ ಹೋರಾಟಕ್ಕೆ ಕನಿಷ್ಠ ಸಮುದಾಯದ ರಾಜಕಾರಣಿಗಳು ಬೆಂಬಲು ಕೊಡಬೇಕು ಎಂದರು.

ರಾಜ್ಯದಲ್ಲಿ 20 ಮಂದಿ ಲಿಂಗಾಯತ ಪಂಚಮಸಾಲಿ ಸಮುದಾಯದ ಶಾಸಕರಿದ್ದು, ಮೀಸಲಾತಿ ಬಗ್ಗೆ ಕೂಗನ್ನು ಸರ್ಕಾರಕ್ಕೆ ಮುಟ್ಟಿಸುತ್ತಿಲ್ಲ. ಹೀಗಾಗಿ ನಾವೇ ಕಾನೂನು ಹೋರಾಟ ಮಾಡುವುದು ಅನಿವಾರ್ಯ ಎಂದು ಸ್ವಾಮೀಜಿ ಅವರು ಈ ಹಿಂದೆ ಹಲವು ಬಾರಿ ಉಲ್ಲೇಖಿಸಿ ಆಕ್ರೋಶ ಹೊರ ಹಾಕಿದ್ದರು.

ಹೀಗಾಗಿ ಕಾನೂನು ಮೂಲಕ ಒತ್ತಡ ಹಾಕಲು ಇಡೀ ಉತ್ತರ ಕರ್ನಾಟಕದ ವಕೀಲರನ್ನು ಒಳಗೊಂಡು ಬೃಹತ್ ಸಮ್ಮೇಳನ ಮಾಡಲು ನಿರ್ಧರಿಸಿರುವುದಾಗಿ ಹೇಳಿದರು.

## ಶಾಲಾ ವಾಹನ ಅಪಘಾತ: ವಿದ್ಯಾರ್ಥಿಗಳ ಸಾವು

# ಶಿಕ್ಷಕರ ದಿನಾಚರಣೆ ರದ್ದು-ಮೃತ ಮಕ್ಕಳಿಗೆ ಶ್ರದ್ಧಾಂಜಲಿ

**ರಾಯಚೂರು, ಸೆ. 6:** ಜಿಲ್ಲೆಯ ಮಾನ್ವಿಯ ಕಪಗಲ್ ಸಮೀಪದ ಬಳಿ ಶಾಲಾ ವಾಹನ-ಬಸ್ ನಡುವೆ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಇಬ್ಬರು ವಿದ್ಯಾರ್ಥಿಗಳು ಸಾವನ್ನಪ್ಪಿದ ಘಟನೆ ನಡೆದ ಹಿನ್ನೆಲೆಯಲ್ಲಿ ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಆಯೋಜಿಸಿದ್ದ ಜಿಲ್ಲಾಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ರದ್ದುಗೊಳಿಸಲಾಯಿತು.

ಪೂರ್ವ ನಿಗಧಿಯಂತೆ ಕಾರ್ಯಕ್ರಮಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ವಿವಿಧ ತಾಲ್ಲೂಕುಗಳಿಂದ ಶಿಕ್ಷಕರು ಆಗಮಿಸಿದ್ದರು. ನಂತರ ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಮೃತ ವಿದ್ಯಾರ್ಥಿಗಳ ಆತ್ಮಕ್ಕೆ ಶಾಂತಿ ಕೋರಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸಾಂಕೇತಿಕವಾಗಿ ರಾಧಕೃಷ್ಣನ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಕಾ ಂ ು ್ ರ್ ಕ್ರ ವ್ ು ವ್ ನ್ ು್ನ ಮುಕ್ತಾಯಗೊಳಿಸಲಾಯಿತು.

ವಿಧಾನ ಪರಿಷತ್ ಸದಸ್ಯ





ಶಶೀಲ್ ನಮೋಶಿ ಅವರು ಈಚೆಗೆ ನಿಧನರಾದ ಸಂಗೀತ ಶಿಕ್ಷಕ ಲಕ್ಷ್ಮೀರೆಡ್ಡಿ ಹೊಸೂರು ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು. ಅಪಘಾತದಲ್ಲಿ ಸಾವನ್ನಪಿದ ವಿದ್ಯಾರ್ಥಿಗಳ ಆತ್ಮಕ್ಕೆ ಶಾಂತಿ ಕೋರಿ ಮೌನಾಚರಣೆ ನಡೆಸಿ ಶ್ರದ್ಧಾಂಜಲಿ ಸಲ್ಲಿಸಿದರು.

ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಜಿಲ್ಲಾ ಉಪ ನಿರ್ದೇಶಕ ಕೆ.ಡಿ ಬಡಿಗೇರ ಮಾತನಾಡಿದ ಅವರು, ಮಕ್ಕಳು ಮತ್ತು ಪೋಷಕರು ದುಃಖದಲ್ಲಿರುವ ಸಂದರ್ಭದಲ್ಲಿ ಜಿಲ್ಲಾಮಟ್ಟದ ಶಿಕ್ಷಕರ ದಿನಾಚರಣೆ ಮಾಡುವುದು ಸೂಕ್ತವಲ್ಲ. ಈ ಹಿನ್ನೆಲೆಯಲ್ಲಿ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ರದ್ದುಪಡಿಸಲಾಗಿದೆ. ಆಯಾ ತಾಲ್ಲೂಕಿನಲ್ಲಿ ನಡೆಯುವ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ತಾಲ್ಲೂಕವಾರು ಶಿಕ್ಷಕರ ಪ್ರಶಸ್ತಿ ನೀಡಬಹುದಾಗಿದೆ ಎಂದು ಹೇಳಿದರು.

**ಪರಿಹಾರಕ್ಕೆ ಪ್ರತಿಭಟನೆ :** ಮಾನ್ವಿ ತಾಲ್ಲೂಕಿನ ಕಪಗಲ್ ಗ್ರಾಮದ ಬಳಿ ಗುರುವಾರ ಸಾರಿಗೆ ಸಂಸ್ಥೆ ಬಸ್ ಮತ್ತು ಲೊಯೊಲಾ ಶಾಲಾ ಬಸ್ ನಡುವೆ ನಡೆದ ಭೀಕರ ಅಪಘಾತದಲ್ಲಿ ಮೃತಪಟ್ಟವಯಿರಿಗೆ ಪರಿಹಾರ ನೀಡುವಂತೆ ಕಪಗಲ್ ಕ್ರಾಸ್ ಬಳಿ ಜನಸೇವಾ ಫೌಂಡೇಷನ್ ರಾಜ್ಯಾಧ್ಯಕ್ಷ ಜಾವಿದಖಾನ್ ನೇತೃತ್ವದಲ್ಲಿ ರಸ್ತೆತಡೆ ನಡೆಸಿ ಪ್ರತಿಭಟಿಸಲಾಯಿತು.

ಸಾರಿಗೆ ಬಸ್ ಮತ್ತು ಶಾಲಾ ವಾಹನ ನಡುವೆ ಸಂಭವಿಸಿದ ಅಪಘಾತದಲ್ಲಿ ಇಬ್ಬರು ವಿದ್ಯಾರ್ಥಿಗಳು ಸಾವನ್ನಪ್ಪಿದ್ದು, ಭೀಕರ ಅಪಘಾತದಲ್ಲಿ ಮೂವರು ವಿದ್ಯಾರ್ಥಿಗಳು ಕೈ, ಕಾಲು ಛಿದ್ರಗೊಂಡಿವೆ ಹಾಗೂ ಬಸ್ಸಿನಲ್ಲಿದ್ದ ಅನೇಕ ಪ್ರಯಾಣಿಕರು ಗಾಯಗೊಂಡಿರುವುದಕ್ಕೆ ಹದಗೆಟ್ಟ ರಸ್ತೆ ಮತ್ತು ಲೋಕೋಪಯೋಗಿ ಇಲಾಖೆ, ಕೆಆರ್‌ಡಿಎಲ್ ಅಧಿಕಾರಿಗಳ ನಿರ್ಲಕ್ಷ್ಯ ಕಾರಣವಾಗಿದೆ. ಈ ಕೂಡಲೇ ತಪ್ಪಿತಸ್ಥ ಅಧಿಕಾರಿಗಳನ್ನು ಅಮಾನತ್ತು ಮಾಡಬೇಕು. ಮೃತ ವಿದ್ಯಾರ್ಥಿಗಳ, ಗಾಯಗೊಂಡಿರುವ ವಿದ್ಯಾರ್ಥಿಗಳ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

**ಮುತ್ತಿಗೆ ಎಚ್ಚರಿಕೆ:** ಕಪಗಲ್ ಬಳಿ ನಡೆದ ರಸ್ತೆ ಅಪಘಾತಕ್ಕೆ ಲೊಯೊಲಾ ಶಾಲೆಯ ಆಡಳಿತ ಮಂಡಳಿ ನೇರ ಹೊಣೆಗಾರರಾಗಿದ್ದು, ಒಂದು ವಾರದೊಳಗೆ ಮೃತ ವಿದ್ಯಾರ್ಥಿಗಳ ಕುಟುಂಬಕ್ಕೆ 25 ಲಕ್ಷ, ಗಾಯಗೊಂಡ ವಿದ್ಯಾರ್ಥಿಗಳ ಕುಟುಂಬಕ್ಕೆ 15 ಲಕ್ಷ ಪರಿಹಾರ ನೀಡಬೇಕು. ಇಲ್ಲದಿದ್ದರೆ ಲೊಯೊಲಾ ಶಾಲೆಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಎಂ.ವಿರೂಪಾಕ್ಷಿ ಎಚ್ಚರಿಕೆ ನೀಡಿದರು. ಡಿಸಿ ಕೆ.ನಿತೀಶ್ ಮಾತನಾಡಿ, ರಸ್ತೆ ಅಪಘಾತ ಸಂಭವಿಸಿದ ಸಂಪೂರ್ಣ ಮಾಹಿತಿ ಸಂಗ್ರಹಿಸಿ ರಸ್ತೆ ದುರಂತದಲ್ಲಿ ಮೃತಪಟ್ಟ ಕುಟುಂಬಕ್ಕೆ ಹಾಗೂ ಸಣ್ಣಪುಟ್ಟ ಗಾಯಗೊಂಡಿರುವ ಕುಟುಂಬಕ್ಕೆ ಪರಿಹಾರ ನೀಡುವಂತಹ ಕೆಲಸ ಮಾಡುತ್ತೇವೆ ಎಂದು ಭರವಸೆ ನೀಡಿದರು.

# 15 ರಂದು 58 ಕಿ,ಮೀ ಮಾನವ ಸರಪಳಿ, 60 ಸಾವಿರ ಜನ ಭಾಗಿ: ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ

**ಮೈಸೂರು, ಸೆ. 06 :** ಪ್ರಜಾಪ್ರಭುತ್ವಕ್ಕಾಗಿ ಕರ್ನಾಟಕದಲ್ಲಿ ಮಾನವ ಸರಪಳಿ ಎಂಬ ಧ್ಯೇಯ ವಾಕ್ಯದೊಂದಿಗೆ ಸೆ. 15 ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಈ ಸಂಬಂಧ ಜಿಲ್ಲೆಯಾದ್ಯಂತ 60 ಕಿ.ಮೀ. ಮಾನವ ಸರಪಳಿ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಇದಕ್ಕೆ ಜಿಲ್ಲೆಯ ಪ್ರತಿಯೊಬ್ಬ ಅಧಿಕಾರಿ ಹಾಗೂ ಸಾರ್ವಜನಿಕರು ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಜಿ. ಲಕ್ಷೀಕಾಂತ ರೆಡ್ಡಿ ಅವರು ಹೇಳಿದರು.



ನಗರದ ಜಿಲ್ಲಾ ಪಂಚಾಯಿತಿಯ ಸಭಾಂಗಣದಲ್ಲಿ ನಡೆದ ಪ್ರಜಾಪ್ರಭುತ್ವಕ್ಕಾಗಿ ಕರ್ನಾಟಕದಲ್ಲಿ ಮಾನವ ಸರಪಳಿ ಎಂಬ ಧ್ಯೇಯ ವಾಕ್ಯದೊಂದಿಗೆ ಅಂತರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆ ಆಚರಿಸುವ ಸಂಬಂಧ ಕಾರ್ಯಕ್ರಮಗಳ ರೂಪುರೇಷೆ ಕುರಿತಂತೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ಎಂಬುದು ಕೇವಲ ಅಧಿಕಾರಿಗಳದ್ದಲ್ಲ. ಇದು ಪ್ರತಿಯೊಬ್ಬ ವ್ಯಕ್ತಿಯದ್ದಾಗಿದೆ. ಇಂತಹ ಕಾರ್ಯಕ್ರಮಕ್ಕೆ ಸಾರ್ವಜನಿಕರು ಸ್ವಯಿಚ್ಛೆಯಿಂದ ಪಾಲ್ಗೊಂಡಾಗ ಮಾತ್ರವೇ ನಿರೀಕ್ಷಿಸಿದ ಪ್ರತಿಫಲ ದೊರೆತು, ಕಾರ್ಯಕ್ರಮ ಯಶಸ್ವಿಯಾಗಲು ಸಾಧ್ಯ. ಹಾಗಾಗಿ ಸರಪಳಿಯು ಏರ್ಪಡುವ ಸ್ಥಳಗಳಲ್ಲಿ ಜನರು ನಮ್ಮೊಂದಿಗೆ ಸಹಕರಿಸಬೇಕು ಎಂದರು.

ಕಾರ್ಯಕ್ರಮವು ಇದೇ 15ರಂದು ಬೆಳಗ್ಗೆ 8:30 ಗಂಟೆಯಿಂದ 9:30 ಗಂಟೆಯವರೆಗೆ ನಡೆಯಲಿದ್ದು, ಸರಪಳಿಯು ಸಿದ್ದಲಿಂಗಪುರದಿಂದ ಆರಂಭಗೊಳ್ಳುತ್ತದೆ. ಮುಂದುವರೆದಂತೆ ಅರಮನೆ ಮುಂಭಾಗದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಎದುರು ಇರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಮುಂದುವರೆಯುತ್ತದೆ. ಮಾನವ ಸರಪಳಿಯನ್ನು ನಿರ್ಮಾಣ ಮಾಡಲು ಸುಮಾರು 60 ಸಾವಿರಕ್ಕೂ ಹೆಚ್ಚಿನ ಜನರ ಅವಶ್ಯಕತೆ ಇದ್ದು, ಇದಕ್ಕೆ ಅಧಿಕಾರಿಗಳು, ಶಾಲಾ –ಕಾಲೇಜು ವಿದ್ಯಾರ್ಥಿಗಳು, ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳು, ಎನ್.ಸಿ.ಸಿ , ಎನ್. ಎಸ್.ಎಸ್, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು, ಪೌರ ಕಾರ್ಮಿಕರು, ಗ್ರಾಮ ಪಂಚಾಯಿತಿಯ ಸದಸ್ಯರು ಸೇರಿದಂತೆ ಸಾರ್ವಜನಿಕರು ಪಾಲ್ಗೊಂಡು ಸರಪಳಿಯು ಯಶಸ್ವಿ ಗೊಳ್ಳುವಂತೆ ನೋಡಿಕೊಳ್ಳಬೇಕು. ಇದಕ್ಕೆ ವಿದ್ಯಾಸಂಸ್ಥೆಗಳು, ಸಂಘ ಸಂಸ್ಥೆಗಳು ಹಾಗೂ ಇಲಾಖೆಗಳು ಸಹಕರಿಸಬೇಕು ಎಂದು ಹೇಳಿದರು. ಸರಪಳಿಯು ಆರಂಭವಾದ ಪ್ರತಿ 100 ಮೀಟರ್‌ಗೆ ಒಬ್ಬರು ಸೆಕ್ಷನ್ ಅಧಿಕಾರಿ, ಪ್ರತಿಯೊಂದು ಕಿಲೋಮೀಟರ್‌ಗೆ ಏರಿಯಾ ಆಫೀಸರ್ ಹಾಗೂ ಪ್ರತಿ ಮಲ್ಟಿಪಲ್ ಕಿಲೋಮೀಟರ್‌ಗೆ ಒಬ್ಬರು ತಾಲ್ಲೂಕು ಅಧಿಕಾರಿಯನ್ನು ನೇಮಿಸಲಾಗಿರುತ್ತದೆ. ಅವರು ತಮ್ಮ ವ್ಯಾಪ್ತಿಗೆ ಜನರನ್ನು ಸೇರಿಸಿ ಸರಪಳಿಯನ್ನು ನಿರ್ಮಿಸುವ ಜವಾಬ್ದಾರಿ ಹೊಂದಿರುತ್ತಾರೆ ಎಂದು ತಿಳಿಸಿದರು

ಇದೊಂದು ಸರ್ಕಾರದ ಮಹತ್ವಕಾಂಕ್ಷೆ ಕಾರ್ಯಕ್ರಮವಾಗಿದ್ದು, ಇದನ್ನು ಪ್ರತಿಯೊಬ್ಬರೂ ಗಂಭೀರವಾಗಿ ಪರಿಗಣಿಸಬೇಕು.

ಮುಂಬರುವ ದಿನಗಳಲ್ಲಿ ಈ ಸಂಬಂಧ ಹಲವಾರು ಸಭೆಗಳನ್ನು ನಡೆಸಿ ಕಾರ್ಯಕ್ರಮವು ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಕಾರ್ಯಕ್ರಮದಲ್ಲಿ ಮೂಡ ಆಯುಕ್ತ ರಘುನಂದನ್ ಎ.ಎನ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಂಗೇಗೌಡ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು, ವಿದ್ಯಾಸಂಸ್ಥೆಯ ಮುಖ್ಯಸ್ಥರು ಹಾಗೂ ವಿವಿಧ ಸಂಘ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ಶಿಕ್ಷಕರ ಸಮುದಾಯವನ್ನು ಸತ್ಕರಿಸುವುದು ನಮ್ಮ ಸೌಭಾಗ್ಯ: ಪಿ.ಚಿದಾನಂದ

**ಬಳ್ಳಾರಿ ಸೆ 06.** 40 ವರ್ಷಗಳ ಕಾಲ ಶಿಕ್ಷಕರಾಗಿ, ಉಪನ್ಯಾಸಕರಾಗಿ ವಿವಿಧ ಸ್ತರಗಳಲ್ಲಿ ಅಮೂಲ್ಯ ಸೇವೆ ಸಲ್ಲಿಸಿ ಸಾವಿರಾರು ಮಕ್ಕಳನ್ನು ಸತ್ಪ್ರಜೆಗಳಾಗಿ ರೂಪಿಸಿ ಬದುಕು ಕಟ್ಟಿಕೊಟ್ಟ, ನಿವೃತ್ತಿಯ ನಂತರವೂ ಸಾಹಿತ್ಯ, ಬರವಣಿಗೆ, ಚಿತ್ರಕಲೆಯ ಮೂಲಕ ಸಾಂಸ್ಕೃತಿಕ ಸೇವೆಯಲ್ಲಿ ತಲ್ಲೀನ ರಾಗಿರುವ ಡಯಟ್ ನ ನಿವೃತ್ತ ಉಪನ್ಯಾಸಕ ಆರ್. ಎಲ್. ಜಾಧವ ಮತ್ತು ಮುನ್ಸಿಪಾಲ್ ಕಾಲೇಜಿನ ನಿವೃತ್ತ ಉಪನ್ಯಾಸಕ ಏನ್. ಬಸವರಾಜ್ ರವರನ್ನು ಸತ್ಕರಿಸುವ ಮೂಲಕ ಸಮಸ್ತ ಶಿಕ್ಷಕ ಸಮುದಾಯದ ಮಹತ್ವ ನೆನೆಯುವ ಹಾಗೂ ಗೌರವ ಸಲ್ಲಿಸುವ ಸೌಭಾಗ್ಯ ನಮ್ಮದಾಯಿತು ಎಂದು ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕ ಪಿ.ಚಿದಾನಂದ ಅಭಿಪ್ರಾಯ ಪಟ್ಟರು.

ವಿಭಾಗೀಯ ಕಚೇರಿಯ ಅಂಚೆ ತರಭೇತಿ ಕೇಂದ್ರದಲ್ಲಿ ಹಮ್ಮಿಕೊಂಡ ಶಿಕ್ಷಕರ ದಿನಾಚರಣೆಯ ಅಧ್ಯಕ್ಷತೆ



ವಹಿಸಿ ಮಾತನಾಡಿದ ಅವರು, ಅಂಚೆ ಇಲಾಖೆ ಗುರುವಂದನಾ ಕಾರ್ಯಕ್ರಮದ ಮೂಲಕ ಗುರು ಶಿಷ್ಯರ ನಡುವೆ ಶುಭಾಶಯ ಹಂಚಿಕೊಳ್ಳಲು ಆನ್‌ಲೈನ್ ವೇದಿಕೆ ಒದಗಿಸಿ ಸಾವಿರಾರು ಶಿಕ್ಷಕರಿಗೆ ಗೌರವ ಸಲ್ಲಿಸುವ ಅವಕಾಶ ಪಡೆಯಿತು, ಈ ದಿನ ದೇಶದಾದ್ಯಂತ ಅತ್ಯಂತ ಕಠಿಣ ಭೌಗೋಳಿಕ ಪ್ರದೇಶದಲ್ಲಿ ಸೇವೆ ಸಲ್ಲಿಸುವ ಶಿಕ್ಷಕರಿಗೆ ಶುಭಾಷಯ ಪತ್ರ ಹಂಚಿಕೊಳ್ಳುತ್ತಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಉಪನ್ಯಾಸಕರು ಅಂಚೆ ಇಲಾಖೆಯ ಪ್ರಾಮಾಣಿಕ ಜನ ಸೇವೆ ಹಾಗೂ ದೇಶ ಕಟ್ಟುವಲ್ಲಿ ಇಲಾಖೆಯ ಪಾತ್ರವನ್ನು ಕೊಂಡಾಡಿದರು.

ಕಾರ್ಯಕ್ರಮದಲ್ಲಿ ಸಹಾಯಕ ಅಂಚೆ ಅಧೀಕ್ಷಕ ಅರುಣ್ ಕಾಮತ್, ಎಸ್.ಸಿ.ವಾಲೇಕಾರ್ ಹಾಜರಿದ್ದರು. ಅಂಚೆ ತರಬೇತುದಾರ ವೀರೇಶ್ ಪ್ರಾರ್ಥಿಸಿದರು, ಅಲ್ಲಾಸಾಬ್ ನಿರೂಪಿಸಿದರು, ರವಿಕುಮಾರ್ ವಂದನಾರ್ಪಣೆ ಸಲ್ಲಿಸಿದರು. ಸಮಸ್ತ ವಿಭಾಗೀಯ ಕಚೇರಿ ನೌಕರರು ಕಾರ್ಯಕ್ರಮವನ್ನು ಸಾಕ್ಷೀಕರಿಸಿದರು.

## ಮಾನಸಿಕ ವಿಶೇಷ ಚೇತನರ ವಸತಿಶಾಲೆ

# ಶಿಕ್ಷಕರ ದಿನಾಚರಣೆ

**ಬಳ್ಳಾರಿ, ಸೆ. 06 :** ಬಳ್ಳಾರಿ ನಗರದ ಬೆಳಗಲ್ ರಸ್ತೆಯಲ್ಲಿರುವ ಜಿ. ಚೆಂಗಾರೆಡ್ಡಿ ಸ್ಮಾರಕ ಮಾನಸಿಕ ವಿಶೇಷ ಚೇತನರ ವಸತಿಯುತ ವಿಶೇಷ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಶ್ರೀ ಮಹಾದೇವ ತಾತ ಕಲಾ ಸಂಘದ ಸಂಸ್ಥಾಪಕ ಅಧ್ಯಕ್ಷರು, ಪತ್ರಿಕಾ ಛಾಯಾಗ್ರಾಹಕರು, ರಂಗಕಲಾವಿದ, ಪುರುಷೋತ್ತಮ ಅಂದ್ಯಾಳರವರು, ಇಂಡಿಯನ್ ಆಯಿಲ್ ಕಾರ್ಪೊರೇಷನ್‌ನ ಸೀನಿಯರ್ ಸೇಲ್ಸ್ ಮ್ಯಾನೇಜ ರಾಜಶೇಖರವರು, ಹನುಮಾನ್ ಪೆಟ್ರೋಲ್ ಬಂಕಿನ ಮಾಲೀಕ ಸರೋಜ್ ಕುಮಾರ್ ರವರು, ಭಾಗವಹಿಸಿದ್ದರು. ಪ್ರಾಸ್ತಾವಿಕ ನುಡಿಯನ್ನು ಸಂಸ್ಥೆಯ ಗೌರವ ಸಲಹೆಗಾರರಾದ ವಿ. ಸುಬ್ಬಾರೆಡ್ಡಿಯವರು, ದೀಪ ತಾನು ಉರಿದು ಜಗತ್ತಿಗೆ ಬೆಳಕು ನೀಡುವ ಹಾಗೇ ಗುರು, ಎನ್ನುತ್ತಾ ಗುರುವಿನ ಮಹತ್ವವನ್ನು ತಿಳಿಸಿದರು. ನಂತರ ಮಾತನಾಡಿದ, ಪುರುಷೋತ್ತಮ ಹಂದ್ಯಾಳುವರು ವಿಶೇಷ ಶಿಕ್ಷಕರ ಸೇವೆಯನ್ನ ಕೊಂಡಾಡಿದರು.

ಈ ಸಂದರ್ಭದಲ್ಲಿ ಜೇಷ್ಠ ವಿಶೇಷ ಶಿಕ್ಷಕ ಉಮಾಪತಿಯವರನ್ನು ಸನ್ಮಾನಿಸಲಾಯಿತು. ವಿಶೇಷ ಶಿಕ್ಷಕರಿಗಾಗಿ ಆಯೋಜಿಸಿದ ಕ್ರೀಡೆಗಳಲ್ಲಿ ಗೆದ್ದವರಿಗೆ ಮುಖ್ಯ ಅತಿಥಿಗಳಿಂದ ಬಹುಮಾನ ವಿತರಿಸಲಾಯಿತು. ನಂತರ ಸಂಸ್ಥೆಯ ವತಿಯಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮುಖ್ಯ ಅತಿಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಶಾಲೆಯ ಮುಖ್ಯೋಪಾಧ್ಯಾಯರಾದ ಚಂದ್ರಶೇಖರ್ ವಂದಿಸಿದರು. ವಿಶೇಷ ಶಿಕ್ಷಕರಾದ ಸೋಮನಾಥ್ ಕಾರ್ಯಕ್ರಮವನ್ನು ಸಂಯೋಜಿಸಿ, ನಿರೂಪಿಸಿದರು. ಈ ಕಾರ್ಯಕ್ರಮದಲ್ಲಿ, ಶಾಲೆಯ ಸಮಸ್ತ ಸಿಬ್ಬಂದಿಗಳು ಭಾಗವಹಿಸಿ, ಹರ್ಷ ವ್ಯಕ್ತಪಡಿಸಿದರು. ವಿಶೇಷ ಶಿಕ್ಷಕರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ವಿದ್ಯುತ್ ಖಾಸಗೀಕರಣ ಖಂಡಿಸಿ ರೈತರ ಪ್ರತಿಭಟನಾ ರ್‍ಯಾಲಿ




**ರಾಯಚೂರು, ಸೆ. 6:** ರೈತರ ಪಂಪ್‌ಸೆಟ್‌ಗಳಿಗೆ ಆಧಾರ್ ಕಾರ್ಡ್ ಜೋಡಣೆ ಮಾಡುವ ಮೂಲಕ ಖಾಸಗೀಕರಣಕ್ಕೆ ಹುನ್ನಾರ ನಡೆಸಿರುವ ಸರ್ಕಾರದ ಕ್ರಮ ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ ಬಣ) ನೇತೃತ್ವದಲ್ಲಿ ನೂರಾರು ರೈತರು ಬೃಹತ್ ಪ್ರತಿಭಟನಾ ರ್‍ಯಾಲಿ ನಡೆಸಿದರು.

ಬೆಳಿಗ್ಗೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಜೆಸ್ಕಾಂ ಕಚೇರಿಯವರೆಗೆ ರ್‍ಯಾಲಿ ನಡೆಸಿ, ರೈತ ಮುಖಂಡರು, ರೈತರು ಹಸಿರು ಧ್ವಜ ಹಿಡಿದು ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ನಂತರ ಜೆಸ್ಕಾಂ ಕಚೇರಿ ಎದುರು ಧರಣಿ ನಡೆಸಿ ನಂತರ ಕಾರ್ಯನಿರ್ವಹಕ ಎಂಜನಿಯರ್ ಮೂಲಕ ಇಂಧನ ಖಾತೆ ಸಚಿವರಿಗೆ ಮನವಿ ಸಲ್ಲಿಸಿದರು.

ಹಿಂದಿನ ಬಿಜೆಪಿ ಸರ್ಕಾರವು ಜಾರಿಗೊಳಿಸಿದ್ದ ಕೃಷಿ ತಿದ್ದುಪಡಿ ಕಾಯ್ದೆ ರದ್ದು ಪಡಿಸುವುದಾಗಿ ವಿಧಾನಸಭೆ ಚುನಾವಣೆಗೂ ಮುನ್ನ ಕಾಂಗ್ರೆಸ್ ಭರವಸೆ ನೀಡಿತ್ತು. ಒಂದು ವರ್ಷ ಕಳೆದರೂ ಹಿಂಪಡೆದಿಲ್ಲ ಎಂದು ಆರೋಪಿಸಿದರು. ಈಗ ರೈತರ ಪಂಪ್‌ಸೆಟ್‌ಗಳಿಗೆ ಆಧಾರ್ ಕಾರ್ಡ್ ಜೋಡಣೆ ಮಾಡುತ್ತಿದ್ದು, ಪ್ರತ್ಯೇಕ ಮೀಟರ್ ಅಳವಡಿಕೆಗೆ ಮುಂದಾಗಿದೆ. ಇದರಿಂದ ಮೊದಲೇ ಸಂಕಷ್ಟದಲ್ಲಿದ್ದ ರೈತಾಪಿ ವರ್ಗಕ್ಕೆ ಮತ್ತಷ್ಟು ಸಮಸ್ಯೆಗೆ ಸಿಲುಕುವಂತಾಗಲಿದೆ. ಸರ್ಕಾರ ತನ್ನ ನಿರ್ಧಾರ ಕೈ ಬಿಡಬೇಕು. ಇಲ್ಲವಾದರೆ ಹೋರಾಟ ಮುಂದುವರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ನಗರ, ಹಳ್ಳಿ ಎಂಬ ತಾರತಮ್ಯ ಇಲ್ಲದೇ ಎಲ್ಲರಿಗೂ ಸರಿಯಾಗಿ ವಿದ್ಯುತ್ ನೀಡಬೇಕು, ನಿಯಮಿತವಾಗಿ ವಿದ್ಯುತ್ ಸರಬರಾಜಾಗದ ಕಾರಣಕ್ಕೆ ರಾಜ್ಯದಲ್ಲಿ 30ಲಕ್ಷಕ್ಕೂ ಹೆಚ್ಚು ರೈತರ ಪಂಪಸೆಟ್‌ಗಳು ಸುಟ್ಟು ಹೋಗಿವೆ. ಸುಮಾರು 2400 ಕೋಟಿ ಹಣ ಇವುಗಳ ದುರಸ್ತಿಗಾಗಿಯೇ ರೈತರು ವೆಚ್ಚ ಮಾಡಿದ್ದಾರೆ ಎಂದು ಸಮಸ್ಯೆ ವಿವರಿಸಿದರು. ಫಸಲು ನಷ್ಟವನ್ನು ಅಂದಾಜಿಸಿ ಬೆಳೆಗಳ ಬೆಲೆ ನಿಗದಿ ಮಾಡಬೇಕು, ಕೃಷಿಗೆ ಸಂಬಂಧಿಸಿದ ವಿದ್ಯುತ್ ಪರಿವರ್ತಕಗಳು ಸುಟ್ಟು ಹೋದ 24 ಗಂಟೆಯೊಳಗೆ ದುರಸ್ತಿ ಮಾಡಿಸಬೇಕು, ರೈತರ ಜಮೀನುಗಳಿಗೆ ಹೋಗುವ ಮಾರ್ಗದಲ್ಲಿ ಜೋತು ಬಿದ್ದಿರುವ ವಿದ್ಯುತ್ ಲೈನ್‌ಗಳನ್ನು ಕೂಡಲೇ ದುರಸ್ತಿ ಮಾಡಿಸಬೇಕು ಎಂದು ಆಗ್ರಹಿಸಿದರು.


ವಿದ್ಯುತ್ ಸಂಪರ್ಕವೇ ಕಾಣದ ದೊಡ್ಡಿ, ತಾಂಡಾ, ಹಳ್ಳಿಗಳಿಗೆ ಕೂಡಲೇ ಸಂಪರ್ಕ ಕಲ್ಪಿಸಬೇಕು, ವಿದ್ಯುತ್ ವಿಚಾರದಲ್ಲಿ ರೈತರನ್ನು ಅನಗತ್ಯವಾಗಿ ಅಲೆಸುವುದನ್ನು ನಿಲ್ಲಿಸಬೇಕು ಎಂಬುವುದು ಸೇರಿದಂತೆ ಇನ್ನೂ ಅನೇಕ ಬೇಡಿಕೆ ಈಡೇರಿಸಬೇಕು ಎಂದು ಒತ್ತಾಯಿಸಿದರು.

ಮುಖಂಡ ರಾಜ್ಯ ಸಮಿತಿ ಸದಸ್ಯ ಬಸನಗೌಡ ಹಿರೇಹೆಸರೂರು, ಗೌರವಾಧ್ಯಕ್ಷ ಕುಪ್ಪಣ್ಣ ಮಾಲೀಕ, ಜಿಲ್ಲಾಧ್ಯಕ್ಷ ಶಿವಪುತ್ರಪ್ಪಗೌಡ ನಂದಿಹಾಳ, ತಾಯಪ್ಪ ಮಸ್ಕಿ, ಶರಣರೆಡ್ಡಿ ಹಳ್ಳಿ, ಬಸವರಾಜ್ ಕುಂಬಾರ, ಹನುಮಗೌಡ, ಮಹಾಂತಗೌಡ ಸೇರಿ ಅನೇಕ ಮುಖಂಡರು, ರೈತರು ಹೋರಾಟದಲ್ಲಿ ಪಾಲ್ಗೊಂಡಿದ್ದರು.



ರಾಯಚೂರಿನ ಕಪಗಲ್‌ನಲ್ಲಿ ಗುರುವಾರ ಅಪಘಾತದಲ್ಲಿ ಗಾಯಗೊಂಡ ಶಾಲಾ ಮಕ್ಕಳು ದಾಖಲಾಗಿರುವ ಆಸ್ಪತ್ರೆಗೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಶುಕ್ರವಾರ ಭೇಟಿ ನೀಡಿದರು. ಅಪಘಾತದಲ್ಲಿ ಮೃತಪಟ್ಟ ಮಕ್ಕಳ ಪೋಷಕರಿಗೆ ಪರಿಹಾರ ವಿತರಿಸಿದರು.

# ದೇಶದ ಆತ್ಮನಿರ್ಭರತೆಗೆ ಶಿಕ್ಷಣವೇ ಭದ್ರ ಬುನಾದಿ: ಡಾ. ಚನ್ನವೀರ ಶ್ರೀ



**ಬಸವಕಲ್ಯಾಣ, ಸೆ. 6:** ವಿಶ್ವ ಜ್ಞಾನ ಸಿರಿಯ ಕಣಜ, ದಾರ್ಶನಿಕರ ತವರು, ಗುರು ಪರಂಪರೆಯ ಪರಂಧಾಮ, ಸಮನ್ವಯ ಸಂಸ್ಕೃತಿಯ ವಿಶಿಷ್ಟ ತಾಣವಾದ ಭಾರತ, ಪ್ರಪಂಚದ ಅತಿ ದೊಡ್ಡ ಶೈಕ್ಷಣಿಕ ಪ್ರಯೋಗ ಶಾಲೆಯೂ ಹೌದು. ಭಾರತೀಯರೆಂದರೆ ಬೆಳಕಿನಿಂದ, ಬೆಳಕಿನೆಡೆಗೆ, ಮಹಾ ಬೆಳಕಿನ ಪ್ರಾಪ್ತಿಗೋಸ್ಕರ ಶಿಕ್ಷಣವನ್ನೇ ಸಾಧನ ಮಾಡಿಕೊಂಡು ಆ ನಿಟ್ಟಿನಲ್ಲಿ ಪಯಣಿಸುವಂಥವರು ಎಂದು ಹಾರಕೂಡ ಮಠದ ಪೀಠಾಧಿಪತಿ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.


ಜಿಲ್ಲೆಯ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ಶ್ರೀ ಚನ್ನರೇಣುಕ ಬಸವ ಮಂಟಪದಲ್ಲಿ ಬಸವಕಲ್ಯಾಣ ಹಾಗೂ ಹುಲಸೂರು ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಸಮಿತಿಯಿಂದ ಹಮ್ಮಿಕೊಂಡ 63ನೇ ಶಿಕ್ಷಕರ ದಿನಾಚರಣೆ ಸಮಾರಂಭದಲ್ಲಿ ಶ್ರೀಗಳು ಆಶೀರ್ವಚನ ನೀಡಿದರು, ಒಂದು ದೇಶದ ಗಟ್ಟಿ ಆತ್ಮನಿರ್ಭರತೆಗೆ ಶಿಕ್ಷಣವೇ ಭದ್ರ ಅಡಿಪಾಯ. ಹಾಗಾಗಿ ನಮ್ಮ ದೇಶ ಹಾಗೂ ನಾಡಿನ ಶೈಕ್ಷಣಿಕ ಅಂತ ಸತ್ವವನ್ನು ವೃದ್ಧಿಸುವ ಕಾರ್ಯದಲ್ಲಿ ತೊಡಗಿರುವ ಇಡೀ ಶಿಕ್ಷಕ ಸಮುದಾಯ ಬದುಕಿನ ಯೋಗ್ಯವಾಗಿರುವಂತಹದು. ಸಮೃದ್ಧವಾದ ಭಾರತದ ನಿರ್ಮಾಣ ಕಾರ್ಯದಲ್ಲಿ ಸೇವೆಗೈಯ್ಯುತ್ತಿರುವ ಶಿಕ್ಷಕರನ್ನು ಸಮಾಜ ಸ್ಮರಿಸಿಕೊಳ್ಳಬೇಕು. ಗೌರವಿಸಬೇಕು ಎನ್ನುವ ಬಲವಾದ ಉದ್ದೇಶದಿಂದಲೇ ಡಾ. ಸರ್ವಪಲ್ಲಿ ರಾಧಾಕೃಷ್ಣ ಅವರು ಶಿಕ್ಷಕರ ದಿನಾಚರಣೆಯಾಗಿ ಅರ್ಥಪೂರ್ಣವಾಗಿ ಸಂಭ್ರಮಿಸುವಂತೆ ಕರೆ ನೀಡಿರುವುದು ಅವರ ತರ್ಕದ ನಿಲುವಿಗೆ ನಿದರ್ಶನವಾಗಿದೆ ಎಂದು ನುಡಿದರು.

ಸಮಿತಿ ಅಧ್ಯಕ್ಷ, ಶಾಸಕ ಶರಣು ಸಲಗರ ಮಾತನಾಡಿ ಉತ್ತಮ ರೀತಯಲ್ಲಿ ಸಮಾಜ ಕಟ್ಟುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಕ್ಷಕರೆಲ್ಲರೂ ನಿಜವಾದ ಶಿಕ್ಷರಾದಾಗ ಭಾರತ ವಿಶ್ವಗುರು ಕನಸು ನನಸಾಗುತ್ತದೆ. ಶಿಕ್ಷಕರಿಗೆ ಹೇಳಿಕೊಡುವ ಮಟ್ಟದಲ್ಲಿ ಮಕ್ಕಳಲ್ಲಿ ಜ್ಞಾನ ಬೆಳೆಸಲು ಕಾಳಜಿ ವಹಿಸಬೇಕು ಎಂದು ಕೇಳಿಕೊಂಡರು.

ಹುಲಸೂರಿನ ಗುರುಬಸವೇಶ್ವರ ಸಂಸ್ಥಾನದ ಶ್ರೀ ಡಾ. ಶಿವಾನಂದ ಮಹಾಸ್ವಾಮೀಜಿ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ.ನಾರಾಯಣರಾವ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಲೀಂ ಪಾಶಾ ಮಾತನಾಡಿದರು.

ಸಹಾಯಕ ಆಯುಕ್ತ ಪ್ರಕಾಶ ಕುದರಿ, ತಹಶೀಲ್ದಾರ ಶಾಂತಗೌಡ ಬಿರಾದಾರ, ಶಿವಾನಂದ ಮೇತ್ರೆ, ತಾಪಂ ಇಓ ರಮೇಶ ಸುಲ್ಫಿ, ವೈಜಣ್ಣ ಫುಲೆ, ಜಿಪಂ ನಿವೃತ್ತ ಉಪ ಕಾರ್ಯದರ್ಶಿ ಬಿಕೆ ಹಿರೇಮಠ, ವಿವಿಧ ಸಂಘಗಳ ಪ್ರಮುಖ ಸೂರ್ಯಕಾಂತ ಪಾಟೀಲ್, ಶೇಖ್ ಮಹಬೂಬ್ ಪಟೇಲ್, ರವಿಂದ್ರರೆಡ್ಡಿ, ವೈಜಿನಾಥ ಸಾಗರ, ಮಲ್ಲಿಕಾರ್ಜುನ ಮೇತ್ರೆ, ಮೇಘರಾಜ ನಾಗರಾಳೆ, ಮಲ್ಲಿನಾಥ ಹಿರೇಮಠ, ಚಂದ್ರಕಾಂತ ಕಿವಡೆ, ಯೋಗರಾಜ ಕೆ, ಸಂತೋಷಕುಮಾರ ಅಕ್ಕಣ್ಣ, ಭೀಮಾಶಂಕರ ಅದೆಪ್ಪ, ಸೂರ್ಯಕಾಂತ ಅಡಕೆ, ರಾಜಪ್ಪ ನಂದೋಡೆ, ಮಹತಾಬ ಪಟೇಲ್, ತುಕಾರಾಮ ರೊಡ್ಡೆ, ಅಂಬಣ್ಣ ಫಾಂಗ್ರೆ, ರಾಜಕುಮಾರ ಬಿರಾದಾರ, ಶಿವಶಂಕರ ಪತಂಗೆ, ಲಕ್ಷ್ಮಣ ಹೆಂಬಾಡೆ, ಅಶೋಕ ರಾಜೋಳೆ, ಧರ್ಮೆಂದ್ರ ಭೋಸ್ಲೆ, ಶ್ರೀದೇವಿ ಚಿರಡೆ, ಸಂತೋಷಕುಮಾರ ಕವಲಗೆ ಸೇರಿದಂತೆ ಪ್ರಮುಖರಿದ್ದರು. ಸಂಜೀವಕುಮಾರ ಕಾಂಗೆ ಸ್ವಾಗತಿಸಿದರು. ರಮೇಶ ಉಮ್ಮಾಪೂರೆ ಸಂಘದ ಮನವಿ ಪತ್ರ ಓದಿ ಬೇಡಿಕೆ ಮಂಡಿಸಿದರು. ಶಿವಕುಮಾರ ಜಡಗೆ, ಮಹೇಶ ಮುಳೆ ನಿರೂಪಿಸಿದರು.

# ದಸರಾ ಎರಡನೇ ಹಂತದ ಗಜಪಡೆಗೆ ತೂಕ ಪರೀಕ್ಷೆ: ಸುಗ್ರೀವನಿಗೆ ತೂಕದಲ್ಲಿ ಎರಡನೇ ಸ್ಥಾನ





**ಮೈಸೂರು, ಸೆ. 06 :** ಮೈಸೂರು ದಸರಾ ಮಹೋತ್ಸವದಲ್ಲಿ ಭಾಗಿಯಾಗಲು ಆಗಮಿಸಿರುವ ಎರಡನೇ ತಂಡದ ಆನೆಗಳ ಬಲಾಬಲ ಲೆಕ್ಕಾಚಾರ ಶುಕ್ರವಾರ ನಡೆಯಿತು. ಎರಡನೇ ತಂಡದಲ್ಲಿ ಆಗಮಿಸಿರುವ ಐದು ಆನೆಗಳ ತೂಕವನ್ನು ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಪರಿಶೀಲಿಸಿದರು. ಐದು ಆನೆಗಳಲ್ಲಿ ಸುಗ್ರೀವ ಆನೆ 5190 ಕೆ ಜಿ ತೂಗುವುದರಿಂದ ಬಲಶಾಲಿ ಎನ್ನಿಸಿತು. ಅಭಿಮನ್ಯುವಿಗಿಂತ ಮೂರು ನೂರು ಕೆ.ಜಿ.ಕಡಿಮೆ ಇದ್ದು ಬಲದಲ್ಲಿ ಎರಡನೇ ಸ್ಥಾನದಲ್ಲಿ ಸುಗ್ರೀವ ಇದ್ದಾನೆ. ಆನೆಗಳು ದಸರಾಗೆ ಬಂದಾಗ ತೂಕ ಹಾಕುವ ಸಂಪ್ರದ್ರಾಯವನ್ನು ಮೊದಲಿನಿಂದಲೂ ಹಾಕಿಕೊಂಡು ಬರಲಾಗುತ್ತಿದೆ. ಈಗಾಗಲೇ ಮೊದಲ ತಂಡದ ತೂಕ ಹಾಕುವ ಪ್ರಕ್ರಿಯೆ ಕಳೆದ ತಿಂಗಳೇ ನಡೆದಿತ್ತು.ಗುರುವಾರ ಸಂಜೆ ಆಗಮಿಸಿದ ಆನೆಗಳನ್ನು ಶುಕ್ರವಾರ ಬೆಳಿಗ್ಗೆ ಮೈಸೂರು ಅರಮನೆ ಆವರಣದಿಂದ ತಾಲೀಮಿಗೆ ಕರೆದುಕೊಂಡು ಹೋಗುವ ಮುನ್ನ ತೂಕಕ್ಕೆ ಕರೆ ತರಲಾಯಿತು.

ಮೈಸೂರಿನ ದೇವರಾಜ ಮೊಹಲ್ಲಾದ ಧನ್ವಂತರಿ ರಸ್ತೆಯಲ್ಲಿರುವ ಸಾಯಿರಾಂ ಅಂಡ್ ಕೊ. ಎಲೆಕ್ಟ್ರಾನಿಕ್ ತೂಕ ಮಾಪನ ಕೇಂದ್ರದಲ್ಲಿ ನಡೆದ ಆನೆಗಳ ತೂಕ ಪರೀಕ್ಷೆ ಮಾಡಿದಾಗ ದಸರಾ ಗಜಪಡೆಯ ಕ್ಯಾಪ್ಟನ್ ಅಭಿಮನ್ಯುವಿನ ಬಳಿಕ ಅತಿ ಹೆಚ್ಚು ತೂಕ ಹೊಂದಿರುವ ಸುಗ್ರೀವ ಎನ್ನುವುದು ತಿಳಿಯಿತು. ಇದೇ ತಂಡದ ಪ್ರಶಾಂತ್ ಆನೆ 4875 ಕೆ.ಜಿ, ತೂಗಿತು. ಕೆ.ಜಿ, ಮಹೇಂದ್ರ 4910 ಕೆ.ಜಿ, ದೊಡ್ಡಹರವೆ ಲಕ್ಷ್ಮೀ 3485 ಕೆ.ಜಿ, ಹಿರಣ್ಯ 2930 ತೂಗಿದವು. ತೂಕದ ಪ್ರಕ್ರಿಯೆ ಮುಗಿಸಿ ಅರಮನೆಗೆ ಆನೆಗಳು ವಾಪಾಸಾದವು. ಶುಕ್ರವಾರ ಸಂಜೆಯಿಂದಲೇ ಎಲ್ಲಾ ಆನೆಗಳು ತಾಲಿಮಿನಲ್ಲಿ ಭಾಗಿಯಾಗುತ್ತವೆ ಎಂದು ಮೈಸೂರು ವನ್ಯಜೀವಿ ವಿಭಾಗದ ಡಿಸಿಎಫ್ ಡಾ.ಪ್ರಭುಗೌಡ ಬಿರಾದಾರ ಹೇಳಿದ್ದಾರೆ.

ಪ್ರಶಾಂತ ಆನೆಗೆ ಭೇದಿ ಕಾಣಿಸಿಕೊಂಡ ನಂತರ ಅದಕ್ಕೆ ಸೂಕ್ತ ಚಿಕಿತ್ಸೆ ನೀಡಲಾಗಿದೆ. ಉಳಿದಂತೆ ಆನೆಗಳ ಆರೋಗ್ಯ ಉತ್ತಮವಾಗಿದೆ ಎನ್ನುವುದು ಅಧಿಕಾರಿಗಳ ಹೇಳಿಕೆ. ಆನೆಗಳಿಗೆ ಇದೇ 15ರ ಬಳಿಕ ಮರದ ಅಂಬಾರಿ ಹೊರಿಸಿ ತಾಲಿಮು ನಡೆಸಲು ಸಿದ್ದತೆ ಮಾಡಿಕೊಳ್ಳಲಾಗುತ್ತದೆ. ಅಭಿಮನ್ಯುವಿನ ಜತೆಗೆ ಧನಂಜಯ, ಗೋಪಿ, ಭೀಮ ಆನೆಗೂ ಅಂಬಾರಿ ತಾಲೀಮು ಮಾಡಿಸುವ ಸಾಧ್ಯತೆಯಿದೆ. ಮುಂದಿನ ದಸರೆಗಳಿಗೆ ಅಣಿಯಾಗಲು ಪೂರಕವಾಗಿ ಅಭಿಮನ್ಯುವಿನ ಜತೆಗೆ ಇತರೆ ಆನೆಗಳನ್ನು ಸಜ್ಜುಗೊಳಿಸಲಾಗುತ್ತದೆ. ವರಲಕ್ಷ್ಮಿ ಕ್ಯಾಂಪ್‌ನ ಅತ್ಯಂತ ಹಿರಿಯ ಆನೆಯಾಗಿದೆ. ಅವಶ್ಯಕತೆ ಇದ್ದಾಗ ಮಾತ್ರ ವರಲಕ್ಷ್ಮೀ ಆನೆಯನ್ನು ತಾಲಿಮಿಗೆ ಕರೆ ತರಲಾಗುತ್ತದೆ. ಈ ಆನೆ ವಯಸ್ಸಿನಲ್ಲಿ ಹಿರಿಯದಾಗಿರುವುದರಿಂದ ಹೆಚ್ಚಾಗಿ ತಾಲೀಮಿಗೆ ಕರೆ ತರುತ್ತಿಲ್ಲ. ಉಳಿದಂತೆ ಎಲ್ಲಾ ಹದಿನಾಲ್ಕು ಆನೆಗಳು ನಿತ್ಯ ತಾಲೀಮಿನಲ್ಲಿ ಭಾಗಿಯಾಗಲಿವೆ.

# ಹಾಲಿನ ಹೊಳೆ ಹರಿಸಲು ಸಂಪೂರ್ಣ ಬೆಂಬಲ: ಖಂಡ್ರೆ



**ಬೀದರ್, ಸೆ. 6:** ಕ್ಷೀರ ಕ್ರಾಂತಿಗೆ ಉತ್ತೇಜನ ನೀಡುವ ಮೂಲಕ ಬೀದರ್ ಜಿಲ್ಲೆಯಲ್ಲಿ ಹಾಲಿನ ಹೊಳೆ ಹರಿಸುವುದಕ್ಕೆ ಬೆಂಬಲ ನೀಡಲು ನಾನು ಮತ್ತು ನಮ್ಮ ಸರ್ಕಾರ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ಅರಣ್ಯ, ಪರಿಸರ, ಜೀವಿಶಾಸ್ತ್ರ ಖಾತೆ ಮತ್ತು ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ್ ಖಂಡ್ರೆ ಇಲ್ಲಿ ಘೋಷಿಸಿದರು.

ನಗರದಲ್ಲಿ ಕಲಬುರಗಿ, ಬೀದರ್ ಮತ್ತು ಯಾದಗೀರ ಜಿಲ್ಲಾ ಹಾಲು ಒಕ್ಕೂಟ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳ ಆಯೋಜಿಸಿದ ಗ್ರಾಮಾಭಿವೃದ್ಧಿ ಯೋಜನೆಯ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ಬೀದರ್ ಜಿಲ್ಲೆಯಲ್ಲಿ ಹೈನು ಅಭಿವೃದ್ಧಿ ಕಾರ್ಯಕ್ರಮ ಹಮ್ಮಿಕೊಳ್ಳುವುದರ ಮೂಲಕ ಜಿಲ್ಲೆಯಲ್ಲಿ ಕ್ಷೀರ ಕ್ರಾಂತಿಗೆ ಪ್ರೇರಣೆ ನೀಡಿದ ರಾಜ್ಯಸಭಾ ಸದಸ್ಯ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರ ಅನುದಾನದಡಿಯಲ್ಲಿ ಹಾಲು ಉತ್ಪಾದಕರ ಸಹಕಾರಿ ಸಂಘಗಳಿಗೆ ನೀಡಿದ ಮೂಲ ಸೌಕರ್ಯಗಳಿಗೆ ಚಾಲನೆ ನೀಡಿ ಹೈನುಗಾರರ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹೈನುಗಾರಿಕೆಯಲ್ಲಿ ನಿರತರಾಗುವ ಮೂಲಕ ಬೀದರ್ ಜಿಲ್ಲೆಯಲ್ಲಿ ನಿತ್ಯ 5 ಲಕ್ಷ ಲೀಟರ್ ಹಾಲು ಉತ್ಪಾದಿಸುವ ಸಂಕಲ್ಪ ಮಾಡುವಂತೆ ಅವರು ಮಹಿಳಾ ವೃಂದಕ್ಕೆ ಅವರು ಕರೆ ನೀಡಿದರು.

ಬೀದರ್ ಜಿಲ್ಲೆಯ ಹವಾಮಾನ ಹೈನುಗಾರಿಕೆಗೆ ಪೂರಕವಾಗಿದೆ ಎಂದು ತಿಳಿಸಿದ ಮಂತ್ರಿ ಖಂಡ್ರೆ 2016 ರಲ್ಲಿ ಕೂಡ ತಾವು ಬೀದರ್ ಜಿಲ್ಲಾ ಉಸ್ತುವಾರಿ ಮಂತ್ರಿಯಾಗಿದ್ದ ಸಂದರ್ಭದಲ್ಲಿ ಬೀದರ್ ಜಿಲ್ಲೆಯಲ್ಲಿ ಹೈನುಗಾರಿಕೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕ್ಷೀರಪಥ ಯೋಜನೆ ಅನುಷ್ಠಾನದಲ್ಲಿ ತಂದಿದ್ದುದನ್ನು ಈ ಸಂದರ್ಭದಲ್ಲಿ ಅವರು ಸ್ಮರಿಸಿದರು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್‌ನ ಕಾರ್ಯ ಚಟುವಟಿಕೆಗಳನ್ನು ಮುಕ್ತಕಂಠದಿಂದ ಮಂತ್ರಿ ಖಂಡ್ರೆ ಕೊಂಡಾಡಿದರು.

ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಮತ್ತು ರಾಜ್ಯಸಭಾ ಸದಸ್ಯ ಡಾ. ವೀರೇಂದ್ರ ಹೆಗ್ಗಡೆ ಮಾತನಾಡಿದ ಅವರು, ಧರ್ಮಸ್ಥಳ ಟ್ರಸ್ಟ್‌ನ ಸಿಇಓ ಎಸ್. ಎಸ್.ಅನೀಲ್ ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ಶ್ರೀ ಕ್ಷೇತ್ರ ಧರ್ಮಸ್ಥಳ ಟ್ರಸ್ಟ್‌ನ ಕಾರ್ಯ ಚಟುವಟಿಕೆಗಳನ್ನು ಪ್ರಸ್ತಾಪಿಸಿದರು. ಟ್ರಸ್ಟ್‌ನ ಪರವಾಗಿ ಮಂತ್ರಿ ಖಂಡ್ರೆ ಬೀದರ್ ಜಿಲ್ಲೆಯಲ್ಲಿನ ಹಾಲು ಉತ್ಪಾದಕ ಸಹಕಾರ ಸಂಘಗಳ ಸದಸ್ಯ ಮಹಿಳೆಯರಿಗೆ ಹೈನುಗಾರಿಕೆ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗಲು ಹಾಲಿನ ಕ್ಯಾನ್‌ಗಳನ್ನು ಮತ್ತು ಇನ್ನುಳಿದ ಮೂಲ ಸೌಕರ್ಯಗಳನ್ನು ವಿತರಿಸಿದರು.

ಹಾಲು ಒಕ್ಕೂಟದ ನಿರ್ದೇಶಕ ಬಸವರಾಜಪ್ಪ ಗುರುಲಿಂಗಪ್ಪಾ ಉಪ್ಪಿನ್ ಕೈಪಿಡಿ ಬಿಡುಗಡೆ ಮಾಡಿದರು. ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಾ.ಪಿ.ವಿ.ಪಾಟೀಲ್ ಸ್ವಾಗತಿಸಿದರು. ಧರ್ಮಸ್ಥಳದ ಶ್ರದ್ಧಾ ಅಮೀತ್, ಬೀದರ್ ಸಂಸದ ಸಾಗರ್ ಖಂಡ್ರೆ, ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಡಿಸಿ ಶಿಲ್ಪಾ ಶರ್ಮಾ, ಜಿಪಂ ಸಿಇಓ ಡಾ.ಗಿರೀಶ್ ಬದೋಲೆ, ಡಾ. ರಜನೀಶ್ ವಾಲಿ, ವಿರೂಪಾಕ್ಷ ಗಾದಗಿ, ಮಾರುತಿ ಕಾಶೆಂಪೂರ್ ಮತ್ತು ಮಲ್ಲಿಕಾರ್ಜುನ ಬಿರಾದಾರ್ ಅವರನ್ನೊಳಗೊಂಡಂತೆ ಅನೇಕರು ಉಪಸ್ಥಿತರಿದ್ದರು. ಮಹಿಳೆಯರು ಸಮಾರಂಭದಲ್ಲಿ ಕಿಕ್ಕಿರಿದು ಪಾಲ್ಗೊಂಡಿದ್ದರು.


# ಬಳ್ಳಾರಿ ವಿವಿಯಿಂದ ಉಮಾಶ್ರೀ ಮೋದಿ ಚಂದ್ರಮೌಳೇಶ್ವರ ಶ್ರೀಗೆ ಗೌರವ ಡಾಕ್ಟರೇಟ್



**ಬಳ್ಳಾರಿ ಸೆ 06:** ಶುಕ್ರವಾರ ನಡೆದ ಇಲ್ಲಿನ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ 12 ನೇ ಘಟಿಕೋತ್ಸವ ಸಮಾರಂಭದಲ್ಲಿ ರಂಗಭೂಮಿ, ಕಲೆ ಮತ್ತು ಸಮಾಜ ಸೇವೆಗೆ ನಟಿ ಉಮಾಶ್ರೀ, ಕೈಗಾರಿಕೆ ಮತ್ತು ಸಮಾಜ ಸೇವೆಗೆ ಉದ್ಯಮಿ ದಿ.ಎಸ್.ಕೆ. ಮೋದಿ ಹಾಗೂ ಮಠಾಧೀಶರಾಗಿ ಶಿಕ್ಷಣ ಸೇವೆ ಮಾಡಿದ ಲಿಂ. ಚಂದ್ರಮೌಳೇಶ್ವರ ಶಿವಾಚಾರ್ಯ ಸ್ವಾಮೀಜಿ ಅವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಲಾಯಿತು. ನಟಿ ಉಮಾಶ್ರೀ ಮತ್ತು ಎಸ್.ಕೆ. ಮೋದಿ ಚಂದ್ರಮೌಳೇಶ್ವರ ಶ್ರೀಗಳ ಪರವಾಗಿ ವರ ಸದ್ಯೋಜಾತ ಶಿವಾಚಾರ್ಯರು ಅವರಿಗೆ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದರು.

## ಪ್ರಜಾಪ್ರಭುತ್ವ ದಿನದಂದು ಗಿನ್ನಿಸ್ ದಾಖಲೆಗೆ ಸಿದ್ಧವಾದ ಧಾರವಾಡ

# 55ಕೀ.ಮಿ ಉದ್ದದ ಮಾನವ ಸರಪಳಿ ನಿರ್ಮಿಸಲು ಸಜ್ಜು: ಡಿಸಿ ದಿವ್ಯಾಪ್ರಭು



**ಧಾರವಾಡ, ಸೆ. 6:** ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯದಂತೆ ಪ್ರತಿ ವರ್ಷ ಸೆ. 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಅದರಂತೆ ರಾಜ್ಯ ಸರಕಾರವು ಅತ್ಯಂತ ವಿಶಿಷ್ಟವಾಗಿ ಮತ್ತು ಪರಿಣಾಮಕಾರಿಯಾಗಿ ಆಚರಿಸಲು ನಿರ್ದೇಶಿಸಿದ್ದು, ಅಂದು ಬೀದರ್ ಜಿಲ್ಲೆಯಿಂದ ಚಾಮರಾಜನಗರದ ವರೆಗೆ ಮಾನವ ಸರಪಳಿ ರಚಿಸಲಾಗುತ್ತದೆ. ಜಿಲ್ಲೆಯಲ್ಲಿ ತೇಗೂರ ಗ್ರಾಮದಿಂದ ಮಾವಿನಕೊಪ್ಪ ಗ್ರಾಮವರೆಗೆ ಸುಮಾರು 55 ಸಾವಿರ ಜನರಿಂದ ಮಾನವ ಸರಪಳಿ ನಿರ್ಮಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಾಪ್ರಭು ಹೇಳಿದರು.

ಶುಕ್ರವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಪ್ರಯುಕ್ತ ಹಮ್ಮಿಕೊಂಡಿರುವ ಮಾನವ ಸರಪಳಿ ಕಾರ್ಯಕ್ರಮದ ರೂಪುರೇಷಗಳನ್ನು ಸಿದ್ದಪಡಿಸುವ ಕುರಿತು ಜರುಗಿದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಇದೇ 15 ರಂದು ಬೆಳಿಗ್ಗೆ 8 ಗಂಟೆಗೆ ಬೆಳಗಾವಿ ಜಿಲ್ಲೆ ಕಿತ್ತೂರು ತಾಲ್ಲೂಕು ಮೂಲಕ ಧಾರವಾಡ ಜಿಲ್ಲೆಯ ತೇಗೂರು ಗ್ರಾಮದ ಮೂಲಕ ಮಾನವ ಸರಪಳಿ ಆರಂಭವಾಗುತ್ತದೆ. ಅಲ್ಲಿಂದ ಧಾರವಾಡ ತಾಲ್ಲೂಕಿನ ಮಾವಿನಕೊಪ್ಪ ಗ್ರಾಮದ ಮೂಲಕ ಉತ್ತರ ಕನ್ನಡ ಜಿಲ್ಲೆಗೆ ಮಾನವ ಸರಪಳಿ ಮುಂದುವರಿಯುತ್ತದೆ ಎಂದು ಅವರು ಮಾಹಿತಿ ನೀಡಿದರು.

ಜಿಲ್ಲೆಯ ಒಂಬತ್ತು ಗ್ರಾಮ ಪಂಚಾಯತಗಳ 18 ಗ್ರಾಮಗಳಲ್ಲಿ ಮತ್ತು ಧಾರವಾಡ ನಗರದಲ್ಲಿ ಮಾನವ ಸರಪಳಿ ನಿರ್ಮಿಸಲಾಗುವುದು. ಮಾನವ ಸರಪಳಿಯಲ್ಲಿ ವಿದ್ಯಾರ್ಥಿಗಳು, ಎನ್.ಸಿ.ಸಿ., ಸ್ಕೌಟ್ಸ್, ಹೋಮ್ ಗಾರ್ಡ್ಸ್, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಸಹಾಯಕರು, ಮುಖಂಡರು, ಸಾರ್ವಜನಿಕರು, ಚುನಾಯಿತ ಪ್ರತಿನಿಧಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸೇರಿ ಒಟ್ಟು 55 ಸಾವಿರ ಜನರು ಭಾಗವಹಿಸಲಿದ್ದಾರೆ ಎಂದು ಡಿ.ಸಿ ತಿಳಿಸಿದರು.

**ಬೆಳಿಗ್ಗೆ 8:30 ಕ್ಕೆ ಮಾನವ ಸರಪಳಿ:** ರಾಜ್ಯ ಸರ್ಕಾರದ ನಿರ್ದೇಶನದಂತೆ ಇದೇ 15 ರಂದು ಜಿಲ್ಲೆಯಲ್ಲಿ ಬೆಳಿಗ್ಗೆ 8 ಗಂಟೆಗೆ ಮಾನವ ಸರಪಳಿ ಆರಂಭವಾಗಿ ಬೆಳಿಗ್ಗೆ 8:30 ಕ್ಕೆ ಮಾನವ ಸರಪಳಿ ನಿರ್ಮಾಣವಾಗುತ್ತದೆ. ಸಮಾಜ ಕಲ್ಯಾಣ ಇಲಾಖೆಯು ಗಿನ್ನಿಸ್ ಬುಕ್ಕ್ ಆಫ್ ವರ್ಲ್ಡ್ ರೆಕಾರ್ಡ್ ಸಂಸ್ಥೆಯಿಂದ 8:30 ರಿಂದ 8:40 ರವರೆಗೆ ಮಾನವ ಸರಪಳಿ ಚಿತ್ರೀಕರಣ ಮಾಡಲಾಗುತ್ತದೆ. 8:45 ಗಂಟೆಗೆ ಮಾನವ ಸರಪಳಿಯಲ್ಲಿ ಪಾಲ್ಗೊಂಡ ಸರ್ವರಿಂದ ಸಂವಿಧಾನ ಪೀಠಿಕೆ ಓದುವ ಕಾರ್ಯಕ್ರಮ ಜರುಗುತ್ತದೆ. 9 ಗಂಟೆ ಕಾರ್ಯಕ್ರಮ ಮುಕ್ತಾಯವಾಗುತ್ತದೆ ಎಂದು ದಿವ್ಯಾಪ್ರಭು ಹೇಳಿದರು.

ಜಿಲ್ಲೆಯ 55 ಕೀ.ಮಿ. ಉದ್ದದ ಮಾನವ ಸರಪಳಿಯಲ್ಲಿ ಭಾಗವಹಿಸುವ 55 ಸಾವಿರ ಜನರ ಶಿಸ್ತುಬದ್ದ ಭಾಗವಹಿಸುವಿಕೆಗೆ ಮೇಲುಸ್ತುವಾರಿಗಾಗಿ ಪ್ರತಿ 100 ಮೀಟರಗೆ ಒಬ್ಬ ವಿಭಾಗ ಅಧಿಕಾರಿಯಂತೆ ಒಟ್ಟು 510 ಅಧಿಕಾರಿಗಳು ಕರ್ತವ್ಯದಲ್ಲಿದ್ದಾರೆ ಎಂದು ಹೇಳಿದರು.

ಅಲ್ಲದೆ ಪ್ರತಿ ಕಿ.ಮೀಟರಗೆ ಒಬ್ಬ ಪ್ರದೇಶ ಅಧಿಕಾರಿಯಂತೆ ಒಟ್ಟು 51 ಅಧಿಕಾರಿಗಳು, ಪ್ರತಿ 2 ಕಿ.ಮೀ ಮೀಟರಗೆ ಒಬ್ಬ ತಾಲೂಕು ಮಟ್ಟದ ಅಧಿಕಾರಿಯಂತೆ ಒಟ್ಟು 26 ಅಧಿಕಾರಿಗಳು ಮತ್ತು ಪ್ರತಿ 5 ಕಿ.ಮೀಟರ ಒಬ್ಬ ಜಿಲ್ಲಾ ಮಟ್ಟದ ಅಧಿಕಾರಿಯಂತೆ ಒಟ್ಟು 12 ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

**ಮಾನವ ಸರಪಳಿ ಸಂಚಾರ ಮಾರ್ಗ :** ಬೆಳಗಾವಿ ಜಿಲ್ಲೆಯ ಕಿತ್ತೂರ ತಾಲ್ಲೂಕಿನ ಮೂಲಕ ಧಾರವಾಡ ಜಿಲ್ಲೆಯ ತೇಗೂರ ಗ್ರಾಮದ ಮೂಲಕ ಮಾನವ ಸರಪಳಿ ಆರಂಭವಾಗುತ್ತದೆ. ಮಾನವ ಸರಪಳಿಯು ಧಾರವಾಡ ಜಿಲ್ಲೆಯ ತೇಗೂರ, ಗುಳೇದಕೊಪ್ಪ, ವೆಂಕಟಾಪೂರ, ಶಿಂಗನಹಳ್ಳಿ, ಕೋಟೂರ, ಬೇಲೂರ ಗ್ರಾಮ, ಮಮ್ಮಿಗಟ್ಟಿ, ಕೆ.ಎಂ.ನರೇಂದ್ರ, ಜುಬ್ಲಿ ಸರ್ಕಲ್, ಸಲಕಿನಕೊಪ್ಪ, ಬಾಡ, ಬೆನಕನಕಟ್ಟಿ, ನಿಗದಿ, ಬೋಮ್ಮರಸಿಕೊಪ್ಪ, ಮುರಕಟ್ಟಿ, ಹಳ್ಳಿಗೇರಿ, ಹೊಲ್ತಿಕೋಟಿ ಗ್ರಾಮದಿಂದ ಮಾವಿನಕೊಪ್ಪ ಗ್ರಾಮದಿಂದ ಹಳಿಯಾಳ ತಾಲ್ಲೂಕು ಮೂಲಕ ಮಾನವ ಸರಪಳಿಯು ಉತ್ತರ ಕನ್ನಡ ಜಿಲ್ಲೆಯನ್ನು ಸೇರುತ್ತದೆ ಎಂದು ಅವರು ಹೇಳಿದರು.

ಇದೊಂದು ಮಹತ್ವದ ಕಾರ್ಯಕ್ರಮವಾಗಿರುವದರಿಂದ ಜಿಲ್ಲೆಯ ಎಲ್ಲ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು. ಮತ್ತು ಜಿಲ್ಲಾಡಳಿತ ಸಿದ್ದಪಡಿಸಿರುವ ರೂಪುರೇಷೆ ಪ್ರಕಾರ ನೇಮಕಗೊಂಡಿರುವ ಅಧಿಕಾರಿಗಳು ಮತ್ತು ಇಲಾಖೆಗಳು ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.

ಈ ವೇಳೆ ಮಹಾನಗರ ಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಅಪರ ಡಿಸಿ ಗೀತಾ ಸಿ.ಡಿ., ಉಪವಿಭಾಗಾಧಿಕಾರಿ ಶಾಲಂ ಹುಸೇನ್ ವೇದಿಕೆಯಲ್ಲಿದ್ದರು. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪಿ.ಶುಭಾ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಕರ್ನಾಟಕ ವಿಶ್ವವಿದ್ಯಾಲಯ ಕುಲಸಚಿವ ಎ. ಚನ್ನಪ್ಪ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಬಿ.ಎಸ್.ಮುಗನೂರಮಠ, ಮಹಾನಗರ ಪಾಲಿಕೆಯ ಅಧೀಕ್ಷಕ ಇಂಜೀಯರ್ ತಿಮ್ಮಪ್ಪ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಲಿಂಗರಾಜ ಅಂಗಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ತಹಶಿಲ್ದಾರ ಡಿ.ಎಚ್.ಹೂಗಾರ, ಬಸವರಾಜ ಬೆಣ್ಣಿಶಿರೂರ, ಡಿಎಚ್‌ಓ ಡಾ.ಶಶಿ ಪಾಟೀಲ, ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಗಂಗಾಧರ ಕಂದಕೂರ, ಪ್ರಶಾಂತ ತುರಕಾಣಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಪಿಡಿಓ ಅವರು ಸೇರಿ ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಾರ್ಕ್ ಪುನಶ್ಚೇತನ ಅಗತ್ಯ: ಬಾಂಗ್ಲಾ ಮಧ್ಯಂತರ ಸರ್ಕಾರದ ಮುಖ್ಯಸ್ಥ ಯೂನಸ್




**ಢಾಕಾ, ಸೆ. 06 :** ಪ್ರಾದೇಶಿಕ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ದಕ್ಷಿಣ ಏಷ್ಯಾದ ಪ್ರಾದೇಶಿಕ ಸಹಕಾರ ಸಂಘದ (ಸಾರ್ಕ್) ಪುನಶ್ಚೇತನ ಅಗತ್ಯ ಎಂದು ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮುಖ್ಯಸ್ಥ ಮೊಹಮ್ಮದ್ ಯೂನಸ್ ಪ್ರತಿಪಾದಿಸಿದ್ದಾರೆ. ಎಂಟು ರಾಷ್ಟ್ರಗಳನ್ನು ಒಳಗೊಂಡಿರುವ ಸಾರ್ಕ್‌ಅನ್ನು ದೊಡ್ಡ ಉದ್ದೇಶಕ್ಕಾಗಿ ರಚಿಸಲಾಗಿತ್ತು. ಆದರೆ ಈಗ ಅದು ಕಾಗದದ ಮೇಲೆ ಮಾತ್ರ ಉಳಿದುಕೊಂಡಿದ್ದು, ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಶುಕ್ರವಾರ ಪಿಟಿಐಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ. 'ಹಲವು ಪ್ರಾದೇಶಿಕ ಸಮಸ್ಯೆಗಳನ್ನು ಪರಿಹರಿಸುವ ಶಕ್ತಿ ಸಾರ್ಕ್‌ಗೆ ಇದೆ. ಈ ತಿಂಗಳ ಕೊನೆಯಲ್ಲಿ ನಡೆಯಲಿರುವ ವಿಶ್ವಸಂಸ್ಥೆಯ ಮಹಾ ಅಧಿವೇಶನದ ವೇಳೆ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ, ಸಾರ್ಕ್ ಪುನರುಜ್ಜೀವನದ ಕುರಿತು ಮಾತನಾಡಲು ಬಯಸಿದ್ದೇನೆ' ಎಂದು ತಿಳಿಸಿದರು.

'ಬಹು ದಿನಗಳಿಂದ ಸಾರ್ಕ್ ಶೃಂಗಸಭೆ ನಡೆಯುತ್ತಿಲ್ಲ. ನಾವು ಮತ್ತೆ ಒಗ್ಗಟ್ಟು ಪ್ರದರ್ಶಿಸಬೇಕು. ಸಾರ್ಕನ್ನು ಎಲ್ಲ ಸದಸ್ಯ ರಾಷ್ಟ್ರಗಳ ಮುಖ್ಯಸ್ಥರನ್ನು ಜತೆಯಲ್ಲಿ ನಿಲ್ಲಿಸಿ ಫೋಟೊ ಶೂಟ್ ಮಾಡಲು ಪ್ರಯತ್ನಿಸುತ್ತೇನೆ' ಎಂದರು.

ಸಾರ್ಕ್ ಬಣವು ಅಫ್ಘಾನಿಸ್ತಾನ, ಬಾಂಗ್ಲಾದೇಶ, ಭೂತಾನ್, ಭಾರತ, ಮಾಲ್ದೀವ್ಸ್, ನೇಪಾಳ, ಪಾಕಿಸ್ತಾನ ಮತ್ತು ಶ್ರೀಲಂಕಾವನ್ನು ಒಗೊಂಡಿದೆ. 2014ರಲ್ಲಿ ಕಾಠ್ಮಂಡುವಿನಲ್ಲಿ ನಡೆದ ಸಭೆಯ ಬಳಿಕ ಸಾರ್ಕ್ ದ್ವೈವಾರ್ಷಿಕ ಶೃಂಗಸಭೆ ನಡೆದೇ ಇಲ್ಲ. 2016ರ ಶೃಂಗಸಭೆ ಇಸ್ಲಾಮಾಬಾದ್‌ನಲ್ಲಿ ನಡೆಯಬೇಕಿತ್ತು. ಆದರೆ ಅದೇ ಸಮಯದಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಉಗ್ರರ ದಾಳಿ ನಡೆದ ಕಾರಣ ಭಾರತವು ಶೃಂಗಸಭೆಯಲ್ಲಿ ಪಾಲ್ಗೊಳ್ಳದಿರಲು ನಿರ್ಧರಿಸಿತ್ತು. ಅದರ ಬೆನ್ನಲ್ಲೇ ಬಾಂಗ್ಲಾದೇಶ, ಭೂತಾನ್ ಮತ್ತು ಅಫ್ಘಾನಿಸ್ತಾನ ಕೂಡಾ ಹಿಂದೆ ಸರಿದಿದ್ದವು.

# ಗಗನಯಾತ್ರಿಗಳಿಲ್ಲದೆ ವಾಪಸ್ ಬರಲಿರುವ ಬೋಯಿಂಗ್ ಸ್ಟಾರ್‌ಲೈನರ್



**ವಾಷಿಂಗ್ಟನ್, ಸೆ. 06 :** ನಾಸಾದ ಗಗನಯಾತ್ರಿಗಳಾದ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಇಲ್ಲದೇ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಭೂಮಿಗೆ ಮರಳಲು ದೋಷಯುಕ್ತ ಬೋಯಿಂಗ್ ಸ್ಟಾರ್‌ಲೈನರ್ ವಾಪಸ್ಸಾಗುತ್ತಿದೆ. ಇಬ್ಬರು ಗಗನಯಾತ್ರಿಗಳು ಬಾಹ್ಯಾಕಾಶ ನೌಕೆಯ ಹ್ಯಾಚ್ ಮುಚ್ಚಿದ್ದಾರೆ.

ಭಾರತೀಯ ಕಾಲಮಾನದ ಪ್ರಕಾರ ಶನಿವಾರ ಬೆಳಗಿನ ಜಾವ 3.30ಕ್ಕೆ ನೌಕೆಯು ಬಾಹ್ಯಕಾಶದಿಂದ ತನ್ನ ಯಾತ್ರೆ ಆರಂಭಿಸಲಿದ್ದು, ಸುಮಾರು ಆರು ಗಂಟೆಗಳ ಪ್ರಯಾಣದ ನಂತರ ನ್ಯೂ ಮೆಕ್ಸಿಕೊದಲ್ಲಿ ಇಳಿಯಲಿದೆ ಎನ್ನಲಾಗಿದೆ. NASAದ ಅಧಿಕೃತ ಬ್ಲಾಗ್ ಈ ಬಗ್ಗೆ ಪೋಸ್ಟ್ ಮಾಡಿದೆ.

ಪೋಸ್ಟ್‌ನಲ್ಲಿ, ನಾಸಾ ಗಗನಯಾತ್ರಿಗಳಾದ ಬುಚ್ ವಿಲ್ಮೋರ್ ಮತ್ತು ಸುನಿತಾ ವಿಲಿಯಮ್ಸ್ ಅವರು ಸ್ಟಾರ್ಲೈನರ್ ಅನ್ನು ಸರಕುಗಳೊಂದಿಗೆ ಪ್ಯಾಕ್ ಮಾಡಿ ಮುಗಿಸಿದ್ದಾರೆ.

ಹಿಂತಿರುಗಲು ಅದರ ಕ್ಯಾಬಿನ್ ಅನ್ನು ಕಾನ್ಫಿಗರ್ ಮಾಡಿದ್ದಾರೆ. ಇವರಿಬ್ಬರು ಗುರುವಾರ ಮಧ್ಯಾಹ್ನ ಕೊನೆಯ ಬಾರಿಗೆ ಸ್ಟಾರ್‌ಲೈನರ್‌ನ ಹ್ಯಾಚ್ ಮುಚ್ಚಿದರು. ಸಿಬ್ಬಂದಿಗಳಿಲ್ಲದ ನಿರ್ಗಮನಕ್ಕಾಗಿ ಬಾಹ್ಯಾಕಾಶ ನೌಕೆಯನ್ನು ಸಿದ್ಧಪಡಿಸಿದ್ದಾರೆ. ನೌಕೆಯು ಸ್ವಯಂಚಾಲಿತವಾಗಿ ವಾಪಸ್ ಬರಲಿದೆ ಎಂದು ತಿಳಿಸಿದೆ.

# ಭ್ರಷ್ಟಾಚಾರ ವಿರೋಧಿ ಕಾನೂನು ತಿದ್ದುಪಡಿ: ಸರ್ಕಾರದ ಪರ ಪಾಕ್ ಸುಪ್ರೀಂಕೋರ್ಟ್ ಆದೇಶ



**ಇಸ್ಲಾಮಾಬಾದ್, ಸೆ. 06 :** ಭ್ರಷ್ಟಾಚಾರ ವಿರೋಧಿ ಕಾನೂನುಗಳಿಗೆ ತಂದಿರುವ ತಿದ್ದುಪಡಿಗಳನ್ನು ಮರುಸ್ಥಾಪಿಸಲು ಪಾಕಿಸ್ತಾನದ ಸುಪ್ರೀಂ ಕೋರ್ಟ್, ಸರ್ಕಾರದ ಪರವಾಗಿ ಶುಕ್ರವಾರ ಸರ್ವಾನುಮತದ ತೀರ್ಪು ನೀಡಿದೆ. ಈ ತೀರ್ಪು ಶೆಹಬಾಜ್ ಷರೀಫ್ ನೇತೃತ್ವದ ಸರ್ಕಾರಕ್ಕೆ ಪ್ರಮುಖ ಪರಿಹಾರ ಒದಗಿಸಿದೆ. ಭ್ರಷ್ಟಾಚಾರ ವಿರೋಧಿ ಕಾನೂನುಗಳ ತಿದ್ದುಪಡಿಗಳನ್ನು ಮಾಜಿ ಪ್ರಧಾನಿ ಖಾನ್ ಅವರು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು.

ಕಳೆದ ವರ್ಷದ ಸೆಪ್ಟೆಂಬರ್‌ನಲ್ಲಿ ತಿದ್ದುಪಡಿಗಳನ್ನು ಸುಪ್ರೀಂ ಕೋರ್ಟ್ ರದ್ದುಪಡಿಸಿತ್ತು. ಇದನ್ನು ಪ್ರಶ್ನಿಸಿ, ಸರ್ಕಾರ ಮತ್ತು ಇತರ ಪಕ್ಷಗಳು ಸಲ್ಲಿಸಿದ್ದ ಮೇಲ್ಮನವಿಗಳನ್ನು ಆಲಿಸಿದ ಐವರು ನ್ಯಾಯಮೂರ್ತಿಗಳಿದ್ದ ಪೀಠವು ಜೂನ್ 6ರಂದು ತೀರ್ಪನ್ನು ಕಾಯ್ದಿರಿಸಿತ್ತು.

ಈ ತೀರ್ಪನ್ನು ಮುಖ್ಯ ನ್ಯಾಯಮೂರ್ತಿ (ಸಿಜೆಪಿ) ಖಾಜಿ ಫಯೇಜ್ ಇಸಾ ಅವರು ಶುಕ್ರವಾರ ಪ್ರಕಟಿಸಿದರು. ಈ ತೀರ್ಪಿನಿಂದ ಪ್ರಧಾನಿ ಶೆಹಬಾಜ್ ಮತ್ತು ಅವರ ಹಿರಿಯ ಸಹೋದರ ನವಾಜ್ ಷರೀಫ್ ಹಾಗೂ ದೇಶದ ಹಲವಾರು ಪ್ರಮುಖ ರಾಜಕಾರಣಿಗಳಿಗೆ ಅನುಕೂಲವಾಗಲಿದೆ.






ಚಿನ್ನದ ಪದಕ ವಿಜೇತರಾದ ಅಥಾನಾಸಿಯೋಸ್ ಘವೆಲಾಸ್ (3ನೇ R) ಮತ್ತು ಅವರ ಮಾರ್ಗದರ್ಶಿ ಗ್ರೀಸ್‌ನ ಇಯೊನಿಸ್ ನೈಫಾಂಟೊಪೌಲೋಸ್ (3ನೇ L), ಬೆಳ್ಳಿ ಪದಕ ವಿಜೇತರಾದ ತಿಮೊಥಿ ಅಡಾಲ್ಫ್ (2ನೇ L) ಮತ್ತು ಅವರ ಮಾರ್ಗದರ್ಶಿ ಚಾರ್ಲ್ಸ್ ರೆನಾರ್ಡ್ (1ನೇ L), ಕಂಚಿನ ಪದಕ ವಿಜೇತರಾದ ಡಿ ಡೊಂಗ್‌ಡಾಂಗ್ (1 ನೇ R) ಮತ್ತು ಅವರ ಮಾರ್ಗದರ್ಶಿ ಚೀನಾದ ಲಿಯಾನ್ ಜಿಯಾಗೆಂಗ್ ಅವರು ಪ್ಯಾರಾ ಅಥ್ಲೆಟಿಕ್ಸ್‌ನ ಪುರುಷರ 100m T 11 ಈವೆಂಟ್‌ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ಯಾರಿಸ್ 2024 ಪ್ಯಾರಾಲಿಂಪಿಕ್ ಗೇಮ್ಸ್



ಪ್ಯಾರಿಸ್ 2024 ಪ್ಯಾರಾಲಿಂಪಿಕ್‌ನಲ್ಲಿ ಪ್ಯಾರಾ ಅಥ್ಲೆಟಿಕ್ಸ್‌ನ ಮಹಿಳೆಯರ 400 ಮೀಟರ್ ಟಿ54 ಈವೆಂಟ್‌ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಬೆಲ್ಜಿಯಂನ ಚಿನ್ನದ ಪದಕ ವಿಜೇತೆ ಲಿಯಾ ಬೇಕುಲಾ (ಸಿ), ಸ್ವಿಟ್ಜರ್ಲೆಂಡ್‌ನ ಬೆಳ್ಳಿ ಪದಕ ವಿಜೇತೆ ಮ್ಯಾನುಯೆಲಾ ಸ್ಕೇರ್ (ಎಲ್) ಮತ್ತು ಕಂಚಿನ ಪದಕ ವಿಜೇತ ಚೀನಾದ ಝೌ ಝೌಕಿಯಾನ್ ಪೋಸ್ ನೀಡಿದರು.

# ಪಶ್ಚಿಮ ದಂಡೆಯಲ್ಲಿ ಇಸ್ರೇಲಿ ಸೇನೆಯಿಂದ 6 ಪ್ಯಾಲೆಸ್ತೀನಿಯರ ಹತ್ಯೆ




**ಇಸ್ರೇಲ್, ಸೆ. 06 :** ಪಶ್ಚಿಮ ದಂಡೆಯ ತುಬಾಸ್ ನಗರದಲ್ಲಿ ಇಸ್ರೇಲಿ ಪಡೆಗಳು ಆರು ಪ್ಯಾಲೆಸ್ತೀನೀಯರನ್ನು ಹತ್ಯೆಗೈದಿವೆ ಎಂದು ಪ್ಯಾಲೆಸ್ತೀನ್ ವೈದ್ಯಕೀಯ ಮತ್ತು ಭದ್ರತಾ ಮೂಲಗಳು ತಿಳಿಸಿವೆ ವಾಯವ್ಯ ಪಶ್ಚಿಮ ದಂಡೆಯಲ್ಲಿರುವ ಟುಬಾಸ್‌ನಲ್ಲಿ ತಮ್ಮ ವಾಹನವನ್ನು ಗುರಿಯಾಗಿಸಿಕೊಂಡು ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಐವರು ಪ್ಯಾಲೆಸ್ತೀನಿಯರು ಸಾವನ್ನಪ್ಪಿದ್ದಾರೆ ಎಂದು ಫೆಲೆಸ್ತೀನ್ ಆರೋಗ್ಯ ಸಚಿವಾಲಯ ಗುರುವಾರ ವರದಿ ಮಾಡಿದೆ.

ತುಬಾಸ್‌ನ ದಕ್ಷಿಣದ ಫರಾ ಶಿಬಿರದಲ್ಲಿ ಆರನೇ ವ್ಯಕ್ತಿಯನ್ನು ಇಸ್ರೇಲಿ ಪಡೆಗಳು ಗುಂಡಿಕ್ಕಿ ಕೊಂದಿವೆ ಎಂದು ಪ್ಯಾಲೆಸ್ತೀನ್ ರೆಡ್ ಕ್ರೆಸೆಂಟ್ ಸೊಸೈಟಿ ಹೇಳಿದೆ, ಸೇನೆಯು ಬಲಿಪಶುವನ್ನು ತಲುಪಲು ಹಲವಾರು ಗಂಟೆಗಳ ಕಾಲ ವಿಳಂಬ ಮಾಡಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಇಸ್ರೇಲ್ ರಕ್ಷಣಾ ಪಡೆಗಳು (ಐಡಿಎಫ್) ಗುರುವಾರ ಮುಂಜಾನೆ ಫರಾ ಶಿಬಿರದಲ್ಲಿ ಡ್ರೋನ್ ದಾಳಿ ಮತ್ತು ತುಬಾಸ್‌ನಲ್ಲಿ ಇನ್ನೂ ಮೂರು ದಾಳಿಗಳನ್ನು ನಡೆಸಿದೆ ಎಂದು ಹೇಳಿದೆ. ದಾಳಿಯ ಸಮಯದಲ್ಲಿ ಸೈನಿಕರ ಮೇಲೆ ಗುಂಡು ಹಾರಿಸುತ್ತಿದ್ದ ಮತ್ತು ಸ್ಫೋಟಕ ಸಾಧನಗಳನ್ನು ಎಸೆಯುತ್ತಿದ್ದ ಪ್ಯಾಲೆಸ್ತೀನ್ ಬಂದೂಕುಧಾರಿಗಳನ್ನು ಗುರಿಯಾಗಿಸಿಕೊಂಡು ಈ ದಾಳಿಗಳು ನಡೆದಿವೆ ಎಂದು ಐಡಿಎಫ್ ಹೇಳಿದೆ.

ಇಸ್ರೇಲಿ ದಾಳಿಗಳು ಫರಾ ಶಿಬಿರದಲ್ಲಿನ ಮೂಲಸೌಕರ್ಯ ಮತ್ತು ಸೇವೆಗಳಿಗೆ ವ್ಯಾಪಕ ಹಾನಿಯನ್ನುಂಟು ಮಾಡಿವೆ ಎಂದು ತುಬಾಸ್ ಗವರ್ನರ್ ಅಹ್ಮದ್ ಅಲ್-ಅಸಾದ್ ಕ್ಸಿನ್ಹುವಾಗೆ ತಿಳಿಸಿದ್ದಾರೆ. ಜೆನಿನ್‌ನಲ್ಲಿ, ಇಸ್ರೇಲ್ ಪಡೆಗಳು ಸತತ ಒಂಬತ್ತನೇ ದಿನವೂ ಕಾರ್ಯಾಚರಣೆಯನ್ನು ಮುಂದುವರಿಸಿದವು. ನಡೆಯುತ್ತಿರುವ ದಾಳಿಗಳು ಸ್ಥಳೀಯ ಮೂಲ ಸೌಕರ್ಯಗಳನ್ನು ತೀವ್ರವಾಗಿ ಹಾನಿಗೊಳಿಸಿವೆ ಎಂದು ಮೇಯರ್ ನಿಡಾಲ್ ಒಬೇದಿ ಹೇಳಿದ್ದಾರೆ.

# ಡೈಮಂಡ್‌ಲೀಗ್: ಫೈನಲ್‌ಗೆ ಚೋಪ್ರಾ




**ನವದೆಹಲಿ, ಸೆ. 06 :** ಭಾರತದ ಜಾವೆಲಿನ್ ಥ್ರೋ ಅಥ್ಲೀಟ್ ನೀರಜ್ ಚೋಪ್ರಾ ಅವರು ಬ್ರಸೆಲ್ಸ್‌ನಲ್ಲಿ ನಡೆಯಲಿರುವ ಡೈಮಂಡ್ ಲೀಗ್ ಕೂಟದ ಫೈನಲ್‌ಗೆ ಅರ್ಹತೆ ಗಳಿಸಿದ್ದಾರೆ. 14 ಸುತ್ತುಗಳ ಲೀಗ್‌ನಲ್ಲಿ ನೀರಜ್ ನಾಲ್ಕನೇ ಸ್ಥಾನ ಪಡೆದಿದ್ದಾರೆ. ಒಟ್ಟು 14 ಅಂಕಗಳನ್ನೂ ಗಳಿಸಿದ್ದಾರೆ. ದೋಹಾ ಮತ್ತು ಲೂಸಾನ್ ಲಗ್‌ಗಳಲ್ಲಿ ಅವರು ಎರಡನೇ ಸ್ಥಾನ ಪಡೆದಿದ್ದರು.

ಗುರುವಾರ ಜ್ಯೂರಿಕ್‌ನಲ್ಲಿ ನಡೆದ ಕೊನೆಯ ಸುತ್ತಿನಲ್ಲಿ ಅವರು ಭಾಗವಹಿಸಲಿಲ್ಲ. ಗ್ರೆನೆಡಾ ಆಯಂಡರ್ಸನ್ ಪೀಟರ್ಸ್ ಮತ್ತು ಜರ್ಮನಿಯ ಜೂಲಿಯನ್ ವೆಬರ್ ಅವರು ಕ್ರಮವಾಗಿ 29 ಮತ್ತು 21 ಅಂಕ ಗಳಿಸಿದ್ದಾರೆ. ಅದರೊಂದಿಗೆ ಮೊದಲ ಹಾಗೂ ಎರಡನೇ ಸ್ಥಾನ ಪಡೆದಿದ್ದಾರೆ. ನೀರಜ್ ಅವರಿಗಿಂತ ಎರಡು ಅಂಕ ಹೆಚ್ಚು ಗಳಿಸಿರುವ ಜೆಕ್ ಗಣರಾಜ್ಯದ ಜೇಕಬ್ ವಾಡ್ಲೆಚ ಮೂರನೇ ಸ್ಥಾನದಲ್ಲಿದ್ದಾರೆ.

ನೀರಜ್ ಅವರು 2020ರ ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಚಿನ್ನ ಮತ್ತು ಈ ವರ್ಷ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಬೆಳ್ಳಿ ಪದಕ ಜಯಿಸಿದ್ದರು. ಡೈಮಂಡ್ ಲೀಗ್‌ನಲ್ಲಿ ಅವರು ಈ ಹಿಂದೆ ಚಿನ್ನ (2022) ಹಾಗೂ ಬೆಳ್ಳಿ (2023) ಜಯಿಸಿದ್ದಾರೆ. ಈ ಬಾರಿಯೂ ಪದಕ ಜಯಿಸುವ ಛಲದಲ್ಲಿದ್ದಾರೆ. ಈ ಕೂಟದ ನಂತರ ಅವರು ತಮ್ಮ ತೊಡೆಯ ಸ್ನಾಯುವಿನ ಗಾಯಕ್ಕೆ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು ತೆರಳುವ ಸಾಧ್ಯತೆ

# ಪ್ಯಾರಾಲಿಂಪಿಕ್ಸ್ ಜೂಡೋ: ಕಂಚಿನ ಪದಕ ಗೆದ್ದ ಭಾರತದ ಮೊದಲ ಆಟಗಾರ ಕಪಿಲ್ ಪರ್ಮಾರ್



**ನವದೆಹಲಿ, ಸೆ. 06 :** ಅಡೆತಡೆಗಳು ಮತ್ತು ಹಣಕಾಸಿನ ನಿರ್ಬಂಧಗಳ ಹೊರತಾಗಿಯೂ, ಕಪಿಲ್ ಜೂಡೋವನ್ನು ಬಿಡಲಿಲ್ಲ. ಪ್ಯಾರಿಸ್‌ನಲ್ಲಿ ನಡೆದ ಪ್ಲೇ ಆಫ್‌ನಲ್ಲಿ ಬ್ರೆಜಿಲ್ನ ಎಲಿಯೆಲ್ಟನ್ ಡಿ ಒಲಿವೇರಾ ಅವರನ್ನು ಸೋಲಿಸಿದ ನಂತರ ಪುರುಷರ -60 ಕೆಜಿ (ಜೆ 1) ನಲ್ಲಿ ಕಂಚಿನ ಪದಕ ಗೆಲ್ಲುವ ಮೂಲಕ 24 ವರ್ಷದ ಕಪಿಲ್ ಜೂಡೋದಲ್ಲಿ ದೇಶದ ಮೊದಲ ಪ್ಯಾರಾಲಿಂಪಿಕ್ಸ್ ಪದಕ ವಿಜೇತರಾದರು. ಪ್ಯಾರಾ ಜೂಡೋದಲ್ಲಿ ಜೆ 1 ವರ್ಗವು ಕಡಿಮೆ ದೃಷ್ಟಿ ಚಟುವಟಿಕೆಯಿಂದ ಬಳಲುತ್ತಿರುವ ಕ್ರೀಡಾಪಟುಗಳಿಗೆ. ಈ ವಿಭಾಗದ ಕ್ರೀಡಾಪಟುಗಳು ಸ್ಪರ್ಧೆಯ ಮೊದಲು, ಸಮಯದಲ್ಲಿ ಮತ್ತು ನಂತರ ಮಾರ್ಗದರ್ಶಿ ಬೆಂಬಲದ ಅಗತ್ಯವಿರಬಹುದು ಎಂದು ಸೂಚಿಸಲು ಕೆಂಪು ವೃತ್ತಗಳನ್ನು ಧರಿಸುತ್ತಾರೆ.

ಕಪಿಲ್ ಚಿನ್ನ ಗೆಲ್ಲುವ ಫೇವರಿಟ್ ಆಗಿದ್ದರು ಆದರೆ ಅವರು ಸೆಮಿಫೈನಲ್ ಪಂದ್ಯದಲ್ಲಿ ಇರಾನ್ನ ಸೈಯದ್ ಮೀಸಮ್ ಬನಿತಾಬಾ ಖೋರ್ರಾಮ್ ಅಬಾದಿ ವಿರುದ್ಧ 0-10 ಅಂತರದಿಂದ ಸೋತರು. ಇದಕ್ಕೂ ಮುನ್ನ ಕ್ವಾರ್ಟರ್ ಫೈನಲ್ನಲ್ಲಿ ಅವರು ವೆನೆಜುವೆಲಾದ ಮಾರ್ಕೋಸ್ ಡೆನ್ನಿಸ್ ಬ್ಲಾಂಕೊ ಅವರನ್ನು 10-0 ಅಂತರದಿಂದ ಸೋಲಿಸಿದ್ದರು. ತಮ್ಮ ಎರಡೂ ಗೆಲುವುಗಳಲ್ಲಿ, ಕಪಿಲ್ ತಮ್ಮ ಎದುರಾಳಿಗಳನ್ನು ಇಪ್ಪನ್ ಮೂಲಕ ಸೋಲಿಸಿದರು.

# ಪ್ಯಾರಾಲಿಂಪಿಕ್ಸ್ ಸಮಾರೋಪ ಸಮಾರಂಭ ಭಾರತದ ಧ್ವಜಧಾರಿಗಳ ಆಯ್ಕೆ

**ಪ್ಯಾರಿಸ್, ಸೆ. 06 :** ಪ್ಯಾರಾಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ವಿಜೇತ ಬಿಲ್ಲುಗಾರ ಹರ್ವಿಂದರ್ ಸಿಂಗ್ ಹಾಗೂ ಎರಡು ಪದಕ ಜಯಿಸಿದ ಮೊದಲ ಮಹಿಳಾ ಕ್ರೀಡಾಪಟುವಾಗಿ ಇತಿಹಾಸ ನಿರ್ಮಿಸಿದ್ದ ಓಟಗಾರ್ತಿ ಪ್ರೀತಿ ಪಾಲ್‌ರನ್ನು ರವಿವಾರ ನಡೆಯಲಿರುವ ಪ್ಯಾರಿಸ್ ಪ್ಯಾರಾಲಿಂಪಿಕ್ ಗೇಮ್ಸ್ ನ ಸಮಾರೋಪ ಸಮಾರಂಭದಲ್ಲಿ ಧ್ವಜಧಾರಿಗಳಾಗಿ ಹೆಸರಿಸಲಾಗಿದೆ.

ಹರ್ವಿಂದರ್ ಪ್ಯಾರಾಲಿಂಪಿಕ್ಸ್ ನಲ್ಲಿ ಚಿನ್ನದ ಪದಕ ಜಯಿಸಿದ ಭಾರತದ ಮೊತ್ತಮೊದಲ ಬಿಲ್ಲುಗಾರನಾಗಿ ಇತಿಹಾಸ ನಿರ್ಮಿಸಿದ್ದಾರೆ. 2021ರಲ್ಲಿ ಹರ್ವಿಂದರ್ ಕಂಚು ಜಯಿಸಿದ್ದರು. ಭಾರತದ ಪರ ಚಿನ್ನದ ಪದಕ ಜಯಿಸಿ ನನ್ನ ಕನಸು ನನಸಾಗಿದೆ. ಇದೀಗ ಸಮಾರೋಪ ಸಮಾರಂಭದಲ್ಲಿ ಧ್ವಜಧಾರಿಯಾಗಿರುವುದು ದೊಡ್ಡ ಗೌರವ. ನನ್ನ ಮೇಲೆ ನಂಬಿಕೆ ಇಟ್ಟ ಪ್ರತಿಯೊಬ್ಬರ ಗೆಲುವು 23ರ ಹರೆಯದ ಪ್ರೀತಿ ಅವರು ವೈಯಕ್ತಿಕ ಶ್ರೇಷ್ಠ ಸಮಯದಲ್ಲಿ(14.21 ಹಾಗೂ 30.01 ಸೆ.)ಮಹಿಳೆಯರ ಟಿ35 100 ಮೀ. ಹಾಗೂ 200 ಮೀ. ಓಟಗಳಲ್ಲಿ ಕಂಚಿನ ಪದಕಗಳನ್ನು ಜಯಿಸಿ ಇತಿಹಾಸ ನಿರ್ಮಿಸಿದ್ದಾರೆ.

ಧ್ವಜಧಾರಿಯಾಗಿ ಭಾರತವನ್ನು ಪ್ರತಿನಿಧಿಸುವುದು ದೊಡ್ಡ ಗೌರವ. ಈ ಕ್ಷಣ ನನಗಷ್ಟೇ ಅಲ್ಲ, ಇದು ನಮ್ಮ ರಾಷ್ಟ್ರವನ್ನು ಹೆಮ್ಮೆಪಡುವಂತೆ ಮಾಡಲು ಶಕ್ತಿಮೀರಿ ಪ್ರಯತ್ನಿಸಿರುವ ಪ್ರತಿಯೊಬ್ಬ ಅಥ್ಲೀಟ್ ಗಳ ಕ್ಷಣವಾಗಿದೆ. ಸಮಾರೋಪ ಸಮಾರಂಭದಲ್ಲಿ ನಮ್ಮ ಅದ್ಭುತ ತಂಡವನ್ನು ಮುನ್ನಡೆಸಲು ನಾನು ರೋಮಾಂಚನಗೊಂಡಿದ್ದೇನೆ ಎಂದು ಉತ್ತರಪ್ರದೇಶದ ಅಥ್ಲೀಟ್ ಪ್ರೀತಿ ಹೇಳಿದ್ದಾರೆ.